ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೨

# ಪಟ್ಟಿ – ೦೯

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೈದನೇ ಅಧಿವೇಶನ**

**ಸೋಮವಾರ, ದಿನಾಂಕ : ೧೭ನೇ ಮಾರ್ಚ್, ೨೦೨೫**

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ದಾವಣಗೆರೆ ಜಿಲ್ಲೆಯಲ್ಲಿರುವ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೯ (೧೧೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ಸರ್ಕಾರಿ ಜಿಲ್ಲಾ ಆಸ್ಪತ್ರೆಗಳೆಷ್ಟು; ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳೆಷ್ಟು ;

(ಆ) ಇರುವಂತಹ ಸರ್ಕಾರಿ ಆಸ್ಪತ್ರೆಗಳಿಗೆ ಒದಗಿಸಲಾಗುತ್ತಿರುವ ಸೌಲಭ್ಯ/ ಸವಲತ್ತುಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಇರುವಂತಹ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಸಿಬ್ಬಂದಿಗಳೆಷ್ಟು ; ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಪ್ರಸ್ತುತ ಖಾಲಿ ಇರುವ ವೈದ್ಯರು ತಜ್ಞ ವೈದ್ಯರು ಹಾಗೂ ವೈದ್ಯೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಕ್ರಮ ವಹಿಸಲಾಗಿದೆಯೇ ? (ಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದ ಇಂಧನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೦ (೧೧೩೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ಇಂಧನ ಇಲಾಖೆಗೆ ಅವಶ್ಯವಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳು ಅತ್ಯವಶ್ಯಕವಾಗಿರುವುದರಿಂದ ಖಾಲಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಅವಶ್ಯವಿರುವ ಇಂಜಿನಿಯರ್ ಹುದ್ದೆಗಳನ್ನು ಸ್ಥಳೀಯವಾಗಿ ಲಭ್ಯವಿರುವ ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಚಿಂತನೆ ಸರ್ಕಾರ ನಡೆಸಿದೆಯೇ ; ಹಾಗಿದ್ದಲ್ಲಿ, ಮಾಹಿತಿ ಒದಗಿಸುವುದು ?

## ರಾಜ್ಯದ ಗ್ರಾಮೀಣ ಭಾಗದ ಮಹಿಳೆಯರು, ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೧ (೧೦೮೪) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಭಾಗದ ಮಹಿಳೆಯರು, ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡುವ ನಿಟ್ಟಿನಲ್ಲಿ ಉದ್ಯೋಗ ಕ್ಷೇತ್ರದ ಬೇಡಿಕೆಗಳಿಗೆ ತಕ್ಕಂತೆ ಅಗತ್ಯ ಕೌಶಲ್ಯಗಳನ್ನು ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಸ್ಕಿಲ್ ಲೋಕಲ್, ವರ್ಕ್ ಗ್ಲೋಬಲ್ ಎನ್ನುವ ರಾಜ್ಯದ ಸರ್ಕಾರದ ಸೂತ್ರ ಕಾರ್ಯಗತಗೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಆಗಿರುವ ಪ್ರಗತಿಗಳೇನು ?

## ಸಾಮಾಜಿಕ ಹೊರಗುಳಿಯುವಿಕೆ ಮತ್ತು ಒಳಗೊಳ್ಳುವಿಕೆ ಅಧ್ಯಯನ ಕೇಂದ್ರದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭೨ (೧೯೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯು.ಜಿ.ಸಿ ಪ್ರಾಯೋಜಿಸಿರುವ ಸಾಮಾಜಿಕ ಹೊರಗುಳಿಯುವಿಕೆ ಮತ್ತು ಒಳಗೊಳ್ಳುವಿಕೆ ಅಧ್ಯಯನ ಕೇಂದ್ರಗಳು ರಾಜ್ಯದ ಎಷ್ಟು ವಿಶ್ವವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ;

(ಆ) ಈ ಕೇಂದ್ರಗಳ ಪರಿನಿಯಮಾವಳಿಗಳನ್ನು (Statve) ಸರ್ಕಾರ ಅಂಗೀಕರಿಸಿದೆಯೇ ; ಇಲ್ಲವಾದರೆ ಕಾರಣವೇನು ;

(ಇ) ಇಲ್ಲಿನ ಬೋಧಕ ಸಿಬ್ಬಂದಿಗಳನ್ನು ವೇತನ ಅನುದಾನಕ್ಕೆ ಒಳಪಡಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಸರ್ಕಾರದ ವತಿಯಿಂದ ಉದ್ಯೋಗ ಮೇಳವನ್ನು ಏರ್ಪಡಿಸಿದೆಯೇ ? (ಮಾಹಿತಿ ನೀಡುವುದು)

## ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸ್ಟೈಫಂಡ್ ಪಾವತಿಸುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೩ (೧೦೨೩) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಇವುಗಳಲ್ಲಿ ಸ್ನಾತಕೋತ್ತರ ಪದವಿ ವಿಭಾಗ ಹೊಂದಿರುವ ಕಾಲೇಜುಗಳ ಸಂಖ್ಯೆ ಎಷ್ಟು ಹಾಗೂ ಯಾವ ಯಾವ ಸ್ನಾತಕೋತ್ತರ

ಕೋರ್ಸ್‌ಗಳು ಹೊಂದಿವೆ ; (ಕಾಲೇಜುವಾರು ಸಂಪೂರ್ಣ ವಿವರ ನೀಡುವುದು)

(ಇ) ಸ್ನಾತಕೋತ್ತರ ಪದವಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಮಾಸಿಕ ನೀಡುತ್ತಿರುವ ಸ್ಟೈಫಂಡರಿ ಮೊತ್ತ ಎಷ್ಟು ; ಖಾಸಗಿ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಸದರಿ ಸ್ಟೈಫಂಡರಿ ಮೊತ್ತವನ್ನು ಪಾವತಿಸದೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದಲ್ಲಿ, ಈ ಸಂಬಂಧ ಸರ್ಕಾರವು ವಿದ್ಯಾರ್ಥಿಗಳಿಗೆ ಪಾವತಿಸುವ ಸ್ಟೈಫಂಡರಿ ಮೊತ್ತವನ್ನು ಖಾಸಗಿ ಕಾಲೇಜುಗಳಿಂದ ಪಡೆದು ಸ್ಕಾಲರ್‌ಶಿಪ್ ಪೋರ್ಟ್‌ಲ್ ಮೂಲಕ ನೇರವಾಗಿ ವಿದ್ಯಾರ್ಥಿಗಳಿಗೆ ಪಾವತಿಸಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಕುವೆಂಪು ವಿಶ್ವವಿದ್ಯಾಲಯದ ದೂರ ಶಿಕ್ಷಣದ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೪ (೧೦೨೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುವೆಂಪು ವಿಶ್ವವಿದ್ಯಾಲಯದಿಂದ ನಡೆಸಲಾಗುತ್ತಿರುವ ದೂರ ಶಿಕ್ಷಣ ಕೋರ್ಸ್‌ಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಆ) ಸದರಿ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಡೆಯುತ್ತಿದೆಯೇ ; ಹೌದಾದಲ್ಲಿ, ಯಾವ ಯಾವ ಏಜೆನ್ಸಿಗಳ ಮೂಲಕ ಪ್ರವೇಶ ನಡೆಯುತ್ತಿದೆ ;

(ಇ) ಸರ್ಕಾರ ಹಾಗೂ ಯು.ಜಿ.ಸಿ ಆದೇಶಗಳನ್ವಯ ಸದರಿ ವಿಶ್ವವಿದ್ಯಾನಿಲಯದಲ್ಲಿ ದೂರ ಶಿಕ್ಷಣ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ನಿರ್ಬಂಧವಿರುವುದು ನಿಜವೇ ;

(ಈ) ದೂರ ಶಿಕ್ಷಣ ಪ್ರವೇಶ ನಿರ್ಬಂಧವಿದ್ದರು ಸಹ MLS ಮೂಲಕ ತಂತ್ರಾಂಶ ಅಳವಡಿಸುವ ಕಾರಣವೇನು ; (ವಿವರ ನೀಡುವುದು)

(ಉ) MLS ಗುತ್ತಿಗೆದಾರರೊಂದಿಗೆ ವಿಶ್ವವಿದ್ಯಾಲಯವು ಮಾಡಿಕೊಂಡ ಕರಾರು ಒಪ್ಪಂದಗಳೇನು ಹಾಗೂ ಗುತ್ತಿಗೆ ಮೊತ್ತ ಎಷ್ಟು ? (ಕರಾರು ಒಪ್ಪಂದ ಪ್ರತಿ ಒದಗಿಸುವುದು)

## ಅರಣ್ಯ ಭೂಮಿ ಒತ್ತುವರಿಯನ್ನು ಸಕ್ರಮಗೊಳಿಸುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೫ (೧೦೨೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯಲ್ಲಿ ದಿನಾಂಕ : ೨೭.೦೪. ೧೯೭೮ರ ಪೂರ್ವದ ೩ ಎಕರೆವರೆಗಿನ ಎಷ್ಟು ಅರಣ್ಯ ಭೂಮಿ ಒತ್ತುವರಿ ಸಕ್ರಮ ಪ್ರಕರಣಗಳನ್ನು ಗುರುತಿಸಲಾಗಿದೆ ;

(ಆ) ಈ ಪೈಕಿ ಎಷ್ಟು ಪ್ರಕರಣಗಳಿಗೆ ಸಂಬಂಧಿಸಿದಂತೆ ದಿನಾಂಕ:೦೫.೦೫.೧೯೭೮ರ ಸರ್ಕಾರಿ ಆದೇಶದನ್ವಯ ಸಕ್ರಮಗೊಳಿಸಿ ಹಕ್ಕುಪತ್ರ ಪಟ್ಟಿ ನೀಡಲಾಗಿದೆ ;

(ಇ) ಹಕ್ಕುಪತ್ರ ಪಟ್ಟಿ ವಿತರಣೆ ವಿಳಂಬಕ್ಕೆ ಕಾರಣವೇನು ಹಾಗೂ ಯಾವಾಗ ಪಟ್ಟಿ ವಿತರಿಸಲಾಗುವುದು ? (ವಿವರ ನೀಡುವುದು)

## ಟಿ.ಸಿ.ಹೆಚ್. ವಿದ್ಯಾರ್ಹತೆ ಪಡೆದ ಪಿ.ಎಸ್.ಟಿ ಶಿಕ್ಷಕರುಗಳಿಗೆ ಪದೋನ್ನತಿ ನೀಡುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೬ (೧೦೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ನಿಗದಿಪಡಿಸಿದ್ದ ಟಿ.ಸಿ.ಹೆಚ್ ವಿದ್ಯಾರ್ಹತೆ ಪಡೆದು ಬಹಳ ವರ್ಷಗಳಿಂದ ಸೇವಾ ಹಿರಿತನ ಪದವಿ ವಿದ್ಯಾರ್ಹತೆ ಪಡೆದಿರುವ

ಪಿ.ಎಸ್.ಟಿ ಶಿಕ್ಷಕರುಗಳಿಗೆ ಪ್ರೌಢ ಶಾಲಾ ಶಿಕ್ಷಕರ ಹುದ್ದೆಗೆ ಪದೋನ್ನತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಇಂತಹ ಶಿಕ್ಷಕರುಗಳು ಏಳನೇ ತರಗತಿವರೆಗೆ ಪಾಠ ಬೋಧಿಸಲು ನಿರ್ಬಂಧ ಹೇರಿರುವುದು ನಿಜವೆ ; ಹೌದಾದಲ್ಲಿ ಇದಕ್ಕೆ ಕಾರಣಗಳೇನು ;

(ಇ) ಈ ರೀತಿಯ ನಿಯಮ ರೂಪಿಸಲು ಸರ್ಕಾರವು ಶಿಕ್ಷಣ ತಜ್ಞರ ಅಭಿಪ್ರಾಯ ಪಡೆದಿದೆಯೇ ? (ವಿವರ ನೀಡುವುದು)

## ಪ್ರಾಂಶುಪಾಲರ ನೇಮಕಾತಿ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೭ (೧೦೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ನೇರ ನೇಮಕಾತಿ ಪ್ರಕ್ರಿಯೆ ३೧/೦೧/೨೦೨೫ಕ್ಕೆ ಮುಗಿಯಬೇಕಿದ್ದು ಇದುವರೆಗೂ ಯಾವುದೇ ಅಧಿಸೂಚನೆ ಹೊರಡಿಸದಿರಲು ಕಾರಣವೇನು/ಅಧಿಸೂಚನೆ ಹೊರಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದರೆ ಯಾವ ಹಂತದಲ್ಲಿದೆ ;

(ಆ) ೨೦೨೪–೨೫ನೇ ಸಾಲಿನಲ್ಲಿ ಪ್ರಾಂಶುಪಾಲರು ಮತ್ತು ಉಪನ್ಯಾಸಕರ ವರ್ಗಾವಣೆ ಕೌನ್ಸಿಲಿಂಗ್‌ನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ४೦ಕ್ಕಿಂತ ಕಡಿಮೆ ಇರುವ ಕಾಲೇಜುಗಳ ಖಾಲಿ ಹುದ್ದೆಗಳನ್ನು ವರ್ಗಾವಣೆ ಕೌನ್ಸಿಲಿಂಗ್‌ನಲ್ಲಿ ತೋರಿಸದೆ ಇರಲು ಕಾರಣವೇನು ; (ಇದಕ್ಕೆ ಸಂಬಂಧಿಸಿದ ಸರ್ಕಾರದ ಆದೇಶ ಒದಗಿಸುವುದು)

(ಇ) ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಉಪನ್ಯಾಸಕರ ೨೦೨೫–೨೬ನೇ ಸಾಲಿನ ವರ್ಗಾವಣೆ ಪ್ರಕ್ರಿಯೆಗಳನ್ನು ಯಾವಾಗ ನಡೆಸಲಾಗುವುದು ಮತ್ತು ಖಾಲಿ ಇರುವ ಹುದ್ದೆಗಳನ್ನು ಪ್ರಕಟಿಸಲು ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಇರಬೇಕು ? (ವಿವರ/ಸರ್ಕಾರದ ಆದೇಶ ಒದಗಿಸುವುದು)

## ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಮುಂಬಡ್ತಿ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೮ (೧೦೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಾಗಿ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಮುಂಬಡ್ತಿ ನೀಡಲು ಇರುವ ವೃಂದ ಮತ್ತು ನೇಮಕಾತಿ ನಿಯಮಗಳು ಯಾವುವು ?

## ವಿಶೇಷ ತರಬೇತಿ ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೯ (೧೦೪೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರಗಳಲ್ಲಿ ಪಿಯುಸಿ ಪಾಸಾದ ಯುವಕ/ಯುವತಿಯರಿಗೆ ವಿಶೇಷ ತರಬೇತಿಗಳನ್ನು ನೀಡಿ ಉದ್ಯೋಗ ಒದಗಿಸುವ ಯೋಜನೆ ಇದೆಯೇ ;

(ಆ) ಸರ್ಕಾರವು ರಾಜ್ಯದ ಯುವಕ/ಯುವತಿಯರಿಗೆ ಕೈಗಾರಿಕಾ ಉದ್ಯಮಗಳ ಉದ್ಯೋಗ ಪಡೆಯಲು ಅನುಕೂಲವಾಗುವಂತೆ, ಖಾಸಗಿ ಉದ್ಯಮಗಳೊಂದಿಗೆ ಒಪ್ಪಂದ ಮಾಡಿಕೊಳ್ಳುವ ಬಗ್ಗೆ ಸರ್ಕಾರದ ನಿಲುವೇನು ?

## ಐ.ಟಿ.ಐ. ಕಾಲೇಜು ಆರಂಭಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೦ (೧೦೫೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಸಿಂಧನೂರು ತಾಲ್ಲೂಕಿನಲ್ಲಿ ಐ.ಟಿ.ಐ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು ?

## ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವೇತನ ತಾರತಮ್ಯ ಸರಿಪಡಿಸುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೮೮೧ (೧೦೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೬ರ ನಂತರ ನೇಮಕಾತಿ ಹೊಂದಿರುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ಜಾರಿಯಾಗಿರುವ ಹೊಸ ಪಿಂಚಣಿ ಪದ್ಧತಿಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವೇತನ ತಾರತಮ್ಯ ಸರಿಪಡಿಸುವ ಸಂಬಂಧವಾಗಿ ಕುಮಾರನಾಯಕ ನೇತೃತ್ವದ ವರದಿಯ ಶಿಫಾರಸ್ಸಿನಂತೆ ಹಾಗೂ ಸರ್ಕಾರದ ಲಿಖಿತ ಭರವಸೆಯಂತೆ ಎರಡನೇ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲು ಕೈಗೊಂಡ ಕ್ರಮಗಳೇನು ; ವೇತನ ಬಡ್ತಿ ಮಂಜೂರು ಮಾಡಲು ನಿಗದಿಪಡಿಸಿದ ಕಾಲಮಿತಿ ಎಷ್ಟು ?

# ಐ.ಐ.ಟಿ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿ ಜಾರಿ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೮೮೨ (೧೦೨೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅನುದಾನಿತ ಐ.ಐ.ಟಿ. ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಜಾರಿ ಮಾಡಲಾಗಿದೆ ; (ವಿವರ ಮತ್ತು ಆದೇಶದ ಪ್ರತಿ ನೀಡುವುದು)

(ಆ) ಸದರಿಯವರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಂತೆ ಇದುವರೆಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಶ್ರೀ ಥಾಮಸ್ ವರದಿಯ ಶಿಫಾರಸ್ಸಿನಂತೆ ಸೇವಾ ನಿಯಮಗಳನ್ನು ರೂಪಿಸದಿರುವುದರಿಂದ ಸಾವಿರಾರು ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿದ್ದು, ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲಾ ಸೌಲಭ್ಯಗಳನ್ನು ನೀಡಲಾಗುವುದು ; (ವಿವರ ನೀಡುವುದು)

(ಈ) ೨೦೦೬ರ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣ ಸೌಲಭ್ಯವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿಯವರಿಗೆ ನಿವೃತ್ತಿ ನಂತರ ರಜೆ ನಗಧೀಕರಣವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುತ್ತದೆ ?

## ಅತಿಥಿ ಶಿಕ್ಷಕರು ಮತ್ತು ಅತಿಥಿ ಉಪನ್ಯಾಸಕರುಗಳ ತೊಂದರೆಗಳ ಬಗ್ಗೆ

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೮೮೩ (೩೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿ ಪೂರ್ವಕಾಲೇಜುಗಳಲ್ಲಿ ಅತಿಥಿ ಶಿಕ್ಷಕರಾಗಿ ಮತ್ತು ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅತಿಥಿ ಶಿಕ್ಷಕರಿಗೆ ಮತ್ತು ಅತಿಥಿ ಉಪನ್ಯಾಸಕರಿಗೆ ಸರ್ಕಾರ ನೀಡುತ್ತಿರುವ ವೇತನ ಎಷ್ಟು;

(ಇ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ಹಾಗೂ ಅತಿಥಿ ಉಪನ್ಯಾಸಕರಿಗೆ ಸರ್ಕಾರ ಪತ್ರಿ ತಿಂಗಳು ಸರಿಯಾಗಿ ವೇತನವನ್ನು ನೀಡುತ್ತಿಲ್ಲದಿರುವುದಕ್ಕೆ ಕಾರಣಗಳೇನು ಹಾಗೂ ಈ ನೌಕರರಿಗೆ ಇನ್ನು ನೀಡಬೇಕಾಗಿರುವ ಬಾಕಿ ವೇತನ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅನ್ನಭಾಗ್ಯ ಯೋಜನೆಯಲ್ಲಿ ನೇರ ನಗದು ವರ್ಗಾವಣೆ ಬಾಕಿಯಿರುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೮೮೪ (೧೦೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನ್ನಭಾಗ್ಯ ಯೋಜನೆ ಪ್ರಾರಂಭವಾದ ದಿನದಿಂದ ಅಂದರೆ ಜುಲೈ–೨೦೨೩ ರಿಂದ ಇಲ್ಲಿಯವರೆಗೆ ಫಲಾನುಭವಿಗಳಿಗೆ

ನೀಡಲಾದ ನಗದು ವರ್ಗಾವಣೆ ಎಷ್ಟು ; (ತಿಂಗಳುವಾರು ವಿವರ ನೀಡುವುದು)

(ಆ) ಇಲ್ಲಿಯವರೆಗೆ ಎಷ್ಟು ತಿಂಗಳ ನಗದು ವರ್ಗಾವಣೆ ಬಾಕಿಯಿರುತ್ತದೆ ; ಈ ತಿಂಗಳುಗಳ ನಗದು ವರ್ಗಾವಣೆ ಮಾಡದಿರಲು ಕಾರಣವೇನು ;

(ಇ) ಯಾವ ಕಾಲಮಿತಿಯಲ್ಲಿ ಬಾಕಿಯಿರುವ ನಗದನ್ನು ವರ್ಗಾವಣೆ ಮಾಡಲಾಗುವುದು ; ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಈ) ಯಾವ ತಿಂಗಳಿನಿಂದ ಪ್ರತಿ ಫಲಾನುಭವಿಗಳಿಗೆ ೧೦ ಕೆ.ಜಿ. ಅಕ್ಕಿಯನ್ನು ನೀಡಲಾಗುವುದು ; ಇದಕ್ಕಾಗಿ ಸರ್ಕಾರ ಮಾಡಿಕೊಂಡಿರುವ ಸಿದ್ಧತೆಗಳು ಏನು ?

## ಕೃಷಿ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ದುಬಾರಿಯಾಗಿರುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೮೮೫ (೧೦೮೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ಪಡೆಯಲು ಇದ್ದ ಯು.ಎನ್.ಐ.ಪಿ ಮತ್ತು ಶೀಘ್ರ ವಿದ್ಯುತ್ ಯೋಜನೆಗಳನ್ನು ರದ್ದುಗೊಳಿಸಲಾಗಿದೆಯೇ ; ರದ್ದುಗೊಳಿಸಲಾಗಿದ್ದರೆ ಕಾರಣಗಳೇನು ; ಈ ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕ ಪಡೆಯಲು ತಗಲುತ್ತಿದ್ದ ವೆಚ್ಚವೆಷ್ಟು ;

(ಆ) ಪ್ರಸ್ತುತ ಕೊರೆಸಲಾಗುವ ಕೃಷಿ ಕೊಳವೆ ಬಾವಿಗೆ ಯಾವ ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ ; ಇದಕ್ಕೆ ತಗಲುವ ವೆಚ್ಚವೆಷ್ಟು ;

(ಇ) ಯು.ಎನ್.ಐ.ಪಿ ರದ್ದತಿಯಾದ ನಂತರ ಕೃಷಿ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ಪಡೆಯುವುದು ದುಬಾರಿಯಾಗಿದ್ದು, ರೈತರಿಗೆ ಅನುಕೂಲ ಕಲ್ಪಿಸುವ ಸಲುವಾಗಿ ಮತ್ತೊಮ್ಮೆ ಸದರಿ ಯೋಜನೆಯನ್ನು ಜಾರಿಗೆ ತರಲಾಗುವುದೇ ; ಇಲ್ಲದೇ ಇದ್ದಲ್ಲಿ, ರೈತರಿಗೆ ಕಡಿಮೆ ವೆಚ್ಚದಲ್ಲಿ ವಿದ್ಯುತ್ ಸಂಪರ್ಕ ನೀಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳ ಎಂಪನೆಲ್ ನವೀಕರಣ ಸಂದರ್ಭದಲ್ಲಿ ಆಗಿರುವ ತೊಂದರೆ

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೮೮೬ (೧೦೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಯುಷ್ಮಾನ್ ಭಾರತ್ ಮತ್ತು ಇ.ಎಸ್.ಐ ಯೋಜನೆಗಳು ಎಂಪನೆಲ್ ಆಗಿರುವ ಖಾಸಗಿ ಆಸ್ಪತ್ರೆಗಳು ಎಷ್ಟು ;

(ಆ) ಖಾಸಗಿ ಆಸ್ಪತ್ರೆಗಳಿಗೆ ಪ್ರಸ್ತುತ ಫೈರ್ ಪರ್ಮಿಷನ್ ತೆಗೆದುಕೊಳ್ಳಲು ಇರುವ ಮಾನದಂಡಗಳೇನು ;

(ಇ) ಹಲವಾರು ವರ್ಷಗಳಿಂದ ಆಯುಷ್ಮಾನ್ ಭಾರತ್ ಮತ್ತು ಇ.ಎಸ್.ಐ ಯೋಜನೆಗಳ ಎಂಪನೆಲ್ ಆಗಿರುವ ಖಾಸಗಿ ಆಸ್ಪತ್ರೆಗಳು ಎಂಪನೆಲ್ ನವೀಕರಣದ ಸಂದರ್ಭದಲ್ಲಿ ಫೈರ್ ಪರ್ಮಿಷನ್ ಕಡ್ಡಾಯಗೊಳಿಸಿರುವುದರಿಂದ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಮಸ್ಯೆಯನ್ನು ಬಗೆಹರಿಸುವಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಆಸ್ಪತ್ರೆಗಳಿಗೆ ಫೈರ್ ಪರ್ಮಿಷನ್ ಕಡ್ಡಾಯಗೊಳಿಸಿರುವುದರಿಂದ ಮಾನದಂಡಗಳಲ್ಲಿ ಖಾಸಗಿ ಆಸ್ಪತ್ರೆ ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ವ್ಯತ್ಯಾಸವೇನಾದರು ಇದೆಯೇ ?

## ನಗರ ಪ್ರದೇಶಗಳಲ್ಲಿರುವ ನದಿಗಳಿಗೆ ಕೊಳಚೆ ನೀರು ಬಿಡುತ್ತಿರುವ ಕುರಿತು

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೮೮೭ (೧೦೨೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಪ್ರದೇಶಗಳಲ್ಲಿರುವ ನದಿಗಳಿಗೆ ಕೊಳಚೆ ನೀರನ್ನು ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದ ಎಷ್ಟು ನಗರಗಳಲ್ಲಿ ಎಸ್.ಟಿ.ಪಿ. ಪ್ಲಾಂಟ್‌ಗಳನ್ನು ಅಳವಡಿಸಲಾಗಿದೆ ;

(ಈ) ಎಸ್.ಟಿ.ಪಿ ಪ್ಲಾಂಟ್‌ಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಪರೀಕ್ಷಿಸಲು ಇರುವ ಮಾನದಂಡಗಳೇನು ;

(ಉ) ಕೊಳಚೆ ನೀರು ನದಿಗಳಿಗೆ ಸೇರುತ್ತಿರುವುದರಿಂದ ಜನರ ಆರೋಗ್ಯದ ಮೇಲೆ ಆಗುತ್ತಿರುವ ಗಂಭೀರ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಿಕ್ಷಕರ ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೮ (೧೦೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆಯೆಷ್ಟು ;

ಹಾಗೂ ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು; (ವಿಷಯವಾರು ಶಿಕ್ಷಕರ ಮಾಹಿತಿ ಒದಗಿಸುವುದು)

(ಆ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಸುಮಾರು ೧೧,೭೫೫ರ ಶಿಕ್ಷಕರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ಸರಿದೂಗಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಶಿಕ್ಷಕರ ಕೊರತೆಯಿರುವುದರಿಂದ ಗುಣಮಟ್ಟದ ಶಿಕ್ಷಣಕ್ಕೆ ತೊಂದರೆಯಾಗಿ ಎಸ್.ಎಸ್.ಎಲ್.ಸಿ ಫಲಿತಾಂಶ ಕಡಿಮೆಯಾಗುವುದಿಲ್ಲವೇ ;

(ಈ) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಪ್ರಸ್ತುತ ಎಷ್ಟು ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ ; ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಮಾಡುವ ಸಂಬಂಧವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಉ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಗಣಿತ ಮತ್ತು ವಿಜ್ಞಾನ ಬೋಧಿಸುವ ಶಿಕ್ಷಕರ ಹುದ್ದೆಗಳು ಶೇ.೬೫ ರಷ್ಟು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಜಿಲ್ಲಾ ಗ್ರಾಹಕ ನ್ಯಾಯಾಲಯದಲ್ಲಿ ಕಕ್ಷಿದಾರರಿಗೆ ನ್ಯಾಯದಾನ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೯ (೧೦೪೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಇತ್ಯರ್ಥ ಆಯೋಗ ಹಾಗೂ ಜಿಲ್ಲಾ ಗ್ರಾಹಕ ನ್ಯಾಯಾಲಯಗಳಲ್ಲಿ ಕಕ್ಷಿದಾರರಿಗೆ ನ್ಯಾಯದಾನ ವಿಳಂಬವಾಗುತ್ತಿರುವುದು ನಿಜವೇ ;

(ಆ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೂ ರಾಜ್ಯ ಆಯೋಗದಲ್ಲಿ ಹಾಗೂ ಜಿಲ್ಲಾ ವೇದಿಕೆಗಳಲ್ಲಿ ಗ್ರಾಹಕರಿಂದ ಎಷ್ಟು ದೂರಿನ ಅರ್ಜಿಗಳು ಬಂದಿದೆ ; ಇದರಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ;

(ಇ) ರಾಜ್ಯದಲ್ಲಿ ರಾಜ್ಯ ಗ್ರಾಹಕ ಆಯೋಗ ಮತ್ತು ಜಿಲ್ಲಾ ವೇದಿಕೆಗಳಲ್ಲಿ ಅಧ್ಯಕ್ಷರು ಹಾಗೂ ಸದಸ್ಯರ ಹುದ್ದೆಗಳು ಖಾಲಿ ಇದೆಯೇ ; ಇದ್ದಲ್ಲಿ, ಎಷ್ಟು ವರ್ಷಗಳಿಂದ ಖಾಲಿ ಉಳಿಸಿಕೊಳ್ಳಲಾಗಿದೆ ; ಇದಕ್ಕೆ ಇರುವ ಕಾರಣವಾದರೂ ಏನು ;

(ಈ) ಖಾಲಿ ಇರುವ ಹುದ್ದೆಗಳನ್ನು ಸಕಾಲದಲ್ಲಿ ಭರ್ತಿ ಮಾಡದಿಲ್ಲದಿರುವುದರಿಂದ ಗ್ರಾಹಕರ ದೂರುಗಳನ್ನು ವಿಲೇವಾರಿ ಮಾಡಲು ವಿಳಂಬವಾಗುತ್ತಿದ್ದು ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ?

## ರೋಗಿಗಳಿಗೆ ಉಚಿತ ಔಷಧ ದೊರುಕುತ್ತಿಲ್ಲದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೦ (೧೦೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉಚಿತ ಔಷಧ ದೊರಕುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; ಕಳೆದ ೩ ವರ್ಷದ ಅವಧಿಯಲ್ಲಿ ಔಷಧ ಖರೀದಿಗಾಗಿ ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ ;

(ಇ) ವೈದ್ಯರು ರೋಗಿಗಳಿಗೆ ಖಾಸಗಿ ಪ್ರಯೋಗಾಲಯಗಳಲ್ಲಿ ಪರೀಕ್ಷೆ ಹಾಗೂ ಔಷಧಿಗಳನ್ನು ಖರೀದಿಸಲು ಚೀಟಿಗಳನ್ನು ಬರೆದುಕೊಡಲು

ಸರ್ಕಾರ ನಿಯಮದಡಿಯಲ್ಲಿ ಅವಕಾಶ ಇದೆಯೇ ; ಈ ಪ್ರಕರಣದಡಿಯಲ್ಲಿ ಎಷ್ಟು ವೈದ್ಯರ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ ;

(ಈ) ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳವರಲ್ಲಿ ಹಣವಿಲ್ಲದೇ ಇರುವುದರಿಂದ ಸರ್ಕಾರಿ ಆಸ್ಪತ್ರೆಗಳಿಗೆ ಹೋಗಲು ಭಯ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ದಿಢೀರ್ ಭೇಟಿ ನೀಡಿ ಪರಿಶೀಲಿಸಲಾಗಿರುತ್ತದೆ ? (ಜಿಲ್ಲೆಗಳ ಮಾಹಿತಿ ಒದಗಿಸುವುದು)

## ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರಿ ಕನ್ನಡ ಪ್ರೌಢ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಕನ್ನಡ ಓದಲು ಬರುವುದಿಲ್ಲದ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೧ (೧೧೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರಿ ಕನ್ನಡ ಪ್ರೌಢ ಶಾಲೆಯಲ್ಲಿ ಓದುತ್ತಿರುವ ಸುಮಾರು ೭೦೦೦ ಮಕ್ಕಳು ಕನ್ನಡ ಓದಲು ಬರುವುದಿಲ್ಲ ಎನ್ನುವ ವರದಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಗೆ ಕಾರಣವೇನು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಕಾರಣದಿಂದವೆ ; (ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸರ್ಕಾರಿ ಕನ್ನಡ ಪ್ರೌಢ ಶಾಲೆಯಲ್ಲಿ ಓದುತ್ತಿರುವ ಎಷ್ಟು ಮಕ್ಕಳಿಗೆ ಕನ್ನಡ ಓದಲು ಬರುವುದಿಲ್ಲ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕನ್ನಡ ಶಾಲೆಗಳಲ್ಲಿ ಕನ್ನಡ ಓದಲು ಬರದೇ ಇರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆಯೇ ; ಹಾಗಿದ್ದಲ್ಲಿ, ಸದರಿ ಮಕ್ಕಳಿಗೆ ಕನ್ನಡ ಸರಿಯಾಗಿ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು ; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು ? (ಜಿಲ್ಲಾವಾರು ವಿವರ ನೀಡುವುದು)

## ಆಹಾರ ಸುರಕ್ಷತಾ ಗುಣಮಟ್ಟ ಇಲಾಖೆಯ ನೇಮಕಾತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೨ (೧೧೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಹಿರಿಯ/ಆರೋಗ್ಯ ನಿರೀಕ್ಷಣಾಧಿಕಾರಿಗಳ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ/ಆಹಾರ ಸುರಕ್ಷತಾ ಅಧಿಕಾರಿಗಳ ಸೇವೆಯು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಗೆ ಅವಶ್ಯವಾಗಿರುತ್ತದೆಯೇ ; ನೇಮಕಾತಿ ಆಗುವವರಿಗೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಆಹಾರ ಸುರಕ್ಷತಾ ಅಧಿಕಾರಿಗಳನ್ನು ಮುಂದುವರೆಸಲು ಅಡಚಣೆ ಇದೆಯೆ ; ಇದು ಸರ್ಕಾರಕ್ಕೆ ಆರ್ಥಿಕ ಹೊರೆಯಾಗುತ್ತದೆಯೇ ;

(ಆ) ನಿಯಮದಲ್ಲಿ ಐದು ವರ್ಷ ನಿಯೋಜನೆಗೆ ಅವಕಾಶವಿದ್ದು ದಿನಾಂಕ:೦೧/೦೩/೨೦೨೫ ರಂದು ಸಂಖ್ಯೆ ಎಫ್‌ಎಸ್‌ಎಸ್ ಎ/ಸಿ/೦೮/೨೦೨೪–೨೫ ಆದೇಶ ೨೧ ಆಹಾರ ಸುರಕ್ಷತಾ ಅಧಿಕಾರಿಗಳನ್ನು ಬಿಡುಗಡೆಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಪೂರ್ಣ ಇ–ಆಫೀಸ್ ಕಡತದ ನಕಲು ಪ್ರತಿ ಒದಗಿಸುವುದು ;

(ಇ) ಹಾಲಿ ಕಾರ್ಯಕಾರಿ ಆದೇಶದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ/ಆಹಾರ ಸುರಕ್ಷತಾ ಅಧಿಕಾರಿಗಳನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ವಿಲೀನಗೊಳಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ರೋಸ್ಟರ್ ಅನುಸರಿಸಲಾಗಿದೆಯೇ, ಮತ್ತು ಇವರಿಗೆ ಆಹಾರ ಸುರಕ್ಷತಾ ಅಧಿಕಾರಿ ಹುದ್ದೆಗೆ ನಿಗದಿಪಡಿಸಿರುವ ವೇತನ ನೀಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ಕಾರ್ಯಕಾರಿ ಆದೇಶದ ಅನ್ವಯ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ/ಆಹಾರ ಸುರಕ್ಷತಾ ಅಧಿಕಾರಿಗಳು ಯಾರ್‍ಯಾರು ; ಈ ಕಾರ್ಯಕಾರಿ ಆದೇಶಕ್ಕೆ ನಿಗದಿಪಡಿಸಿರುವ ಕಾಲಾವಧಿ ಎಷ್ಟು ; ಕಾರ್ಯಕಾರಿ ಆದೇಶದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ನಿಯೋಜನೆ ಅವಧಿ ಮುಗಿದಿದ್ದರೆ, ಮಾತೃ ಇಲಾಖೆಗೆ ಯಾವ ಕಾರಣಕ್ಕೆ ಬಿಡುಗಡೆಗೊಳಿಸಿರುವುದಿಲ್ಲ ;

(ಉ) ಇಲಾಖೆಯಲ್ಲಿ ಸಂಬಳ ಪಡೆಯುತ್ತಿರುವವರ ಹಾಗೂ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು ಸಂಪೂರ್ಣ ವಿವರ ನೀಡುವುದು)

(ಊ) ಆಹಾರ ಸುರಕ್ಷತಾ ವಿಭಾಗದಲ್ಲಿ ಲೋಕಾಯುಕ್ತ ಬಲೆಗೆ ಸಿಕ್ಕಿದ ಅಧಿಕಾರಿ ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ ಮತ್ತು ಪ್ರಸ್ತುತ ಪ್ರಕರಣಗಳು ಇದು ಯಾವ ಹಂತದಲ್ಲಿದೆ ?

## ಬ್ಯಾಕ್ ಲಾಗ್ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೩ (೧೧೨೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದ ದ್ವಿಮುಖ ನೀತಿಯಿಂದಾಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ನಡೆಸುವ ಕಾಲೇಜುಗಳಲ್ಲಿ ಬ್ಯಾಕ್ ಲಾಗ್

ಹುದ್ದೆಗಳು ಭರ್ತಿಯಾಗದೆ ಖಾಲಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಆ) ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಕಾಲೇಜು ಶಿಕ್ಷಣ ಇಲಾಖೆ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಅನುದಾನಿತ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಕಾರಣಗಳಿಂದ ಖಾಲಿಯಾದ ಹುದ್ದೆಗಳ ಭರ್ತಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಬ್ಯಾಕ್ ಲಾಗ್ ಹುದ್ದೆಗಳ ಭರ್ತಿಗೆ ಅನುಮತಿ ನೀಡಿದ ೫ ವರ್ಷಗಳ ನಂತರ ಉನ್ನತ ಶಿಕ್ಷಣ ಇಲಾಖೆ ೨೦೦೧ರ ನಿಯಮ ಉಲ್ಲೇಖಿಸಿದ್ದು, ೨೦೦೨, ೨೦೧೨ರಲ್ಲಿ ಬ್ಯಾಕ್ ಲಾಗ್ ಹುದ್ದೆಗಳ ಭರ್ತಿ ಮಾಡಲಾದ ಸಂದರ್ಭದಲ್ಲಿದ್ದ ನಿಯಮಗಳಾವುವು ?

## ರಾಜ್ಯದಲ್ಲಿ ಇಲಾಖೆಗೆ ಹೆಚ್ಚುತ್ತಿರುವ ಬಾಣಂತಿಯರ ಸಾವಿನ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೪ (೧೧೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಸ್ಪತ್ರೆಗಳಲ್ಲಿ ಬಳಸಲಾಗುತ್ತಿರುವ ಔಷಧಗಳು ಪ್ರಮಾಣಿತ ಗುಣಮಟ್ಟ ಹೊಂದಿಲ್ಲ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಇತ್ತೀಚೆಗೆ ಬಾಣಂತಿಯರ ಸಾವಿನ ಪ್ರಕರಣದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಾವನ್ನಪ್ಪಿದ ಬಾಣಂತಿಯರ ಕುಟುಂಬಸ್ಥರಿಗೆ ಪರಿಹಾರ ನೀಡಲಾಗಿದೆಯೇ ; ನೀಡಿದ್ದಲ್ಲಿ ಕುಟುಂಬಸ್ಥರಿಗೆ ಪರಿಹಾರ ಸಿಕ್ಕ ಪ್ರಮಾಣವೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಪರವಾನಿಗೆ ಇಲ್ಲದೆ ಕಾರ್ಯನಿರ್ವಹಣೆ ನಡೆಸುತ್ತಿರುವ ಔಷಧ ಮಳಿಗೆಗಳ ಸಂಖ್ಯೆ ಎಷ್ಟು ಹಾಗೂ ಅವುಗಳ ಮೇಲೆ ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಪಡಿತರ ಧಾನ್ಯಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೫ (೧೧೨೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ನೀಡುವ ಪಡಿತರ ಧಾನ್ಯಗಳು ಕಳಪೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮವೇನು ;

(ಆ) ನ್ಯಾಯಬೆಲೆ ಅಂಗಡಿಗಳಲ್ಲಿ ಮಾರಾಟ ಮಾಡುವ ಧಾನ್ಯಗಳು ಕಿರಾಣಿ ಅಂಗಡಿಗಳಲ್ಲಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರ ಮೇಲೆ ತೆಗೆದುಕೊಂಡ ಕ್ರಮಗಳೇನು ;

(ಇ) ಸರ್ಕಾರ ನಿಗದಿಪಡಿಸಿದಂತೆ ೧೦ ಕೆಜಿ ಅಕ್ಕಿ ಘೋಷಣೆ ಮಾಡಲಾಗಿದ್ದು ೫ ಕೆಜಿ ಅಕ್ಕಿ ವಿತರಣೆ ಮಾಡಿ ಉಳಿದ ೫ ಕೆಜಿ ಅಕ್ಕಿ ಬದಲಾಗಿ ಪಡಿತರ ದಾರರಿಗೆ ಹಣವನ್ನು ಜಮೆ ಮಾಡುತ್ತಿದ್ದು ಎಲ್ಲಾ ಪಡಿತರದಾರರಿಗೆ ಸರಿಯಾಗಿ ಹಣ ನೀಡಲಾಗಿದೆ ; ಎಷ್ಟು ತಿಂಗಳು ಬಾಕಿ ಉಳಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

# ರಾಜ್ಯದಲ್ಲಿ ವಿಶ್ವವಿದ್ಯಾನಿಲಯ ಮುಚ್ಚಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೬ (೧೦೩೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸುಮಾರು ೧೦ ವಿಶ್ವವಿದ್ಯಾನಿಲಯ ಮುಚ್ಚಲು ಸರ್ಕಾರ ಯಾವ ಮಾನದಂಡಗಳನ್ನು ಅನುಸರಿಸಿದೆ ;

(ಆ) ವಿಶ್ವವಿದ್ಯಾನಿಲಯ ಸ್ಥಾಪಿಸುವ ಸಂದರ್ಭದಲ್ಲಿ ಯಾವ ಮಾನದಂಡಗಳ ಆಧಾರದ ಮೇಲೆ ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸಲಾಗಿತ್ತು ಸ್ಥಾಪಿಸುವ ಮೊದಲು ವಿಶ್ವವಿದ್ಯಾನಿಲಯ ಅಗತ್ಯತೆ ಬಗ್ಗೆ ವರದಿ ಪಡೆಯಲಾಗಿತ್ತೆ ; ಸ್ಥಾಪಿಸಲು ಪೂರಕ ಅಂಶಗಳಾವುವು ;

(ಇ) ಕೊಡಗು ಜಿಲ್ಲೆಯಲ್ಲಿ ವಿಶ್ವವಿದ್ಯಾನಿಲಯ ಸ್ಥಾಪಿಸುವ ಮೊದಲು ವರದಿ ಪಡೆಯಲಾಗಿತ್ತೆ ; ಈ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಎಷ್ಟು ಕಾಲೇಜುಗಳು ಬರುತ್ತದೆ ; ವಿಶ್ವವಿದ್ಯಾನಿಲಯಕ್ಕೆ ಬಂದ ಅನುದಾನ ಎಷ್ಟು ; ವಾರ್ಷಿಕ ವಿಶ್ವವಿದ್ಯಾನಿಲಯ ನಡೆಸಲು ತಗಲುವ ವೆಚ್ಚ ಎಷ್ಟು ; ಇಲ್ಲಿ ಶಿಕ್ಷಕರಿಗೆ ಸಂಬಳ ಎಷ್ಟು ; (ವಿವರ ನೀಡುವುದು)

(ಈ) ಈ ವಿಶ್ವವಿದ್ಯಾನಿಲಯ ಸ್ಥಾಪಿಸುವ ಸಂದರ್ಭದಲ್ಲಿ ಯಾವ ಮಾನದಂಡ ಮತ್ತು ಸರ್ಕಾರದ ಅನುದಾನ ನೀಡಲು ನಿರ್ಧರಿಸುತ್ತದೆ ; (ವಿವರ ನೀಡುವುದು)

(ಉ) ವಿಶ್ವವಿದ್ಯಾನಿಲಯಗಳು ಆರ್ಥಿಕ ಸಂಕಷ್ಟಕ್ಕೆ ಒಳಪಟ್ಟಿದ್ದು, ನಿವೃತ್ತ ಪ್ರಾಧ್ಯಾಪಕರಿಗೆ ನಿವೃತ್ತ ವೇತನ ನೀಡಲು ಸಾಧ್ಯವಾಗದ ಪರಿಸ್ಥಿತಿಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಭೂಮಿಯ ವಿಸ್ತೀರ್ಣದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೭ (೧೦೩೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಭೂಮಿಯ ವಿಸ್ತೀರ್ಣ ಎಷ್ಟು; (ಸರ್ವೆ ನಂಬರ್‌ವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತಿಕ್ರಮಣಗೊಂಡ ಅರಣ್ಯ ಭೂಮಿಯ ವಿಸ್ತೀರ್ಣ ಎಷ್ಟು;

(ಇ) ಅತಿಕ್ರಮಣಗಳನ್ನು ತಡೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ; (ಸರ್ವೆ ನಂಬರ್‌ವಾರು ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ಎಷ್ಟು ಪ್ರಕರಣಗಳು ಬಾಕಿ ಇವೆ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕದಲ್ಲಿರುವ ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೮ (೧೦೩೫) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿರುವ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಪ್ರವೇಶದ ವಿವರ ನೀಡುವುದು;

(ಆ) ಈ ಕಾಲೇಜುಗಳಲ್ಲಿ ಮಂಜೂರಾದ ಮತ್ತು ಕಾರ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಇ) ಈ ಕಾಲೇಜುಗಳಿಗೆ ಪ್ರಸಕ್ತ ವರ್ಷದಲ್ಲಿ ಹಂಚಿಕೆ ಮಾಡಿದ ಮತ್ತು ವೆಚ್ಚ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಈ) ಮಂಗಳೂರು ಮತ್ತು ಉಡುಪಿ ಜಿಲ್ಲೆಗಳಲ್ಲಿ ಸರ್ಕಾರವು ಯಾವಾಗ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದು ?

## ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನದ ಸಾಮರ್ಥ್ಯದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೯ (೧೦೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನದ ಒಟ್ಟು ಸ್ಥಾಪಿತ ಸಾಮರ್ಥ್ಯ ಎಷ್ಟು; (ವರ್ಗವಾರು, ವರ್ಷವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಹೆಚ್ಚು ನವೀಕರಿಸಬಹುದಾದ ಇಂಧನ ಉತ್ಪಾದನೆಯನ್ನು ಉತ್ತೇಜಿಸಲು ಸರ್ಕಾರವು ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ಮೇಲ್ಛಾವಣಿ ಸ್ಥಾಪನೆಗಳು ಸೇರಿದಂತೆ ಸೌರಶಕ್ತಿ ಉತ್ಪಾದಿಸಲು ಸರ್ಕಾರವು ಯಾವುದೇ ಗುರಿಯನ್ನು ಹೊಂದಿದೆಯೇ ; (ವಿವರ ನೀಡುವುದು)

(ಈ) ಕರ್ನಾಟಕದಲ್ಲಿ ಎಷ್ಟು ಸೌರ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲಾಗಿದೆ ? (ಸ್ಥಳ ಮತ್ತು ಇಂಧನ ಉತ್ಪಾದನೆ ಸೇರಿದಂತೆ ಜಿಲ್ಲಾವಾರು ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಿದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೦ (೧೦೩೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ನ್ನು ೨೦೨೪–೨೫ರಲ್ಲಿ ರದ್ದುಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಅನ್ನಭಾಗ್ಯ ಯೋಜನೆ ಅನ್ವಯ ೫ ಕೆ.ಜಿ ಅಕ್ಕಿ ಜೊತೆ ಎಷ್ಟು ಗ್ರಾಹಕರಿಗೆ ೨೦೨೩–೨೪ ಮತ್ತು ೨೦೨೪–೨೫ರಲ್ಲಿ ೮. ಕೆ.ಜಿ ಅಕ್ಕಿಯ ನೇರ ಹಣ ಪಾವತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಪಂಚ ಗ್ಯಾರಂಟಿ ಯೋಜನೆಯಂತೆ ೫ ಕೆ.ಜಿ ಅಕ್ಕಿ ಬದಲು ೫ಕೆ.ಜಿ ಸಮಾನದರದಲ್ಲಿ ಇತರ ಆಹಾರ ಪಾದರ್ಥಗಳನ್ನು (ಫುಡ್‌ಕಿಟ್) ನೀಡುವುದರ ಬಗ್ಗೆ ಸರ್ಕಾರ ಗಮನಹರಿಸಿದೆಯೇ ; ಈ ಬಗ್ಗೆ ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; ಇತರೆ ರಾಜ್ಯಗಳಲ್ಲಿ ಕಿಟ್‌ನ್ನು ನೀಡಿರುವ ಕುರಿತು ವರದಿ ಪಡೆಯಲಾಗಿದೆಯೇ ; (ವಿವರ ನೀಡುವುದು)

(ಈ) ಎ.ಪಿ.ಎಲ್ ಕಾರ್ಡ್‌ದಾರರಿಗೆ ಯಾವ ಪಡಿತರ ಅಂಗಡಿಯಲ್ಲಿ ರಿಯಾಯಿತಿ ದರದಲ್ಲಿ ಅಕ್ಕಿಯನ್ನು ನೀಡದೆ ಇರುವ ಬಗ್ಗೆ ದೂರುಗಳಿವೆ ? (ವಿವರ ನೀಡುವುದು)

## ಎಂಡೋಸಲ್ಫಾನ್ ಪೀಡಿತರ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೧ (೧೧೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಪೀಡಿತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಹಿಳೆಯರು, ಪುರುಷರು ಮತ್ತು ಮಕ್ಕಳ ವಿವರ ನೀಡುವುದು)

(ಆ) ಎಷ್ಟು ಜನ ಎಂಡೋಸಲ್ಫಾನ್ ಪೀಡಿತರು ಮೃತಪಟ್ಟಿದ್ದಾರೆ ; (ಮಹಿಳೆ, ಮಕ್ಕಳು ಮತ್ತು ಪುರುಷರ ವಿವರ ನೀಡುವುದು)

(ಇ) ಎರಡು, ಮೂರನೇ ತಲೆಮಾರಿಗೂ ಎಂಡೋ ವಿಷ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಂಡೋಸಲ್ಫಾನ್ ಪೀಡಿತರ ರಕ್ಷಣೆಗೆ ಮತ್ತು ಎಂಡೋ ವಿಷ ಹರಡುವಿಕೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕೇರಳ ಸರ್ಕಾರ ಎಂಡೋ ಪೀಡಿತರಿಗೆ ನೀಡಿರುವ ಪರಿಹಾರಗಳೇನು ; ಎಂಡೋ ಹರಡುವಿಕೆಯನ್ನು ತಡೆಯಲು ಕೇರಳ ಸರ್ಕಾರ ಕೈಗೊಂಡ ಕ್ರಮಗಳ ಕುರಿತು ಅಧ್ಯಯನ ನಡೆಸಲಾಗಿದೆಯೇ ? (ವಿವರ ನೀಡುವುದು)

## ಸಮುದಾಯ ಗ್ರಂಥಾಲಯಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೨ (೧೧೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೊಳಚೆ ಪ್ರದೇಶ ಅಲೆಮಾರಿ ಮತ್ತು ಮಕ್ಕಳ ಸಮುದಾಯ ಗ್ರಂಥಾಲಯಗಳ ಮೇಲ್ವಿಚಾರಕರ ಸಂಖ್ಯೆ ಎಷ್ಟು ; ಈ ಪೈಕಿ ಸರ್ಕಾರಿ ಹಾಗೂ ಗುತ್ತಿಗೆ ನೌಕರರೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಗುತ್ತಿಗೆ ನೌಕರರು ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಇವರ ಕರ್ತವ್ಯಗಳೇನು ಇವರಿಗೆ ನೀಡುತ್ತಿರುವ ವೇತನ ಹಾಗೂ ಇನ್ನಿತರೆ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಗುತ್ತಿಗೆ ನೌಕರರು ತಮ್ಮ ಸೇವೆಯನ್ನು ಖಾಯಂಗೊಳಿಸುವಂತೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇವರ ಸೇವೆಯನ್ನು ಖಾಯಂಗೊಳಿಸಲು ಸರ್ಕಾರಕ್ಕೆ ಇರುವ ತೊಡಕುಗಳೇನು ;

(ಈ) ಇವರ ಸೇವೆಯನ್ನು ಖಾಯಂಗೊಳಿಸುವ ವಿಚಾರದಲ್ಲಿ ಮಾನ್ಯ ನ್ಯಾಯಾಲಯ ನೀಡಿರುವ ಆದೇಶ/ಸೂಚನೆ ಏನು, ನ್ಯಾಯಾಲಯದ ಆದೇಶವನ್ನು ಸರ್ಕಾರ ಪಾಲಿಸಿದೆಯೇ ; ಇವರ ಸೇವೆಯನ್ನು ಖಾಯಂಗೊಳಿಸುವ ಕುರಿತು ಸರ್ಕಾರದ ನಿಲುವೇನು ?

## ಕಾಯ್ದಿಟ್ಟ ಅರಣ್ಯ ಜಮೀನಿನ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೩ (೧೧೪೧) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ೧೫೦೦೦ ಎಕರೆ ಭೂಮಿಯನ್ನು ಕಾಯ್ದಿಟ್ಟ ಅರಣ್ಯ ಎಂದು ಘೋಷಣೆ ಮಾಡಲಾಗಿದೆಯೇ ; (ಹಾಗಿದ್ದರೆ, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಷ್ಟು ಎಕರೆ ಭೂಮಿಯನ್ನು ಕಾಯ್ದಿಟ್ಟ ಅರಣ್ಯ ಎಂದು ಹೊಸದಾಗಿ ಘೋಷಣೆ ಮಾಡಲಾಗಿದೆ ; ಯಾವೆಲ್ಲ ಗ್ರಾಮಗಳಲ್ಲಿ ಕಾಯ್ದಿಟ್ಟ ಅರಣ್ಯ ಎಂದು ಹೊಸದಾಗಿ ಘೋಷಣೆ ಮಾಡಲಾಗಿದೆ ; (ಗ್ರಾಮವಾರು, ಸರ್ವೆ ನಂಬರ್, ವಿಸ್ತೀರ್ಣ ಸಮೇತ ವಿವರ ನೀಡುವುದು)

(ಇ) ರೈತರ ಕುಮ್ಕಿ, ಸೊಪ್ಪಿನ ಬೆಟ್ಟ, ಕಾನಭಾನ ಜಮೀನುಗಳನ್ನು ಸೇರಿಸಿ ಕಾಯ್ದಿಟ್ಟ ಅರಣ್ಯ ಎಂದು ಘೋಷಿಸಲಾಗಿದೆಯೇ ; ಇಲ್ಲವಾದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಕೆಲವು ಭಾಗಗಳಲ್ಲಿ ರೈತರಿಗೆ ಅರಣ್ಯ ಇಲಾಖೆಯವರು ಇಂತಹ ಜಮೀನುಗಳಿಗೆ ಕಾಯ್ದಿಟ್ಟ ಅರಣ್ಯ ಎಂದು ನೋಟೀಸ್ ನೀಡಿ ಕಿರುಕುಳ ನೀಡುತ್ತಿರುವುದೇಕೆ ; ಆರಣ್ಯ ಇಲಾಖೆಯವರಿಗೆ ಈ ಬಗ್ಗೆ ಸೂಕ್ತ ನಿರ್ದೇಶನ ನೀಡಲಾಗುವುದೇ ;

(ಈ) ರೈತರ ಕುಮ್ಕಿ ಜಮೀನು, ಸೊಪ್ಪಿನ ಬೆಟ್ಟ, ಕಾನದಾನ ಜಮೀನುಗಳನ್ನು ಕಾಯ್ದಿಟ್ಟ ಅರಣ್ಯದಿಂದ ಹೊರಗಿರುವ ಬಗ್ಗೆ ಸರ್ಕಾರದ ನಿಲುವೇನು ?

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೪ (೧೯೯೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಬಾಹ್ಯ ಪರೀಕ್ಷಾ ಕೇಂದ್ರದ ಹೆಸರಿನಲ್ಲಿ ಆರ್ಥಿಕ ದುರುಪಯೋಗ ಮಾಡಿಕೊಂಡಿರುವ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ಗೌರವಾನ್ವಿತ ರಾಜ್ಯಪಾಲರು ೦೯.೦೯.೨೦೨೪ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದ್ದು ಸಮಿತಿಯ ವರದಿ ಸರ್ಕಾರಕ್ಕೆ ಸ್ವೀಕೃತವಾಗಿದೆಯೇ ;

(ಆ) ಈ ಹಗರಣದ ಆಪಾಧಿತರ ವಿರುದ್ಧ ಜರುಗಿಸಲಾಗಿರುವ ಕಾನೂನು ಮತ್ತು ಇಲಾಖಾ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಹಗರಣದ ಬಗ್ಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಮತ್ತು ವ್ಯವಸ್ಥಾಪನಾ ಮಂಡಳಿಯು ತೆಗೆದುಕೊಂಡಿರುವ ತೀರ್ಮಾನಗಳಾವುವು ; (ಮಾಹಿತಿ ನೀಡುವುದು)

(ಈ) ಇದೇ ಹಗರಣದ ಆಪಾಧಿತರ ವಿರುದ್ಧ ಮುಂದಿನ ಕಾನೂನು ಕ್ರಮ ಜರುಗಿಸಲು ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಇವರು ೧೭.೧೧.೨೦೧೩ರಲ್ಲಿ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ ೧೯೮೮ ಸೆಕ್ಷನ್–೧೭(ಎ) ರಂತೆ ಕೋರಿರುವ ಪೂರ್ವಾನುಮತಿಯ ಮನವಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಆರ್ಥಿಕ ಹಗರಣದ ಸಂಬಂಧ ಆಡಿಟ್ ವರದಿ ಸರ್ಕಾರಕ್ಕೆ ಸ್ವೀಕೃತವಾಗಿದೆಯೇ ; ವರದಿಯಂತೆ ಯಾವ ಕ್ರಮ ಜರುಗಿಸಲಾಗಿದೆ ; ಹಗರಣದಿಂದ ಸಾರ್ವಜನಿಕ ನಿಧಿ ಪೋಲಾಗಿದ್ದು ನಷ್ಟ ವಸೂಲಿಗೆ ಸರ್ಕಾರದಿಂದ ಸದರಿ ವಿಶ್ವವಿದ್ಯಾಲಯದ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ; ಸರ್ಕಾರದ ವಿಶ್ವವಿದ್ಯಾಲಯವು ಖಾಸಗಿ ಬ್ಯಾಂಕುಗಳಲ್ಲಿ ಖಾತೆ ತೆರೆಯಲು ಅವಕಾಶವಿದೆಯೇ ? (ಸದರಿ ಪ್ರಕರಣದಿಂದ ಇಲ್ಲಿಯವರೆಗಿನ ವರದಿಯ ಬಗ್ಗೆ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಹಾವು ಕಡಿತದಿಂದ ಆಗುತ್ತಿರುವ ಸಮಸ್ಯೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೫ (೧೯೭೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾವು ಕಡಿತವನ್ನು ಘೋಷಿತ ಕಾಯಿಲೆಯೆಂದು ಘೋಷಣೆ ಮಾಡಿದ್ದು ಯಾವಾಗ ; (ಆದೇಶದ ಪ್ರತಿ ಒದಗಿಸುವುದು) ಘೋಷಿತ ಕಾಯಿಲೆ ಎಂದು ಘೋಷಣೆ ಮಾಡಿದ ನಂತರ ವರದಿಯಾಗಿರುವ ಪ್ರಕರಣಗಳು ಎಷ್ಟು; ಮೃತಪಟ್ಟವರ ಪೈಕಿ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ ;

(ಆ) ಕಳೆದ ೨ ವರ್ಷದಿಂದ ಹಾವು ಕಡಿತಕ್ಕೊಳಗಾಗಿ ಮೃತಪಟ್ಟವರ ಸಂಖ್ಯೆ ಎಷ್ಟು; ರಾಜ್ಯದಲ್ಲಿ ಸಕಾಲಕ್ಕೆ ಹಾವು ಕಡಿತಕ್ಕೆ ಚಿಕಿತ್ಸೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾವು ಕಡಿತಕ್ಕೆ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿರುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪ್ರಸ್ತುತ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿದೆಯೇ ಎಂದು ಪರಿಶೀಲನೆ ನಡೆಸಲಾಗಿದೆಯೇ ;

(ಈ) ಹಾವು ಕಡಿತಕ್ಕೊಳಗಾಗಿ ಜೀವ ಹಾನಿ ಆಗುವ ಪ್ರಕರಣಗಳು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿರುವ ಕಾರಣ ಹಾವು ಕಡತಕ್ಕೊಳಗಾದವರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡುವ ಕುರಿತು ಸರ್ಕಾರದ ನಿಲುವೇನು ;

(ಉ) ತಾವು ಹಿಡಿಯುವವರಿಗೆ ಸರ್ಕಾರ ಭತ್ಯೆ ನೀಡುತ್ತಿದೆಯೇ ; ಹಾವು ಹಿಡಿಯುವಾಗ ಮೃತಪಟ್ಟವರ ಕುಟುಂಬಗಳಿಗೆ ಪರಿಹಾರ ನೀಡಲಾಗಿದೆಯೇ ?

## ಪಡಿತರ ಸಾಗಾಣೆಯಲ್ಲಿನ ಅಕ್ರಮಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೬ (೧೮೯೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಿಂದ ಅನ್ನಭಾಗ್ಯ ಯೋಜನೆಯ ಪಡಿತರ ಸಾಗಾಣೆಗಾಗಿ ವೆಚ್ಚ ಮಾಡಿರುವ ಹಣ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಪಡಿತರ ಸಾಗಾಣೆಯಲ್ಲಿ ಭಾರೀ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಅಕ್ರಮದ ಮೊತ್ತ ಎಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಪಡಿತರ ವಿತರಣೆ ವ್ಯವಸ್ಥೆಯ ಸಾಗಾಣೆ–ನಿರ್ವಹಣೆಯಲ್ಲಿ ಅಕ್ರಮಗಳ ಕುರಿತು ಸಿ.ಎ.ಜಿ. ವರದಿಯಲ್ಲಿ ಪ್ರಸ್ತಾಪಿಸಿರುವ ಅಂಶಗಳೇನು ;

(ಈ) ಸಿ.ಎ.ಜಿ.ವರದಿಯ ಆಧಾರದ ಮೇಲೆ ಸರ್ಕಾರ ತನಿಖೆಗೆ ಆದೇಶ ನೀಡಿದೆಯೇ ; ಈವರೆಗೆ ಎಷ್ಟು ಜನರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ? (ವಿವರ ನೀಡುವುದು)

## ರಾಜ್ಯದ ವಿದ್ಯುತ್ ಇಲಾಖೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೭ (೧೮೯೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವಿವಿಧ ಇಲಾಖೆಗಳ ಕಛೇರಿಯ ವಿದ್ಯುತ್ ಬಿಲ್ ಪಾವತಿಗೆ ಅನುದಾನದ ಕೊರತೆಯಿಂದಾಗಿ ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಕೋಟ್ಯಂತರ ರೂ. ವಿದ್ಯುತ್ ಶುಲ್ಕ ಪಾವತಿ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ ; ಎಷ್ಟು ವಿದ್ಯುತ್ ಶುಲ್ಕ ಬಾಕಿ ಇದೆ ; (ಹೆಸ್ಕಾಂವಾರು ಮಾಹಿತಿ ಒದಗಿಸುವುದು)

(ಆ) ವಿದ್ಯುತ್ ಬಲ್ ಬಾಕಿ ಇರುವುದರಿಂದ ಸರ್ಕಾರಿ ಕಛೇರಿಗಳಲ್ಲಿ ವಿದ್ಯುತ್ ಸಂಪರ್ಕವನ್ನು ಹೆಸ್ಕಾಂ ಕಂಪನಿಗಳು ಕಡಿತಗೊಳಿಸುತ್ತಿರುವುದರಿಂದ ಕಛೇರಿಯ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೆಸ್ಕಾಂಗಳಿಗೆ ಪಾವತಿಸಲು ಬಾಕಿ ಇರುವ ವಿದ್ಯುತ್ ಶುಲ್ಕ ಪಾವತಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೆ ; ಯಾವ ಕಾಲಮಿತಿಯೊಳಗೆ ಬಾಕಿ ಇರುವ ವಿದ್ಯುತ್ ಬಿಲ್‌ಗಳನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗುವುದು ?

## ೧೦೦ ವರ್ಷ ಪೂರೈಸಿದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೦೮ (೧೧೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೦೦ ವರ್ಷ ಪೂರ್ಣಗೊಳಿಸಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಅವು

ಯಾವುವು ; (ಜಿಲ್ಲೆ/ ತಾಲ್ಲೂಕು/ ಶಾಲೆ ಹೆಸರು/ ನಿರ್ಮಾಣ ವರ್ಷ/ ಮಕ್ಕಳ ಸಂಖ್ಯೆ/ಶಿಕ್ಷಕರ ಸಂಖ್ಯೆ/ ಇತ್ಯಾದಿ ವಿವರವನ್ನು ಒಳಗೊಂಡಂತೆ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಶತಮಾನ ಪೂರೈಸಿದ ಈ ಶಾಲೆಗಳನ್ನು 'ಪಾರಂಪರಿಕ ಶಾಲೆ'ಗಳೆಂದು ಘೋಷಿಸಿ, ಈ ಶಾಲೆಗಳಿಗೆ ಮೂಲ ಸೌಲಭ್ಯಗಳೊಂದಿಗೆ ಕಾಯಕಲ್ಪ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶತಮಾನ ಪೂರೈಸಿದ ಶಾಲೆಗಳ ಪ್ರಸ್ತುತ ಸ್ಥಿತಿಗತಿ ಹೇಗಿದೆ ; (ವಿವರ ನೀಡುವುದು)

(ಈ) ಈ ಶಾಲೆಗಳಲ್ಲಿ ಈಗಲೂ ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆಯೇ ಅಥವಾ ವಿದ್ಯಾರ್ಥಿಗಳ ದಾಖಲಾತಿ ಕೊರತೆಯಿಂದಾಗಿ ಶಾಲೆಗಳು ಮುಚ್ಚಿವೆಯೇ ; ಇದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಕಾಡ್ಗಿಚ್ಚು ಅಥವಾ ಆಕಸ್ಮಿಕ ಬೆಂಕಿ ಅವಘಡಗಳಿಂದ ಅರಣ್ಯನಾಶ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೦೯ (೧೧೨೭) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಡ್ಗಿಚ್ಚು ಅಥವಾ ಆಕಸ್ಮಿಕ ಬೆಂಕಿ ಅವಘಡಗಳಿಂದ ಕಳೆದ ೫ ವರ್ಷಗಳಲ್ಲಿ ನಾಶವಾದ ಖಾಯಂ ಅರಣ್ಯ ಪ್ರದೇಶದ ವಿಸ್ತೀರ್ಣ ಎಷ್ಟು ; (ಆರಣ್ಯ ಪ್ರದೇಶದ ಹೆಸರು ಮತ್ತು ವಿಸ್ತೀರ್ಣ (ಹೆಕ್ಟೇರ್‌ಗಳಲ್ಲಿ) ಜಿಲ್ಲಾವಾರು ನೀಡುವುದು)

(ಆ) ಇದರಿಂದ ಎಷ್ಟು ಮರಗಳು ಮತ್ತು ವನ್ಯಜೀವಿ ಸಂಕುಲಗಳು ಬೆಂಕಿಗಾಹುತಿಯಾಗಿವೆ ; (ಜಿಲ್ಲಾವಾರು ಅಥವಾ ಅರಣ್ಯವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಬೆಂಕಿ ಪ್ರಕರಣಗಳಲ್ಲಿ ಒಣಗಿದ ಹುಲ್ಲು ಮತ್ತು ಕುರುಚಲು ಗಿಡಗಳು ಬೆಂಕಿಗೆ ಪ್ರಭಾವಿತವಾದ ಪ್ರದೇಶ ಎಷ್ಟು; (ವರ್ಷವಾರು, ಅರಣ್ಯವಾರು ಮಾಹಿತಿ ನೀಡುವುದು)

(ಈ) ಕಾಡ್ಗಿಚ್ಚು ಸಂಭವಿಸಲು ಪ್ರಮುಖ ಕಾರಣಗಳೇನು ; ತಡೆಯಲು ಅರಣ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ; ಬೆಂಕಿ ನಂದಿಸಲು ಅರಣ್ಯ ಸಿಬ್ಬಂದಿಗಳಿಗೆ ನೀಡಿರುವ ಸವಲತ್ತುಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕಳ್ಳಬೇಟೆ ಮತ್ತು ಅರಣ್ಯ ನಾಶಕ್ಕೆ ಸಂಬಂಧಿಸಿದಂತೆ ಕಳೆದ ೫ ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಆರೋಪಿಗಳ ವಿರುದ್ಧ ಕ್ರಮವಹಿಸಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಊ) ಅರಣ್ಯ ಇಲಾಖೆಯಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಂಬಲ ಬೆಲೆಯಲ್ಲಿ ಆಹಾರ ಧಾನ್ಯಗಳ ಖರೀದಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೦ (೧೧೨೮) ಮಾನ್ಯ ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೨೪–೨೫ನೇ ಸಾಲಿನ ಮಾರುಕಟ್ಟೆ ವರ್ಷದಲ್ಲಿ ಕನಿಷ್ಠ ಬೆಂಬಲ ಬೆಲೆಯಲ್ಲಿ ಭತ್ತ, ರಾಗಿ, ಜೋಳ ಮಾರಾಟಕ್ಕೆ ನೋಂದಾಯಿಸಿದ ರೈತರ ಸಂಖ್ಯೆ ಎಷ್ಟು ಹಾಗೂ ಖರೀದಿ ಕೇಂದ್ರಗಳಿಗೆ ಆಹಾರ ಧಾನ್ಯಗಳನ್ನು ಪೂರೈಸಿದ ರೈತರ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಲಾದ ಭತ್ತ, ರಾಗಿ ಮತ್ತು ಜೋಳ ಪ್ರಮಾಣ ಎಷ್ಟು ; ಇದಕ್ಕಾಗಿ ತೆರೆಯಲಾಗಿದ್ದ ಖರೀದಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಇಲ್ಲಿಯವರೆಗೆ ಆಹಾರಧಾನ್ಯಗಳಾದ ಭತ್ತ, ರಾಗಿ ಮತ್ತು ಜೋಳ ಪೂರೈಸಿದ ಎಷ್ಟು ರೈತರಿಗೆ, ಎಷ್ಟು ಹಣ ಪಾವತಿಸಲಾಗಿದೆ ; ಪಾವತಿಸಲು ಬಾಕಿ ಇರುವ ಮೊತ್ತ ಎಷ್ಟು ; (ಆಹಾರ ಧಾನ್ಯವಾರು ಪಾವತಿಸಿದ ಮತ್ತ ಪಾವತಿಸಲು ಬಾಕಿಯಿರುವ ಮೊತ್ತದ ಮಾಹಿತಿ ನೀಡುವುದು)

(ಈ) ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಖರೀದಿ ಪ್ರಮಾಣದಲ್ಲಿ ಕಡಿಮೆ ಅಥವಾ ಹೆಚ್ಚಳವಾಗಿದೆಯೇ ; ಇದ್ದಲ್ಲಿ, ಶೇಕಡವಾರು ಪ್ರಮಾಣ ಎಷ್ಟು ? (ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಆಹಾರ ಧಾನ್ಯವಾರು ಮಾಹಿತಿ ನೀಡುವುದು)

## ಖಾಯಂ ಶಿಕ್ಷಕರು, ಉಪನ್ಯಾಸಕರ ವೇತನವನ್ನು ಪುನರ್ ನಿಗದಿಪಡಿಸುತ್ತಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೧ (೧೧೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಖಾಯಂ ಆಗಿರುವ ಶಿಕ್ಷಕರು/ ಉಪನ್ಯಾಸಕರ ವೇತನವನ್ನು ಪುನರ್ ನಿಗದಿಪಡಿಸಲು ಸರ್ಕಾರ ಮುಂದಾಗಿದೆಯೇ ; ಇದ್ದಲ್ಲಿ, ಸೂಕ್ತ ಕಾರಣಗಳನ್ನು ತಿಳಿಸುವುದು ;

(ಆ) ವಿಶೇಷ ನಿಯಮಗಳನುಸಾರ ಸಕ್ರಮಾತಿಗೊಂಡಿರುವ ಶಿಕ್ಷಕರು ಮತ್ತು ಉಪನ್ಯಾಸಕರ ಪೈಕಿ ಕೆಲವರು ಸೇವೆಯಲ್ಲಿ ಮುಂದುವರೆದಿದ್ದರೆ, ಇನ್ನೂ ಕೆಲವರು ಈಗಾಗಲೇ ನಿವೃತ್ತಿ ಮತ್ತು ಮರಣ ಹೊಂದಿದ್ದು, ವೇತನ ಮತ್ತು ಪಿಂಚಣಿ ಪುನರ್ ನಿಗದಿಪಡಿಸುವ ನಿರ್ಧಾರವನ್ನು ಸರ್ಕಾರ ಪರಿಶೀಲಿಸಬಾರದೇ ;

(ಇ) ಘನ ಸರ್ವೋಚ್ಚ ನ್ಯಾಯಾಲಯವು ಪ್ರಕರಣವೊಂದರಲ್ಲಿ 'ನಿವೃತ್ತ ನೌಕರರಿಂದ ಅಥವಾ ಒಂದು ವರ್ಷದೊಳಗೆ ನಿವೃತ್ತಿ ಹೊಂದಲಿರುವ ಹಾಗೂ ೫ ವರ್ಷಗಳಿಂದ ಹಿಂದಿನ ಅವಧಿಯಲ್ಲಿ ಪಾವತಿಸಲಾದ ಹೆಚ್ಚಿನ ಮೊತ್ತವನ್ನು ವಸೂಲಿ ಮಾಡುವಂತಿಲ್ಲ' ಎಂದು ಸಕ್ಷಮ ಪ್ರಾಧಿಕಾರಿಗಳಿಗೆ ನಿರ್ದೇಶನ ನೀಡಿರುವುದು ನಿಜವೇ ;

(ಈ) ಇದೀಗ ಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಖಾಯಂ ಆಗಿರುವ ಶಿಕ್ಷಕರು/ ಉಪನ್ಯಾಸಕರ ವೇತನವನ್ನು ಪುನರ್ ನಿಗದಿಪಡಿಸಲು ಸರ್ಕಾರ ಮುಂದಾಗಿರುವುದು ಏಕೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಸರ್ಕಾರದ ಆದೇಶದನ್ವಯ ಖಾಯಂ/ ಸಕ್ರಮಾತಿ/ವಿಲೀನಗೊಂಡ ಗುತ್ತಿಗೆ ಶಿಕ್ಷಕರ ಹೆಸರು/ ನಿವೃತ್ತಿ ವರ್ಷ/ಸಕ್ರಮಾತಿಗೊಂಡ ಶಿಕ್ಷಕರ ಸಂಖ್ಯೆ/ ಈಗಾಗಲೇ ನಿವೃತ್ತಿ ಹೊಂದಿರುವ ಹಾಗೂ ನಂತರ ವರ್ಷಗಳಲ್ಲಿ ನಿವೃತ್ತಿ ಹೊಂದುವವರ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಸರ್ಕಾರಿ ಮುದ್ರಣಾಲಯದಲ್ಲಿ ಆರ್ಥಿಕ ನಷ್ಟವುಂಟು ಮಾಡಿರುವವರ ವಿರುದ್ಧ ಕ್ರಮ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೨ (೧೧೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಕೇಂದ್ರ ಮುದ್ರಣಾಲಯಕ್ಕೆ ಸಂಬಂಧಿಸಿದಂತೆ, ೨೦೨೩–೨೪ ಮತ್ತು ೨೦೨೪–೨೫ನೇ ಸಾಲುಗಳಲ್ಲಿ ಪ್ರತಿ ಕಿಲೋ ಪೇಪರ್ (Maplitho Printing Paper (Reels & Sheets)) ಅನ್ನು ಎಷ್ಟು ದರದಲ್ಲಿ ಖರೀದಿಸಲಾಗಿದೆ ;

(ಆ) ಖರೀದಿಸಲಾದ ಪೇಪರ್‌ನ ಒಟ್ಟು ಪ್ರಮಾಣ ಮತ್ತು ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಸದರಿ ಸಾಲುಗಳಲ್ಲಿ ಖರೀದಿಸಲಾದ ಪೇಪರ್‌ನ ಪ್ರತಿ ಕಿಲೋ. ದರದಲ್ಲಿ ೨೦ ರೂಪಾಯಿಗೂ ಹೆಚ್ಚು ವ್ಯತ್ಯಾಸ (೨೦೨೪–೨೫ ಸಾಲಿಗಿಂತ ೨೦೨೩–೨೪ರಲ್ಲೇ ದರ ಹೆಚ್ಚು ಕಂಡು ಬಂದಿರುವುದಕ್ಕೆ ಕಾರಣಗಳೇನು ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟವನ್ನುಂಟು ಮಾಡಿರುವವರ ವಿರುದ್ಧ ದೂರು ಸ್ವೀಕೃತವಾಗಿದೆಯೇ/ದಾಖಲಾಗಿದೆಯೇ ; ಇದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ದೊಡ್ಡ ಪ್ರಮಾಣದಲ್ಲಿ ಆಗಿರುವ ಆರ್ಥಿಕ ನಷ್ಟವನ್ನು ಸರ್ಕಾರ ಯಾವ ರೀತಿ ವಸೂಲಿ ಮಾಡಲಾಗುವುದು ಹಾಗೂ ಆರೋಪಿತರ ವಿರುದ್ಧ ಕೈಗೊಳ್ಳಬಹುದಾದ ಶಿಸ್ತು ಮತ್ತು ದಂಡನೆಯ ಕ್ರಮಗಳೇನು ? (ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ಮಂಜುನಾಥ್ ಬಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೩ (೧೧೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಸರಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ತರಗತಿಗಳನ್ನು ಮತ್ತು ಎಲ್‌ಕೆಜಿ/ಯುಕೆಜಿ ತರಗತಿಗಳನ್ನು ಪ್ರಾರಂಭಿಸಲಾಗಿದೆ ; ಈ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ಇಲಾಖೆಯ ಷರತ್ತುಗಳೇನು ; ಈ ಹೆಚ್ಚುವರಿ ತರಗತಿಗಳಿಗೆ ಶಿಕ್ಷಕರನ್ನು ಯಾರು ಹೇಗೆ ನೇಮಿಸುತ್ತಿದ್ದಾರೆ ; ಅವರಿಗೆ ಪಾವತಿಸುತ್ತಿರುವ ವೇತನ/ಗೌರವಧನ ಸಹಿತ ಸೇವಾ ನಿಯಮಗಳೇನು ;

(ಆ) ಈಗಾಗಲೇ ಕಾರ್ಯಾಚರಿಸುತ್ತಿರುವ ಸರಕಾರಿ ಆಂಗ್ಲ ಮಾಧ್ಯಮ ಮತ್ತು ಎಲ್‌ಕೆಜಿ. ಯುಕೆಜಿ ತರಗತಿಗಳ ಶಿಕ್ಷಣ ಗುಣಮಟ್ಟವನ್ನು ಎನ್‌ಸಿಆರ್‌ಟಿಯ ಮಾರ್ಗ ಸೂಚಿಯಂತೆ ಕಾಯ್ದುಕೊಳ್ಳಲು ಮತ್ತು ಖಚಿತಪಡಿಸಿಕೊಳ್ಳಲು ಅನುಸರಿಸಲಾದ ಕ್ರಮಗಳೇನು ;

(ಇ) ಆಯಾ ಪ್ರದೇಶದ ಸಾರ್ವಜನಿಕರ ಬೇಡಿಕೆಯಂತೆ ಸರಕಾರಿ ಶಾಲೆಗಳಲ್ಲಿ ಆಂಗ್ಲ ಮಾದ್ಯಮ ಮತ್ತು ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡುವಾದ ಯಾವುದೇ ಹೆಚ್ಚುವರಿ ಶಿಕ್ಷಕರು, ಅನುದಾನ ಬೇಡಿಕೆಗಳನ್ನು ಶಿಕ್ಷಣ ಇಲಾಖೆಗೆ ಸಲ್ಲಿಸದಂತೆ ಹಾಗೂ ಯಾವುದೇ ಸಮಸ್ಯೆಗಳನ್ನು ಶಾಲೆ ಮತ್ತು ಎಸ್‌ಡಿಎಂಸಿ ಮಟ್ಟದಲ್ಲಿಯೇ ಪರಿಹರಿಸುವಂತೆ ಒಪ್ಪಿಕೊಳ್ಳುವ ಷರತ್ತು ವಿಧಿಸಿ ಮುಚ್ಚಳಿಕೆಯನ್ನು ತೆಗೆದುಕೊಂಡು ಇಲಾಖೆ ಗುಣಮಟ್ಟದ ಶಿಕ್ಷಣ ಮತ್ತು ಅನುದಾನ ನೀಡುವ ಜವಾಬ್ದಾರಿಯಿಂದ ನೋಡಿಕೊಂಡು ಸಾಮಾಜಿಕ ಕೆಳಸ್ತರದ ಸಮುದಾಯಗಳ ಶಿಕ್ಷಣದ ನಿರ್ಲಕ್ಷ ತೋರುತ್ತಿದೆಯೇ ;

(ಈ) ಒಂದು ವೇಳೆ ಇಲ್ಲವೆಂದಾದಲ್ಲಿ ಅದಕ್ಕೆ ಪೂರಕವಾಗಿ ಸರ್ಕಾರ ಈಗಾಗಲೇ ತೆಗೆದುಕೊಂಡಿರುವ ಮತ್ತು ಮುಂದೆ ತೆಗೆದುಕೊಳ್ಳಲು ಉದ್ದೇಶಿಸಿರುವ ಶಿಕ್ಷಣ ಗುಣಮಟ್ಟ ಖಾತರಿಪಡಿಸುವ ಕ್ರಮಗಳೇನು ; (ವಿವರ ನೀಡುವುದು)

(ಉ) ಬಿಸಿಯೂಟ ಸಿಬ್ಬಂದಿಗಳಿಗೆ ಕನಿಷ್ಠ ಗೌರವಧನ ನೀಡಿ ಪೂರ್ಣ ಜವಾಬ್ದಾರಿಯನ್ನು ನೀಡದೆ ಅವರ ಮೇಲೆ ಅಗತ್ಯ ನಿಯಂತ್ರಣವನ್ನೂ ಹೊಂದದೆ ಆಗಾಗ ಮುಷ್ಕರದ ಮೂಲಕ ಬಿಸಿಯೂಟ ವ್ಯತ್ಯಯವಾಗುವ ಪರಿಸ್ಥಿತಿ ಉದ್ಭವಿಸಿರುವುದನ್ನು ಸರಿಪಡಿಸಲು ಕೈಗೊಂಡ ಕ್ರಮವೇನು ?

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪಕೇಂದ್ರಗಳ ಕುರಿತು

**ಶ್ರೀ ಮಂಜುನಾಥ್ ಬಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೪ (೧೧೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸ್ವಂತ ಕಟ್ಟಡವಿರುವ ಉಪಕೇಂದ್ರಗಳ ಸಂಖ್ಯೆ ಎಷ್ಟು; ಹೊಸ ಕಟ್ಟಡಗಳ ನಿರ್ಮಾಣಕ್ಕೆ ಎಷ್ಟು ಪ್ರಸ್ತಾವನೆ ಇಲಾಖೆಯ ಮುಂದಿದೆ ; ಕಂದಾಯ ಇಲಾಖೆಗೆ ಜಾಗಕ್ಕಾಗಿ ಎಷ್ಟು ಪ್ರಸ್ತಾವನೆ ಸಲ್ಲಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಆರೋಗ್ಯ ಉಪಕೇಂದ್ರಗಳ ಕೊರತೆಯಿಂದ ಸಾರ್ವಜನಿಕರು ತುರ್ತು ಆರೋಗ್ಯ ಸೇವೆಗಳಿಗೆ ದೂರದ ನಗರ ಮತ್ತು ತಾಲ್ಲೂಕು ಕೇಂದ್ರಗಳಿಗೆ ಹೋಗಬೇಕಾಗಿರುವ ಅನಿವಾರ್ಯತೆ ಸೃಷ್ಟಿಯಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಕುರಿತು ಇಲಾಖೆ ಕೈಗೊಂಡ ಕ್ರಮವೇನು ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಎಷ್ಟು ಉಪಕೇಂದ್ರಗಳಿಗೆ ಸ್ವಂತ ಕಟ್ಟಡ ಇದೆ ; ಉಪಕೇಂದ್ರಗಳಿಗಾಗಿ ಕಂದಾಯ ಇಲಾಖೆಗೆ ಜಾಗಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾದ ಪ್ರಕರಣಗಳು ಯಾವ ಹಂತದಲ್ಲಿದೆ ;

(ಈ) ಉಭಯ ಜಿಲ್ಲೆಗಳಲ್ಲಿ ಈಗಾಗಲೇ ಕೆಲವು ಉಪಕೇಂದ್ರಗಳಿಗೆ ಸಮುದಾಯ ಆರೋಗ್ಯ ಅಧಿಕಾರಿಗಳನ್ನು (ಸಿ ಎಚ್ ಒ) ನೇಮಿಸಲಾಗಿದ್ದು ಅನೇಕ ಆರೋಗ್ಯ ಸೇವೆಗಳನ್ನು ನೀಡುತ್ತಿದ್ದು, ಅವರಿಗೆ ಅಲ್ಲಿಯೇ ವಾಸ್ತವ್ಯ ಮಾಡಲು ಅವಕಾಶವಾಗುವಂತೆ ವಸತಿ ಗೃಹಗಳನ್ನು ನಿರ್ಮಿಸುವ ಹಾಗೂ ಈ ಮೂಲಕ

ಗ್ರಾಮಾಂತರ ಜನರಿಗೆ ಕೆಲವು ತುರ್ತು ಆರೋಗ್ಯ ಸೇವೆ ನೀಡುವ ಬಗ್ಗೆ ಸರ್ಕಾರ ಯಾವ ರೀತಿ ಕ್ರಮವಹಿಸುತ್ತಿದೆ ;

(ಉ) ರಾಜ್ಯದಲ್ಲಿ ತುರ್ತು ಆರೋಗ್ಯ ಸೇವೆಗಳನ್ನು ನೀಡುವ ಸಿಬ್ಬಂದಿಗಳು ಕೆಲಸದ ಸ್ಥಳಗಳಲ್ಲಿ ಅಥವಾ ಅಗತ್ಯಕ್ಕೆ ತಕ್ಕಂತೆ ಅಲ್ಪಾವಧಿಯಲ್ಲಿ ಆರೋಗ್ಯ ಸೇವಾ ಕೇಂದ್ರಗಳಿಗೆ ತಲುಪುವ ಅಂತರದಲ್ಲಿ ವಾಸ್ತವ್ಯ ಮಾಡುವ ಬಗ್ಗೆ ಯಾವ ರೀತಿಯಲ್ಲಿ ಖಚಿತಪಡಿಸಲಾಗುತ್ತಿದೆ ?

## ಆಹಾರ ಸಂರಕ್ಷಣೆ ಕುರಿತು

**ಶ್ರೀ ಮಂಜುನಾಥ್ ಬಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೫ (೧೧೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೧ರಿಂದ ಜಾರಿಯಲ್ಲಿರುವ ಆಹಾರ ಸುರಕ್ಷತಾ ನಿಯಮಗಳನ್ನು ಬದಲಾದ ಸನ್ನಿವೇಶದಲ್ಲಿ ತಿದ್ದುಪಡಿ ಮಾಡುವ ಅಥವಾ ಸುಧಾರಿಸುವ ಬಗ್ಗೆ ಸರಕಾರ ಆಲೋಚಿಸಿದೆಯೇ ; (ವಿವರ ನೀಡುವುದು)

(ಆ) ಆಹಾರ ಪದಾರ್ಥ, ಖಾದ್ಯತೈಲ, ವನಸ್ಪತಿ, ಹಣ್ಣು–ಹಂಪಲು, ಮೀನು–ಮಾಂಸ (ಕೃತಕ ಬಣ್ಣ ಮತ್ತು ನಿಷೇಧಿತ ಸಂರಕ್ಷಕ) ಇತ್ಯಾದಿ ಕಲಬೆರಕೆಯ ಮಾದರಿಗಳನ್ನು ಮತ್ತು ನಿಷೇಧಿತ ಪ್ಯಾಕೇಜಿಂಗ್ ವಸ್ತು ರಾಸಾಯನಿಕ ಲೇಪಿತ ಕಪ್ ಪ್ಲೇಟ್ ಇತ್ಯಾದಿಗಳ ಉತ್ಪಾದನೆ/ಬಳಕೆಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಆಹಾರ ಸುರಕ್ಷತಾ ನಿಯಮಗಳು ಜಾರಿಗೊಳಿಸುವ ಅಥವಾ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವ ಆರೋಗ್ಯ ಇಲಾಖೆಯ ಈ ವಿಭಾಗದಲ್ಲಿ ಅರ್ಧಕ್ಕಿಂತ ಹೆಚ್ಚು ಅಧಿಕಾರಿ ಸಿಬ್ಬಂದಿಗಳ ಕೊರತೆಯಿದ್ದು, ಹೆಚ್ಚಿನವರು ನಿಯೋಜನೆ ಮೇಲೆ

ಕಾರ್ಯನಿರ್ವಹಿಸುತ್ತಿದ್ದು, ಪೂರ್ಣಕಾಲಿಕ ತಾಂತ್ರಿಕತೆ, ನೈಪುಣ್ಯತೆಯಿರುವ ಅಗತ್ಯ ಅಧಿಕಾರಿ/ಸಿಬ್ಬಂದಿ ನೇಮಿಸಲಾಗಿದೆಯೇ ; ನೇಮಿಸದಿದ್ದರೆ, ಯಾವ ಕಾಲಮಿತಿಯಲ್ಲಿ ನೇಮಿಸಲಾಗುವುದು ;

(ಈ) ಪ್ರಸ್ತುತ ಹೆಚ್ಚುತ್ತಿರುವ ಸಂಸ್ಕರಿಸಿದ ಆಹಾರ ಬಳಕೆಯ ಹಿನ್ನಲೆಯಲ್ಲಿ ಮತ್ತು ಪೊಟ್ಟಣಗಳ ಮೂಲಕ ಆಹಾರ ವಸ್ತು ಸರಬರಾಜು ಆಗುತ್ತಿರುವಾಗ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಹಾರ ಸುರಕ್ಷತಾ ನಿಯಮಗಳು ಪಾಲನೆಯಾಗುವುದನ್ನು ಖಾತರಿಪಡಿಸಲು ಒಂದು ಪೂರ್ಣ ಪ್ರಮಾಣದ ತಪಾಸಣಾ ವ್ಯವಸ್ಥೆಯ ಸೃಜಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಯಾವುದೇ ಆಹಾರ ಪದಾರ್ಥ, ಖಾದ್ಯತೈಲ, ವನಸ್ಪತಿ, ಹಣ್ಣು, ಹಂಪಲು, ಮೀನು ಮಾಂಸ (ಕೃತಕ ಬಣ್ಣ ಮತ್ತು ನಿಷೇಧಿತ ಸಂರಕ್ಷಕ) ಇತ್ಯಾದಿ ಕಲಬೆರಕೆಯ ಮಾದರಿಗಳನ್ನು ಪರೀಕ್ಷಿಸಲು ಇರುವ ಒಟ್ಟು ಪ್ರಯೋಗಾಲಗಳ ಸಂಖ್ಯೆ ಎಷ್ಟು ; ಸರ್ಕಾರದಿಂದ ಮಾನ್ಯತೆ ಹೊಂದಿದ ಖಾಸಗಿ ಪ್ರಯೋಗಾಲಯಗಳ ಸಂಖ್ಯೆ ಎಷ್ಟು ; ಅವು ಕರ್ನಾಟಕದ ಯಾವ ಜಿಲ್ಲೆಗಳಲ್ಲಿವೆ ?

## ಕರ್ನಾಟಕ ರಾಜ್ಯದಲ್ಲಿ ಕುದ್ರುಗಳಲ್ಲಿ ನಿರ್ಮಾಣ ಕುರಿತು

**ಶ್ರೀ ಮಂಜುನಾಥ್ ಬಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೬ (೧೧೦೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳು ವಿದ್ಯುತ್ ವಿತರಣಾ ಶುಲ್ಕ ನಿರ್ಧರಿಸುವ ನಿಯಮಗಳೇನು ; ದಕ್ಷಿಣ ಕನ್ನಡ ಜಿಲ್ಲೆಯ ಕೆಲವು ಗ್ರಾಮ ಪಂಚಾಯಿತಿಗಳಿಗೆ ಕುಡಿಯುವ

ನೀರಿನ ಸ್ಥಾವರಗಳಿಗೆ ಮಂಜೂರಾತಿ ಹೊರೆಗಿಂತ ಹೆಚ್ಚುವರಿ ಹೊರೆಯೆಂದು ಪರಿಗಣಿಸಿ ಪ್ರತಿ ಸ್ಥಾವರದ ಮೇಲೆ ೫೦೦– ೨೦೦೦/ ಪ್ರತಿ ತಿಂಗಳಿಗೆ ದಂಡವನ್ನು ಯಾವ ನಿಯಮದಡಿ ವಿಧಿಸಲಾಗುತ್ತಿದೆ ;

(ಆ) ರಾಜ್ಯದ ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳ ವಿವಿಧ ವಿದ್ಯುತ್ ಉತ್ಪಾದನಾ ಸಂಸ್ಥೆಗಳಿಂದ ವಿದ್ಯುತ್ ಖರೀದಿ ವೆಚ್ಚವೆಷ್ಟು ; ಗ್ರಾಹಕರಿಗೆ ವಿಧಿಸುವ ವೆಚ್ಚವೆಷ್ಟು ; ಟಿ ಮತ್ತು ಡಿ ನಷ್ಟ ಪ್ರಮಾಣವೆಷ್ಟು; ಅದರ ವೆಚ್ಚವನ್ನು ಹೇಗೆ ಭರಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ರಾಜ್ಯದ ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳು ಖಾಸಗಿ ಸೌರ ವಿದ್ಯುತ್ ಉತ್ಪಾದನಾ ಸಂಸ್ಥೆಗಳಿಂದ ಮತ್ತು ಸೌರ ವಿದ್ಯುತ್ ಫಲಕ ಅಳವಡಿಸಿದ ಗ್ರಾಹಕರಿಂದ ಖರೀದಿಸುವ ವಿದ್ಯುತ್ತಿಗೆ ಪಾವತಿಸುವ ಖರೀದಿ ವೆಚ್ಚವೆಷ್ಟು ; ಅದೇ ಗ್ರಾಹಕರಿಗೆ ವಿದ್ಯುತ್ ಖರೀದಿಗೆ ವಿಧಿಸುವ ವೆಚ್ಚವೆಷ್ಟು ;

(ಈ) ಸೌರ ವಿದ್ಯುತ್ ಫಲಕ ಅಳವಡಿಸುವ ಗ್ರಾಹಕ ಮತ್ತು ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳ ನಡುವೆ ಮಾಡಿಕೊಳ್ಳುವ ಒಪ್ಪಂದಗಳ ನಿಯಮಗಳೇನು ಮತ್ತು ವಿಧಿಸಿರುವ ಷರತ್ತುಗಳೇನು ;

(ಉ) ಸೌರ ವಿದ್ಯುತ್ ಫಲಕ ಅಳವಡಿಸುವ ಗ್ರಾಹಕ ಮತ್ತು ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳ ನಡುವೆ ಮಾಡಿಕೊಳ್ಳುವ ದೀರ್ಘಕಾಲಿಕ ಒಪ್ಪಂದಗಳಲ್ಲಿ ಕೆಲವು ಕ್ಲಿಷ್ಟಕರ ತಾಂತ್ರಿಕ ಷರತ್ತುಗಳನ್ನು ತಿಳಿಯದ ರೀತಿಯಲ್ಲಿ ಅಳವಡಿಸಿದ್ದು ಅವು ಗ್ರಾಹಕ ವಿರೋಧಿಯಾಗಿದ್ದು, ಅದನ್ನು ಬದಲಾಯಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ; ಈ ಕುರಿತು ಇಲಾಖೆಯ ಗಮನಕ್ಕೆ ಬಂದ ಪ್ರಕರಣಗಳೆಷ್ಟು ; ಗ್ರಾಹಕ ಸ್ನೇಹಿಯಾಗಿ ಅವುಗಳನ್ನು ಮಾರ್ಪಡಿಸಲು ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯದಲ್ಲಿ ಕುದ್ರುಗಳಲ್ಲಿ ನಿರ್ಮಾಣ ಕುರಿತು

**ಶ್ರೀ ಮಂಜುನಾಥ್ ಬಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೭ (೧೧೦೪) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ CRZ ೨೦೧೯ ನಿಯಮಾವಳಿಯಂತೆ ಕುದ್ರು (ದ್ವೀಪ) ಪ್ರದೇಶದಲ್ಲಿ ಕರಾವಳಿ ನಿಯಂತ್ರಣ ವಲಯ ಎಷ್ಟು ಮೀಟರ್‌ವರೆಗೆ ಇರುತ್ತದೆ ; (ವಿವರ ನೀಡುವುದು)

(ಆ) ರಾಜ್ಯದ ಕರಾವಳಿ ತೀರದಲ್ಲಿ ಕುದ್ರು (ದ್ವೀಪ) ಪ್ರದೇಶದಲ್ಲಿ ನೆಲೆಸಿರುವ ಮೂಲ ನಿವಾಸಿಗಳಿಗೆ ಮನೆ ನಿರ್ಮಾಣ ಮಾಡಲು ಅನುಸರಿಸಬೇಕಾದ ಕ್ರಮಗಳು ಯಾವುವು ;

(ಇ) ರಾಜ್ಯದ ಕರಾವಳಿ ತೀರದಲ್ಲಿ ಜನ ಸಾಮಾನ್ಯರು CRZ ನಿಯಮದಿಂದ ಹಲವಾರು ಸಮಸ್ಯೆಗಳನ್ನು ಅನುಭವಿಸುತ್ತಿದ್ದು, ಅದರಲ್ಲೂ ಕುದ್ರು (ದ್ವೀಪ) ಪ್ರದೇಶದಲ್ಲಿ ನೆಲೆಸಿರುವ ಮೂಲ ನಿವಾಸಿಗಳಿಗೆ ತಮ್ಮ ಊರಿನಲ್ಲಿಯೇ ಮನೆ ನಿರ್ಮಾಣ ಮಾಡುವುದು ಕಷ್ಟಸಾಧ್ಯವಾಗಿರುವ ಬಗ್ಗೆ ಸರ್ಕಾರ ಏನು ಕ್ರಮವಹಿಸಿದೆ ;

(ಈ) ಪರಿಸರ ಇಲಾಖೆಯಿಂದ ಈಗಾಗಲೇ (IIMP) Intergrated Island Management Plan ರೂಪಿಸಲಾಗಿದೆಯೇ ಹಾಗೂ ಇದರ ಬಗ್ಗೆ ಮಾಹಿತಿ ನೀಡುವುದು ;

(ಉ) ಮೂಲ ನಿವಾಸಿಗಳಿಗೆ ಗರಿಷ್ಠ ೧೦೦ ಚದರ ಮೀಟರ್ ವಿಸ್ತೀರ್ಣದ ಮನೆ ನಿರ್ಮಾಣ ಮಾಡಲು ಸ್ಥಳೀಯಾಡಳಿತ ಸಂಸ್ಥೆಗಳಿಗೆ ಅನುಮತಿ ನೀಡುವ ಜೊತೆಗೆ ಆದಷ್ಟು ಬೇಗ ಕೇಂದ್ರ ಸರ್ಕಾರದ ಪರಿಸರ ಮಂತ್ರಾಲಯಕ್ಕೆ ಈ ಕುರಿತ ನಿಯಮಗಳ ಸರಳೀಕರಣ ಮಾಡುವ ಕುರಿತು ಯಾವ ರೀತಿ ಕ್ರಮವಹಿಸಿದೆ ?

## ಬೇಸಿಗೆ ಹಿನ್ನಲೆಯಲ್ಲಿ ಆರೋಗ್ಯ ಸಮಸ್ಯೆಗಳ ನಿಯಂತ್ರಣಕ್ಕೆ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೮ (೪೫೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈ ವರ್ಷ ಬೇಸಿಗೆ ಪ್ರಾರಂಭಕ್ಕೂ ಮುನ್ನವೇ ಮಕ್ಕಳು ಸೇರಿದಂತೆ ಸಾರ್ವಜನಿಕರಲ್ಲಿ ತೀವ್ರ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಆರೋಗ್ಯ ಸಮಸ್ಯೆಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ;

(ಇ) ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಅವಶ್ಯವಿರುವ ಔಷಧಿ ದಾಸ್ತಾನುಗಳನ್ನು ಸಂಗ್ರಹಿಸಲಾಗಿದೆಯೇ ?

## ವನ್ಯಪ್ರಾಣಿ ಮತ್ತು ಮಾನವ ಸಂಘರ್ಷದ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೯ (೪೫೨) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ವನ್ಯಪ್ರಾಣಿ ಮತ್ತು ಮಾನವ ಸಂಘರ್ಷದಿಂದ ಪ್ರಾಣಹಾನಿಗೊಳಗಾದ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ವನ್ಯಜೀವಿ ಮತ್ತು ಮಾನವ ಸಂಘರ್ಷ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈವರೆಗೆ ಎಷ್ಟು ವನ್ಯಜೀವಿಗಳನ್ನು ಸೆರೆ ಹಿಡಿಯಲಾಗಿದೆ ; (ವಿವರಗಳನ್ನು ಒದಗಿಸುವುದು)

(ಈ) ಹೀಗೆ ಸೆರೆಹಿಡಿಯಲಾದ ಪ್ರಾಣಿಗಳ ಪುನರ್ವಸತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಅನ್ನಪೂರ್ಣ ಯೋಜನೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೦ (೧೦೬೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಅನ್ನಪೂರ್ಣ ಯೋಜನೆಯನ್ನು ಬಳಸಿಕೊಳ್ಳುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂಬ ದೂರುಗಳು ಕೇಳಿ ಬಂದಿರುವುದು ನಿಜವೇ ;

(ಆ) ಹಿರಿಯ ನಾಗರೀಕರಿಗೆ ಉಚಿತವಾಗಿ ೧೦ ಕೆ.ಜಿ. ಅಕ್ಕಿ ಕೊಡುವ ಈ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ೬೦ ವರ್ಷ ದಾಟಿದ ನಾಗರೀಕರ ಪಟ್ಟಿ ಒದಗಿಸದಿರಲು ಕಾರಣಗಳೇನು ;

(ಇ) ಕೇಂದ್ರದ ಈ ಯೋಜನೆಯನ್ನು ರಾಜ್ಯ ಸರ್ಕಾರ ಬಳಸಿಕೊಳ್ಳಲು ಕ್ರಮ ಕೈಗೊಳ್ಳುವುದೇ ?

## ರಾಜ್ಯದ ಜನತೆಗೆ ನೀಡಿರುವ ಯಶಸ್ವಿನಿ ಯೋಜನೆಯ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೧ (೧೮೯೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಶಸ್ವಿನಿ ಯೋಜನೆಯಡಿ ಹೊಂದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆಯಿಂದ ಸರ್ಕಾರಕ್ಕೆ ಎಷ್ಟು ರಾಜಸ್ವ ಸಂಗ್ರಹವಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ೦೨ ವರ್ಷಗಳಿಂದ ರಾಜ್ಯದಲ್ಲಿ ಯಶಸ್ವಿನಿ ಯೋಜನೆಯಡಿ ಫಲಾನುಭವಿಗಳ ಪರವಾಗಿ ಸರ್ಕಾರ ಯಾವ ಯಾವ ಆಸ್ಪತ್ರೆಗಳಿಗೆ ಎಷ್ಟು ಬಿಲ್ ಪಾವತಿಸಿದೆ ; (ಆಸ್ಪತ್ರೆವಾರು ವಿವರ ಒದಗಿಸುವುದು)

(ಇ) ಯಾವ ಯಾವ ಖಾಯಿಲೆಗಳಿಗೆ ಈ ಯೋಜನೆ ಅನ್ವಯವಾಗುತ್ತದೆ ಹಾಗೂ ಯಾವ ಯಾವ ಖಾಯಿಲೆಗೆ ಈ ಯೋಜನೆ ಅನ್ವಯವಾಗುವುದಿಲ್ಲ ? (ಸಂಪೂರ್ಣ ವಿವರ ಒದಗಿಸುವುದು)

## ಶಿಕ್ಷಣ ಇಲಾಖೆಯ ಬೋಧಕೇತರ ವೃಂದದ ಕಾರ್ಯನಿರ್ವಹಣ ವರದಿಗಳನ್ನು ಸಲ್ಲಿಸುವ ಕುರಿತು

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨೨ (೧೦೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಬೋಧಕೇತರ ವೃಂದದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಖಾಯಂಪೂರ್ವ ಸೇವಾವಧಿ ಘೋಷಣೆ/ ಸ್ವಯಂ ಚಾಲಿತ ವೇತನ ಬಡ್ತಿ/ಬಡ್ತಿ ಇತರೆ ಸಮಯದಲ್ಲಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಆದೇಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವ್ಯವಸ್ಥಿತವಾಗಿ ಹಾಗೂ ಸಮರ್ಪಕವಾಗಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ನಿರ್ವಹಿಸದಿರುವುದರಿಂದ ಸಮಯೋಚಿತವಾಗಿ ಸಲ್ಲಿಸಲು ಕಷ್ಟ ಸಾಧ್ಯವಾಗುತ್ತಿರುವ ಕಾರಣ ಶಿಕ್ಷಕ ವೃಂದದವರಿಗೆ ಪರಿಗಣಿಸುವಂತೆಯೇ ಸಂಬಂಧಪಟ್ಟ ಅಧಿಕಾರಿಗಳ ವಿಶೇಷ ವರದಿ ದೃಢೀಕರಣವನ್ನು ಪರಿಗಣಿಸುವ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಇ) ವಿಶೇಷ ವರದಿ ಪರಿಗಣಿಸುವುದಾದಲ್ಲಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆಯೇ ; ಹಾಗಿದ್ದರೆ, ಯಾವ ರೀತಿ ನಿರ್ದೇಶನ ನೀಡಲಾಗಿದೆ ; (ಮಾಹಿತಿ ನೀಡುವುದು)

(ಈ) ವಿಶೇಷ ವರದಿ ಪರಿಗಣಿಸದಿರಲು ಕಾರಣಗಳೇನು ; ಒಂದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಅಧಿಕಾರಿ/ನೌಕರರುಗಳಿಗೆ ತಾರತಮ್ಯ ಮಾಡಿದಂತಾಗುವುದಿಲ್ಲವೇ ; (ಈ ಕುರಿತು ಸ್ಪಷ್ಟ ಅಭಿಪ್ರಾಯ ನೀಡುವುದು)

(ಉ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆಯಾ ವರ್ಷದಲ್ಲಿ ಬರೆಯುವ ಮತ್ತು ನಿರ್ವಹಿಸುವ ಕುರಿತು ಸರ್ಕಾರದ ಆದೇಶಗಳಿದ್ದಾಗ್ಯೂ ಸಹ ಸಮಯೋಚಿತವಾಗಿ ನಿರ್ವಹಣೆ ಮಾಡುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವ್ಯವಸ್ಥಿತವಾಗಿ ನಿರ್ವಹಣೆ ಮಾಡದಿರಲು ಕಾರಣಗಳೇನು ; ಅಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೩ (೧೧೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೀನ್ ಹೈಡ್ರೋಜನ್ ಭವಿಷ್ಯದ ಇಂಧನ, ಖಾಸಗಿ ಬಂಡವಾಳವನ್ನು ಈ ವಲಯಕ್ಕೆ ಆಕರ್ಷಿಸಲು ३೦೦ ಕಿಲೋ ವ್ಯಾಟ್ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಪ್ರಾಯೋಗಿಕವಾಗಿ ಅಂದಾಜು ೧೦ ಕೋಟಿ ರೂ.ವೆಚ್ಚದಲ್ಲಿ MNRE ನಿಧಿಯಿಂದ ಸ್ವಯಂ–ಸುಸ್ಥಿರ ಘಟಕದ ಆಧಾರದ ಮೇಲೆ KREDL ವತಿಯಿಂದ ಅನುಷ್ಠಾನಗೊಳಿಸಲಾಗುವುದೆಂದು ಮತ್ತು ಗ್ರೀನ್

ಹೈಡ್ರೋಜನ್ ನೀತಿಯನ್ನು ರೂಪಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ರಾಜ್ಯದಲ್ಲಿ ಯಾವ ಜಿಲ್ಲೆಯಲ್ಲಿ ಈ ಸ್ಥಾವರವನ್ನು ಸ್ಥಾಪಿಸಲು ಯೋಜಿಸಲಾಗಿದೆ ;

(ಆ) ೩೦೦ ಕಿಲೋ ವ್ಯಾಟ್ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಸ್ಥಾಪಿಸುವ ಕಾಮಗಾರಿಯ ಪ್ರಸ್ತುತ ಹಂತವೇನು ; ಈ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ ; (ಇದ್ದಲ್ಲಿ, ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು)

(ಇ) ಆಯವ್ಯಯದಲ್ಲಿ ಘೋಷಿಸಿರುವಂತೆ ಗ್ರೀನ್ ಹೈಡ್ರೋಜನ್ ನೀತಿಯನ್ನು ರೂಪಿಸಲಾಗಿದೆಯೇ ? (ಇದ್ದಲ್ಲಿ, ನೀತಿಯ ಪ್ರತಿಯನ್ನು ನೀಡುವುದು)

## ಮಧುಮೇಹ ಔಷಧಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೪ (೧೧೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ವರ್ಗದ ಮಧುಮೇಹ ವಿರೋಧಿ ಔಷಧಿಗಳಾದ ಖಉಐಖ–೨ ಬಳಕೆಗೆ ಸಂಬಂಧಿಸಿದಂತೆ ಆಗುವ ದುಷ್ಪರಿಣಾಮಗಳ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಮೇಲಿನ ಔಷಧಿಗಳ ದುಷ್ಪರಿಣಾಮಗಳ ವರದಿಯನ್ನು ಸರ್ಕಾರ ಸ್ವೀಕರಿಸಿದೆಯೇ; ಇದ್ದಲ್ಲಿ, ಅದರ ವಿವರಗಳೇನು ;

(ಇ) ಕರ್ನಾಟಕದ ಔಷಧ ನಿಯಂತ್ರಣ ಇಲಾಖೆಯು ಮಧುಮೇಹ ರೋಗಿಗಳ ಮೇಲೆ ಈ ಔಷಧಿಯ ದುಷ್ಪರಿಣಾಮಗಳ ಕುರಿತು ತನ್ನ ವರದಿಯನ್ನು ಸಲ್ಲಿಸಿದೆಯೇ ; ಇದ್ದಲ್ಲಿ, ವರದಿಯ ಪ್ರತಿಯನ್ನು ನೀಡುವುದು ;

(ಈ) ಕರ್ನಾಟಕದಲ್ಲಿ ಲಕ್ಷಾಂತರ ಮಧುಮೇಹ ರೋಗಿಗಳಲ್ಲಿ SGLT–೨ ಬಳಕೆಯ ವಿರುದ್ಧ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಎಫ್.ಓ.ಸಿ. ಪ್ರಕರಣಗಳ ಮಾಹಿತಿ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೫ (೧೧೧೧) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಅರಣ್ಯ ಇಲಾಖೆ ವತಿಯಿಂದ ೨೦೧೯ ರಿಂದ ೨೦೨೩ ರವರೆಗೆ ಎಷ್ಟು ಅರಣ್ಯ ಅಪರಾಧ ಪ್ರಕರಣಗಳನ್ನು (ಎಫ್.ಓ.ಸಿ) ದಾಖಲಿಸಿದೆ ;

(ಆ) ಈ ಅವಧಿಯಲ್ಲಿ ಅರಣ್ಯ ಭೂಮಿಗಳ ಅತಿಕ್ರಮಣ, WLP ಕಾಯ್ದೆಯಡಿಯಲ್ಲಿರುವ ಪ್ರಕರಣಗಳು, ಅನಧಿಕೃತವಾಗಿ ಮರಗಳನ್ನು ಕಡಿಯುವುದು, ಇತರೆ (ಅರಣ್ಯ ಉತ್ಪನ್ನಗಳ ಅಕ್ರಮ ಸ್ವಾಧೀನ/ಸಾಗಣೆ ಸೇರಿದಂತೆ) ಗಳನ್ನು ಒಟ್ಟು ೨೫೪೧ ಅರಣ್ಯ ಅಪರಾಧ ಪ್ರಕರಣಗಳನ್ನು ದಾಖಲಿಸಿದ್ದು, ಅದರಲ್ಲಿ ಕೇವಲ ನ್ಯಾಯಾಲಯದಿಂದ ೨೨ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದ್ದು ನಿಜವೇ ; ಇದ್ದಲ್ಲಿ, ಉಳಿದ ಪ್ರಕರಣಗಳು ವಿಲೇವಾರಿ ಆಗದೇ ಇರುವುದಕ್ಕೆ ಕಾರಣಗಳೇನು ;

(ಇ) ಬಹುತೇಕ ಪ್ರಕರಣಗಳಲ್ಲಿ ವಲಯ ಅರಣ್ಯಾಧಿಕಾರಿಗಳಿಂದ ವಿಚಾರಣಾ ವರದಿಗಳನ್ನು ಸಿದ್ಧಪಡಿಸದೇ ಇರುವುದರಿಂದ ಪ್ರಕರಣಗಳು ಬಾಕಿ ಉಳಿದಿರುವುದಕ್ಕೆ ಕಾರಣವಾಗಿದೆಯೇ ; ಇದ್ದಲ್ಲಿ, ಇಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ವೈದ್ಯಕೀಯ ಕಾಲೇಜು ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೬ (೧೧೧೨) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಸಾಲಿನಲ್ಲಿ ವೈದ್ಯಕೀಯ ಕಾಲೇಜುಗಳ ನಿರ್ಮಾಣ ಮತ್ತು ಉಪಕರಣಗಳ ಖರೀದಿಗಾಗಿ ४೦೦ ಕೋಟಿ ರೂ.ಗಳ ಅನುದಾನವನ್ನು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ನಿರ್ಮಾಣಕ್ಕಾಗಿ ೧೩೦ ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು ನಿಜವೇ ;

(ಆ) ಇದ್ದಲ್ಲಿ, ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಮತ್ತು ಎಷ್ಟು ವೈದ್ಯಕೀಯ ಕಾಲೇಜುಗಳಿಗೆ ಉಪಕರಣಗಳನ್ನು ಖರೀದಿಸಲಾಗಿದೆ ; (ಉಪಕರಣಗಳ ವಿವರ ನೀಡುವುದು)

(ಇ) ಹಾಗೂ ರಾಜ್ಯದ ಯಾವ ಜಿಲ್ಲೆಗಳಲ್ಲಿ ೧೩೦ ಕೋಟಿ ರೂ.ಗಳ ಅನುದಾನದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ ; ಈ ಕಾಮಗಾರಿಯನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ; (ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು)

(ಈ) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು ? (ಮಾಹಿತಿ ನೀಡುವುದು)

## ಅನುದಾನ ರಹಿತ ಶಾಲೆಗಳಿಂದ ಪಡೆದಿರುವ ಹೆಚ್ಚುವರಿ ಮೊತ್ತದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೭ (೧೧೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ನೇ ಸಾಲಿನಲ್ಲಿ ಅನುದಾನ ರಹಿತ ಖಾಸಗಿ ಶಾಲೆಗಳಿಂದ ಸುಮಾರು ೩೪೫.೮೦ ಕೋಟಿ ರೂ.ಗಳ ಹೆಚ್ಚುವರಿ ಶಾಲಾ ಶುಲ್ಕ ಸಂಗ್ರಹಿಸಿದ್ದು, ನ್ಯಾಯಾಲಯದ ಆದೇಶದಂತೆ ೨೦೧೯–೨೦ ರಲ್ಲಿ ಸಂಗ್ರಹಿಸಲಾದ ಶಾಲಾ ಶುಲ್ಕದಲ್ಲಿ ಶೇ.೮೫ ರಷ್ಟು ಶುಲ್ಕವನ್ನು ೨೦೨೦–೨೧ನೇ ಸಾಲಿನಲ್ಲಿ ಸಂಗ್ರಹಿಸಲು ಆದೇಶವಿದ್ದರೂ ಅದನ್ನು ಉಲ್ಲಂಘಿಸಿ ಹೆಚ್ಚುವರಿ ಶಾಲೆ ಶುಲ್ಕ ಸಂಗ್ರಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಈ ಶಾಲೆಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಆ) ಇದೇ ನ್ಯಾಯಾಲಯದ ಆದೇಶದಲ್ಲಿ ೨೦೨೦–೨೧ನೇ ಸಾಲಿನ ಆರ್.ಟಿ.ಈ (Right To Education) ಯೋಜನೆಯಡಿ ಅನುದಾನ ರಹಿತ ಶಾಲೆಗಳಿಗೆ ಪಾವತಿಸಲಾಗುತ್ತಿದ್ದ ಶುಲ್ಕದಲ್ಲಿ ಶೇ.೧೫ ರಷ್ಟು ರಿಯಾಯಿತಿ ನೀಡಲು ಆದೇಶಿಸಿದರೂ, ಅನುದಾನ ರಹಿತ ಶಾಲೆಗಳು ಸರ್ಕಾರಕ್ಕೆ ಹೆಚ್ಚುವರಿ ಶುಲ್ಕವನ್ನು ಕ್ಲೈಮ್ ಮಾಡಿ ೭.೦೭ ಕೋಟಿ ರೂ.ಗಳ ಮೊತ್ತ ಪಡೆದಿರುತ್ತಾರೆಂಬ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಈ ಶಾಲೆಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು;

(ಇ) ಈ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕೈಗೊಂಡಿರುವ ಕ್ರಮವೇನು ?

## ಸಾರ್ವಜನಿಕ ಆಸ್ಪತ್ರೆಗಳಲ್ಲಿನ ಚಿಕಿತ್ಸೆ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೮ (೧೧೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಕೋಟೆ ಸಾರ್ವಜನಿಕ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು. ಸಾರ್ವಜನಿಕರಿಗೆ ಗಂಭೀರ ಖಾಯಿಲೆಗಳ ಚಿಕಿತ್ಸೆಗಾಗಿ ಸುಸಜ್ಜಿತವಾದ ಯಂತ್ರೋಪಕರಣ ಆಸ್ಪತ್ರೆಯಲ್ಲಿ ಇಲ್ಲದಿರುವುದರಿಂದ ಬೇರೆ ಬೇರೆ ಆಸ್ಪತ್ರೆಗಳಿಗೆ ರೋಗಿಗಳನ್ನು ಸ್ಥಳಾಂತರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂಕಿ–ಅಂಶಗಳ ವಿವರಗಳ ಮಾಹಿತಿ ನೀಡುವುದು ;

(ಆ) ಪ್ರಸ್ತುತ ವರ್ಷದಲ್ಲಿ ಈಗಿರುವ ೧೦೦ ಹಾಸಿಗೆಗಳ ಆಸ್ಪತ್ರೆಯನ್ನು ಐಸಿಯು ಸೌಲಭ್ಯಗಳನ್ನೊಳಗೊಂಡಂತೆ ೨೫೦ ಹಾಸಿಗೆಯುಳ್ಳ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸುವ ಅಥವಾ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಗೃಹಜ್ಯೋತಿ ಯೋಜನೆಯಡಿಯಲ್ಲಿ ವಿದ್ಯುತ್ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೯ (೧೧೪೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗೃಹಜ್ಯೋತಿ ಯೋಜನೆಯಡಿ, ರಾಜ್ಯದ ಪ್ರತಿ ಮನೆಗೆ ೨೦೦ ಯೂನಿಟ್‌ಗಳವರೆಗೆ ಉಚಿತ ವಿದ್ಯುತ್ ಒದಗಿಸುವ ಯೋಜನೆ ಆರಂಭವಾದಾಗಿನಿಂದ ಈವರೆಗೆ ಎಷ್ಟು ಹಣ ವೆಚ್ಚ ಮಾಡಲಾಗಿದೆ; ವಿದ್ಯುತ್ ಕಂಪನಿಗೆ ಪಾವತಿಸಲು ಬಾಕಿ ಇರುವ ಹಣವೆಷ್ಟು ;

(ಆ) ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಪಾವತಿಸಲು ಬಾಕಿ ಇರುವ ಹಣವೆಷ್ಟು ?

## ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೦ (೧೧೪೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಕೋಟೆ ತಾಲ್ಲೂಕಿನ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ/ ಸಮುದಾಯ ಆರೋಗ್ಯ ಕೇಂದ್ರ ಹಾಗೂ ೨೪/೭ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು/ವಿವಿಧ ವರ್ಗಗಳ ಸಿಬ್ಬಂದಿಗಳ ಕೊರತೆ ಇರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ಹುದ್ದೆಗಳು ಖಾಲಿ ಇರುತ್ತವೆ; ಹೊಸಕೋಟೆ ತಾಲ್ಲೂಕಿನಲ್ಲಿ ಮಂಜೂರಾದ. ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸಿಬ್ಬಂದಿಗಳ ಕೊರತೆ ನಿವಾರಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಪ್ರಾಥಮಿಕ ಆರೋಗ್ಯ ಕೇಂದ್ರ/ಸಮುದಾಯ ಆರೋಗ್ಯ ಕೇಂದ್ರ ಹಾಗೂ ೨೪/೭ ಆಸ್ಪತ್ರೆಗಳಲ್ಲಿ ಸಂಜೆ, ರಾತ್ರಿ ಸಮಯದಲ್ಲಿ, ರಜೆ ದಿನಗಳಲ್ಲಿ ಆಸ್ಪತ್ರೆಗಳಿಗೆ ಬೀಗ ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಪರ್ಯಾಯ ವ್ಯವಸ್ಥೆಗಳೇನು ?

## ವೈದ್ಯರು ಗ್ರಾಮಾಂತರ ಪ್ರದೇಶಗಳಲ್ಲಿ ಕರ್ತವ್ಯ ನಿರ್ವಹಿಸುವ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೧ (೧೧೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೈದ್ಯರುಗಳು ವಿದ್ಯಾಭ್ಯಾಸ ಮುಗಿಸಿದ ನಂತರ ಗ್ರಾಮಾಂತರ ಪ್ರದೇಶಗಳಲ್ಲಿರುವ ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಎರಡು ವರ್ಷ ಕಾರ್ಯನಿರ್ವಹಿಸಬೇಕೆಂದು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ; (ಹಾಗಿದ್ದಲ್ಲಿ, ಪ್ರತಿ ನೀಡುವುದು)

(ಆ) ಸರ್ಕಾರಿ ವೈದ್ಯರು ಸ್ವತಂತ್ರವಾಗಿ ಖಾಸಗಿ ಆಸ್ಪತ್ರೆಗಳನ್ನು ತೆರೆಯಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಯಾವ ಕಾನೂನಿನಡಿ ಅವಕಾಶ ಕಲ್ಪಿಸಲಾಗಿದೆ ; (ಮಾಹಿತಿಯನ್ನು ನೀಡುವುದು)

(ಈ) ಸರ್ಕಾರಿ ವೈದ್ಯರು ಖಾಸಗಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸಲು ಅವಕಾಶವಿದಯೇ; ಹಾಗಿದ್ದಲ್ಲಿ ಯಾವ ಕಾನೂನಿನಡಿ ಅವಕಾಶ ನೀಡಲಾಗಿದೆ ; (ವಿವರಗಳನ್ನು ನೀಡುವುದು)

(ಉ) ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಬಂದ ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆಯ ಸೌಲಭ್ಯವಿಲ್ಲವೆಂದು ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ ಸರ್ಕಾರಿ ಅಸ್ಪತ್ರೆಗಳಲ್ಲಿ ಹೆಚ್ಚಿನ ಚಿಕಿತ್ಸೆ ಸೌಲಭ್ಯಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿನ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೩೨ (೧೦೭೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿನ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಬಿಡುಗಡೆಗೊಳಿಸಲಾಗಿರುವ ಅನುದಾನ ಎಷ್ಟು ; (ವಿಶ್ವವಿದ್ಯಾಲಯ/ ಅನುದಾನವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿನ ಎಷ್ಟು ವಿಶ್ವವಿದ್ಯಾಲಯಗಳನ್ನು ರದ್ದು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆ: ಇದ್ದಲ್ಲಿ. ಯಾವ ಕಾರಣಕ್ಕಾಗಿ ; (ವಿವರಣೆಗೊಂದಿಗೆ ಮಾಹಿತಿ ಒದಗಿಸುವುದು)

(ಇ) ಯಾವ ಯಾವ ವಿಶ್ವವಿದ್ಯಾಲಯಗಳನ್ನು ರದ್ದು ಮಾಡಲಾಗುತ್ತಿದೆ ;

(ಈ) ವಿಶ್ವವಿದ್ಯಾಲಯ ೨೦೦೦ರ ಕಾಯ್ದೆಯನ್ವಯ ಅವಲೋಕನ ಅಯೋಗವನ್ನು ೫ ವರ್ಷಗಳಿಗೊಮ್ಮೆ ರಚಿಸಿ ಅವಲೋಕನ ಮಾಡಬೇಕಾಗಿದ್ದು ಅದರಂತೆ ಅಯೋಗ ರಚನೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ ಪ್ರತಿ ಒದಗಿಸುವುದು ;

(ಉ) ವಿಶ್ವವಿದ್ಯಾಲಯಗಳಿಗೆ ಸೂಕ್ತ ಅನುದಾನ ನೀಡಲಾಗದೇ ರದ್ದತಿಗೆ ಮುಂದಾಗಿರುವುದು ನಿಜವೇ ? (ಸಂಪೂರ್ಣ ಮಾಹಿತಿ ನೀಡುವುದು)

## ಶ್ರೀ ಥಾಮಸ್ ವರದಿಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೩೩ (೧೦೭೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಜಾರಿಗೆ ತರಲಾಗಿದೆ ;

(ಆ) ಸದರಿಯವರಿಗೆ ಥಾಮಸ್ ನೇತೃತ್ವದ ವರದಿಯಂತೆ ಇದುವರೆಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲ ಸೌಲಭ್ಯಗಳನ್ನು ನೀಡದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಥಾಮಸ್ ವರದಿಯ ಶಿಫಾರಸಿನಂತೆ ಸೇವಾ ನಿಯಮಗಳನ್ನು ರೂಪಿಸದೆ ಇರುವುದರಿಂದ ಸಾವಿರಾರು ನೌಕರರು

ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿರುವುದರಿಂದ ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ನೀಡುವುದು)

(ಈ) ೨೦೦೬ರ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರರಿಗೆ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣ ಸೌಲಭ್ಯವನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿಯವರಿಗೆ ನಿವೃತಿ ನಂತರ ರಜೆ ನಗದೀಕರಣವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುತ್ತದೆ ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರಿನ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೩೪ (೧೦೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಬಹುತೇಕ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಮಕ್ಕಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಶಾಲೆಗಳು ನೀರಿನ ಸಮಸ್ಯೆ ಎದುರಿಸುತ್ತಿವೆ ; ಈ ಕುರಿತು ಸರ್ಕಾರದ ಕ್ರಮವೇನು ; (ಶಾಲಾವಾರು ಮಾಹಿತಿ ನೀಡುವುದು)

(ಆ) ಪ್ರತಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನೀರಿನ ಸಮಸ್ಯೆ ಹೋಗಲಾಡಿಸಲು ಬೋರ್‌ವೆಲ್ ಕೊರೆದು ವ್ಯವಸ್ಥೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಕಾರ್ಯಪ್ರವೃತ ಆಗುವುದೇ ; ಯಾವ ಕಾಲಮಿತಿಯೊಳಗೆ ಸಮಸ್ಯೆಯನ್ನು ಬಗೆಹರಿಸಲಾಗುವುದು ;

(ಇ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಅವರಣದಲ್ಲಿ ಗಿಡಗಳನ್ನು ನೆಡಲು ಹಾಗೂ ಅವುಗಳ ಪೋಷಣೆಗೆ ಸರ್ಕಾರವು ನೀಡುತ್ತಿರುವ ಹಣ ಎಷ್ಟು ; (ಶಾಲೆಗಳವಾರು ಮಾಹಿತಿ ನೀಡುವುದು)

(ಈ) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನೀರಿನ ಸಮಸ್ಯೆಯನ್ನು ಸುಧಾರಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಕಾರಣಗಳಿಂದ ತೆರವಾದ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೩೫ (೧೦೭೩+೧೦೭೪) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ ಮರಣ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಡಿಸೆಂಬರ್ ೨೦೨೪ ರವರೆಗೆ ಖಾಲಿ ಆಗಿರುವ ಅನುದಾನಿತ ಹುದ್ದೆಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ವಿಳಾಸ ಸಹಿತ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬದೇ ಇರುವುದರಿಂದ ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೨೦೧೦ನೇ ಸಾಲಿನಿಂದ ೨೦೨೪ನೇ ಸಾಲಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು ; (ವಿವರ ನೀಡುವುದು)

(ಈ) ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಕಾರ್ಯಭಾರದ ಕೊರತೆಯಾದಾಗ ಈ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸ್ಥಳ ನಿಯುಕ್ತಿ/ ನಿಯೋಜನೆಗೊಳಿಸಲಾಗುತ್ತಿದೆಯೇ ;

(ಉ) ಕಾರ್ಯಭಾರದ ಕೊರತೆಯಾಗಿರುವ ನೌಕರರಿಗೆ ವೇತನಕ್ಕೆ ಸಮಸ್ಯೆಯಾಗದಂತೆ ಇತರೆ ಅನುದಾನಿತ ಸಂಸ್ಥೆಗಳಿಗೆ ನಿಯೋಜನೆ ಮಾಡಿ ಕಾರ್ಯಭಾರವನ್ನು ಸರಿದೂಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿನ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೩೬ (೧೦೭೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ ಮರಣ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಡಿಸೆಂಬರ್ ೨೦೨೪ರವರೆಗೆ ಖಾಲಿ ಆಗಿರುವ ಅನುದಾನಿತ ಹುದ್ದೆಗಳ ಸಂಖ್ಯೆ ಎಷ್ಟು; (ಕಾಲೇಜುವಾರು ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು ;

(ಇ) ೨೦೧೦ನೇ ಸಾಲಿನಿಂದ ೨೦೨೪ನೇ ಸಾಲಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು ; (ವಿವರ ನೀಡುವುದು)

(ಈ) ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಕಾರ್ಯಭಾರದ ಕೊರತೆಯಾದಾಗ ಅನುದಾನಿತ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸ್ಥಳನಿಯಕ್ತಿ/ ನಿಯೋಜನೆಗೊಳಿಸಲಾಗುತ್ತಿದೆಯೇ ;

(ಉ) ಸರ್ಕಾರಿ ಹಾಗೂ ಕಾರ್ಯಭಾರದ ಕೊರತೆಯಾಗಿರುವ ನೌಕರರಿಗೆ ವೇತನಕ್ಕೆ ಸಮಸ್ಯೆಯಾಗದಂತೆ ಇತರೆ ಅನುದಾನಿತ ಸಂಸ್ಥೆಗಳಿಗೆ ನಿಯೋಜನೆ ಮಾಡಿ ಕಾರ್ಯಭಾರವನ್ನು ಸರಿದೂಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಖಾಲಿ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೯೩೭ (೧೦೭೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಖ್ಯೆ ಎಷ್ಟು ; (ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಆ) ಸದರಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಬೋಧಕೇತರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸದರಿ ಸಂಸ್ಥೆಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಈ ಕಾಲೇಜುಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ತುಂಬಲಾಗುತ್ತದೆ ? (ವಿವರ ನೀಡುವುದು)

## ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೮ (೧೦೦೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಪರಿಹರಿಸುವ ಸಲುವಾಗಿ ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಗಳನ್ನೊಳಗೊಂಡ ಜಂಟಿ ಮರು ಸರ್ವೆ ಮಾಡಿ. ಅರ್ಹ ಅರಣ್ಯ ಒತ್ತುವರಿದಾರರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಆ) ಭೂ ಮಂಜೂರಾತಿ ಕಾಯ್ದೆ ಮತ್ತು ನಿಯಮಗಳು ಹಾಗೂ ಇತರೆ ಕಾನೂನಾತ್ಮಕ ನಿಯಮಗಳಡಿಯಲ್ಲಿ ಈ ಹಿಂದೆ ಮಂಜೂರಾದ ಎಲ್ಲಾ ಅರಣ್ಯ ಭೂಮಿಯನ್ನು "Denotification" ಮಾಡದೆ ಇರುವುದರಿಂದ ಇಂದಿಗೂ ಇಂತಹ ಮಂಜೂರಾತಿಗಳು ಕರ್ನಾಟಕ ಅರಣ್ಯ ಇಲಾಖೆಯ ದಾಖಲೆಗಳಲ್ಲಿ "ಅರಣ್ಯ" ಎಂಬುದಾಗಿ ಮುಂದುವರೆಸಿಕೊಂಡು ಬರಲಾಗುತ್ತಿರುವುದರಿಂದ, ಭೂ ಮಂಜೂರಾತಿದಾರರು ಸಮಸ್ಯೆಗೆ ಒಳಗಾಗಿದ್ದು, ಅದನ್ನು ಪರಿಹರಿಸಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಇ) ಸದರಿ ಭೂ ಮಂಜೂರಾತಿ ಪ್ರಕರಣಗಳಲ್ಲಿ ಸರ್ಕಾರದ ನಿಲುವೇನು ; ಹಾಗೂ ಕೈಗೊಂಡಿರುವ ಪರಿಹಾರದ ಕ್ರಮಗಳೇನು ?

## ಜೈವಿಕ, ವೈದ್ಯಕೀಯ ತ್ಯಾಜ್ಯದ ಸಂಸ್ಕರಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩ (೧೦೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಆರೋಗ್ಯ ಕೇಂದ್ರಗಳಲ್ಲಿ ಉತ್ಪತ್ತಿಯಾಗುವ ಜೈವಿಕ ವೈದ್ಯಕೀಯ ತ್ಯಾಜ್ಯವನ್ನು ಪೂರ್ಣ ಪ್ರಮಾಣದಲ್ಲಿ ಸಂಸ್ಕರಣೆ ಮಾಡದಿರುವುದರಿಂದ, ಮಾನವನ ಆರೋಗ್ಯ ಮಾತ್ರವಲ್ಲದೇ ಪರಿಸರಕ್ಕೂ ತೀವ್ರ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಅ) ಬಂದಿದ್ದಲ್ಲಿ, ಪರಿಸರ ಹಾಗೂ ಮಾನವನ ಆರೋಗ್ಯಕ್ಕೆ ದೊಡ್ಡ ಪ್ರಮಾಣದಲ್ಲಿ ಹಾನಿಯುಂಟು ಮಾಡುವ ಜೈವಿಕ, ವೈದ್ಯಕೀಯ ತ್ಯಾಜ್ಯವನ್ನು ಪೂರ್ಣ ಪ್ರಮಾಣದಲ್ಲಿ ಸಂಸ್ಕರಣೆ ಮಾಡಲು ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ, ರಾಜ್ಯದಲ್ಲಿನ ಎಲ್ಲಾ ಹಂತದ ಆರೋಗ್ಯ ಕೇಂದ್ರಗಳಲ್ಲಿ ಜೈವಿಕ, ವೈದ್ಯಕೀಯ ತ್ಯಾಜ್ಯವನ್ನು ಪೂರ್ಣ ಪ್ರಮಾಣದಲ್ಲಿ ನಿಯಮಬದ್ಧ ಮತ್ತು ವ್ಯವಸ್ಥಿತವಾಗಿ ಸಂಸ್ಕರಿಸಿ ವಿಲೇವಾರಿ ಮಾಡಲು ಅತ್ಯವಶ್ಯವಿರುವ ಅಗತ್ಯ ಸಂಸ್ಕರಣಾ ಘಟಕಗಳನ್ನು ತೆರೆಯುವುದರ ಜೊತೆಗೆ ವೈಜ್ಞಾನಿಕ ಮಾದರಿಯಲ್ಲಿ ವಿಲೇವಾರಿ ಮಾಡಲು ಸೂಕ್ತ ಕ್ರಮ ವಹಿಸಲಾಗುವುದು?

## ವಿದ್ಯಾರ್ಥಿಗಳ ಮಾಹಿತಿಯನ್ನು ಅಪಡೇಟ್ ಮಾಡದಿರುವುದರಿಂದ ತೊಂದರೆಯಾಗಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೦ (೧೦೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಆಡಳಿತ ಮಂಡಳಿಗಳು, ವಿದ್ಯಾರ್ಥಿಗಳ ಮಾಹಿತಿಯನ್ನು ಸ್ಯಾಟ್ಸ್‌ನಲ್ಲಿ ಆಧಾರ್ ಅಪ್‌ಡೇಟ್ ಹಾಗೂ ಎಸ್.ಎಸ್.ಪಿ. ಪೋರ್ಟಲ್‌ನಲ್ಲಿ ವಿದ್ಯಾರ್ಥಿಗಳ ಇ–ಕೆವೈಸಿಯಲ್ಲಿ ಬಯೋಮೆಟ್ರಿಕ್ ಪೂರ್ಣಗೊಳಿಸದ ಪರಿಣಾಮ ಲಕ್ಷಾಂತರ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪರಿಶಿಷ್ಟ ಜಾತಿ/ಪಂಗಡ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸೇರಿ ವಿವಿಧ ವರ್ಗಗಳ ವಿದ್ಯಾರ್ಥಿಗಳು ಸರ್ಕಾರದಿಂದ ದೊರೆಯುವ ಹಲವು ರೀತಿಯ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಶಿಕ್ಷಣ ಇಲಾಖೆಯ ವಿದ್ಯಾರ್ಥಿ ಸಾಧನೆಯ ಟ್ರ್ಯಾಕಿಂಗ್ ಸಿಸ್ಟಂ (ಸ್ಯಾಟ್ಸ್)ನಲ್ಲಿ ಆಧಾರ್ ಜೋಡಣೆ

ಮಾಡಬೇಕಾಗಿದ್ದು, ಶಾಲಾ ಆಡಳಿತ ಮಂಡಳಿಗಳು ಸ್ಯಾಟ್ಸ್ ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಆಧಾರ್ ಮೌಲೀಕರಣವನ್ನು ಪೂರ್ಣಗೊಳಿಸಿಲ್ಲದ ಕಾರಣದಿಂದಾಗಿ ಹಲವಾರು ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಸಾಧ್ಯವಾಗದೆ ಬಾಕಿ ಇದ್ದು, ಈ ಸಮಸ್ಯೆ ಪರಿಹರಿಸಲು ಸರ್ಕಾರ ಇದುವರೆವಿಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ಈ ಸಮಸ್ಯೆ ಪರಿಹರಿಸಿ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ತಮ್ಮ ವಿದ್ಯಾರ್ಥಿವೇತನ ಸಿಗುವಂತೆ ಮಾಡಲಾಗುವುದು ?

## 'ವಿವೇಕ ಕೊಠಡಿ'ಗಳ ನಿರ್ಮಾಣ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೧ (೧೦೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಾದ್ಯಂತ, ಇದುವರೆಗೆ ಎಷ್ಟು 'ವಿವೇಕ ಕೊಠಡಿ' ಗಳನ್ನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ಹಾಗೂ ವರ್ಷಾವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಇದುವರೆಗೆ ಎಷ್ಟು 'ವಿವೇಕ ಕೊಠಡಿ'ಗಳ ನಿರ್ಮಾಣ ಕಾರ್ಯ ಪೂರ್ಣಗೊಂಡು ಲೋಕಾರ್ಪಣೆಗೊಳಿಸಲಾಗಿದೆ ; (ಜಿಲ್ಲಾವಾರು ಹಾಗೂ ವರ್ಷಾವಾರು ವಿವರ ನೀಡುವುದು)

(ಇ) ಸದರಿ 'ವಿವೇಕ ಕೊಠಡಿ'ಗಳ ನಿರ್ಮಾಣ ಕಾಮಗಾರಿ ಕುಂಟುತ್ತಾ ಸಾಗುತ್ತಿರುವುದು ಹಾಗೂ ಕಾಮಗಾರಿ ಸಾಕಷ್ಟು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸದರಿ 'ವಿವೇಕ ಕೊಠಡಿ'ಗಳ ನಿರ್ಮಾಣ ಕಾಮಗಾರಿ ಕುಂಟುತ್ತಾ ಸಾಗುತ್ತಿರುವುದು ಹಾಗೂ ಕಾಮಗಾರಿ ಸಾಕಷ್ಟು ವಿಳಂಭವಾಗುತ್ತಿರುವುದಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ, ಸದರಿ ಮಂಜೂರಾಗಿರುವ ಎಲ್ಲಾ 'ವಿವೇಕ ಕೊಠಡಿ'ಗಳ ನಿರ್ಮಾಣ ಕಾರ್ಯಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು ?

## ಕೋತಿಗಳ ಉಪಟಳ ನಿವಾರಿಸುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೨ (೧೦೧೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು, ನಿಡ್ಲೆ ಮತ್ತು ಸುತ್ತಮುತ್ತಲ ಗ್ರಾಮಗಳ ವ್ಯಾಪ್ತಿಯ ಕೃಷಿಕರು ತಮ್ಮ ತೋಟಗಳಲ್ಲಿ ಬೆಳೆಯುತ್ತಿರುವ ಬಾಳೆ, ಅಡಿಕೆ, ತೆಂಗು, ಕರಿಮೆಣಸು, ಕೊಕ್ಕೊ, ಗೇರು ಮೊದಲಾದ ಬೆಳೆಗಳ ಉತ್ಪತ್ತಿಗಳನ್ನು ಕೋತಿಗಳ ಅತಿಯಾದ ಉಪಟಳದಿಂದಾಗಿ ಕಳೆದುಕೊಂಡು, ನಿರಂತರವಾಗಿ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೋತಿಗಳು ದೊಡ್ಡ ಪ್ರಮಾಣದಲ್ಲಿ ಹಾನಿ ಮಾಡುತ್ತಿರುವುದರಿಂದ ಕೃಷಿ ಉತ್ಪತ್ತಿಗಳು ಆ ಕೃಷಿಕರ ಕೈಗೆ ಸಿಗದೆ ಅವರಿಗೆ ನಿರಂತರವಾಗಿ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಕ್ರಮವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ, ಕೋತಿಗಳ ಅತಿಯಾದ ಉಪಟಳವನ್ನು ಸಂಪೂರ್ಣವಾಗಿ ನಿವಾರಿಸಿ, ನಿಡ್ಲೆ ಮತ್ತು ಸುತ್ತಮುತ್ತಲ ಗ್ರಾಮಗಳ ವ್ಯಾಪ್ತಿಯ ಕೃಷಿಕರು ತಮ್ಮ ತೋಟಗಳಲ್ಲಿ ಬೆಳೆಯುತ್ತಿರುವ ಬೆಳೆಗಳ ಕೃಷಿ ಉತ್ಪತ್ತಿಗಳು ಅವರಿಗೆ ಪೂರ್ಣ ಪ್ರಮಾಣದಲ್ಲಿ ಸಿಗುವಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ?

## ವಿಶ್ವವಿದ್ಯಾಲಯಗಳನ್ನು ಮುಚ್ಚಲು ನಿರ್ಧರಿಸಿರುವ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೩ (೧೧೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ವಿಶ್ವವಿದ್ಯಾಲಯಗಳು ಯಾವುವು ; ವಿಶ್ವವಿದ್ಯಾಲಯಗಳನ್ನು ಮುಚ್ಚಲು ಸರ್ಕಾರ ನಿರ್ಧರಿಸಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ವಿಶ್ವವಿದ್ಯಾಲಯಗಳನ್ನು ಮುಚ್ಚುವ ಪ್ರಸ್ತಾವನೆ ಇದೆ ; ಈ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರವನ್ನು ವಿಶ್ವವಿದ್ಯಾಲಯವಾರು ನೀಡುವುದು)

(ಇ) ವೈಜ್ಞಾನಿಕವಾಗಿ ಅಧ್ಯಯಾನ ನಡೆಸಿ ಸ್ಥಾಪಿಸಲಾದ ಈ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಕಾರಣಗಳೇನು ; ಮುಚ್ಚುವ ಮುನ್ನ ಸಾಧಕ–ಬಾಧಕ ಅಧ್ಯಯನ ಮಾಡಲಾಗಿದೆಯೇ ; ಯಾರ ನೇತೃತ್ವದಲ್ಲಿ ಅಧ್ಯಯಾನ ಮಾಡಲಾಗಿದೆ ; (ವರದಿ ನೀಡುವುದು)

(ಈ) ಕಳೆದ ೨ ವರ್ಷಗಳಿಂದ ಈ ವಿಶ್ವವಿದ್ಯಾಲಯಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಉ) ಕಳೆದ ೨ ವರ್ಷಗಳಿಂದ ಎಷ್ಟು ಹೊಸ ಖಾಸಗಿ ವಿಶ್ವವಿದ್ಯಾಲಯಗಳಿಗೆ ಅನುಮತಿ ನೀಡಲಾಗಿದೆ ಅವು ಯಾವುವು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಆಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೪ (೧೧೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಆಗಿರುವುದು ಉಗ್ರಾಣದಲ್ಲೇ ಔಷಧ ಲಭ್ಯತೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೊರತೆಗೆ ಕಾರಣಗಳೇನು ;

(ಆ) ಔಷಧ ಪೂರೈಕೆಗಾಗಿ ಯಾವ ಸಂಸ್ಥೆ ಜೊತೆ ಬಡಂಬಡಿಕೆ ಮಾಡಿಕೊಳ್ಳಲಾಗಿದೆ ; ಅಗತ್ಯ ಔಷಧವನ್ನು ಸಮಯಕ್ಕೆ ಸರಿಯಾಗಿ ಪೂರೈಕೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ರಾಜ್ಯದಲ್ಲಿ ನಕಲಿ ಔಷಧ ಜಾಲ ವ್ಯಾಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈವರೆಗೆ ಎಷ್ಟು ನಕಲಿ ಔಷಧ ಮಾರಾಟಗಾರರ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಔಷಧ ಪರಿವೀಕ್ಷಕ ಅಧಿಕಾರಿಗಳ ಕೊರತೆ ಇರುವ ಕಾರಣ ಕಳಪೆ, ನಕಲಿ ಔಷಧ ಹಾವಳಿ ಹೆಚ್ಚಾಗಿದ್ದು, ಖಾಲಿ ಇರುವ ಔಷಧ ಪರಿವೀಕ್ಷಕ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪಿ.ಎಂ. ವಿಶ್ವಕರ್ಮ ಯೋಜನೆ ಅನುಷ್ಠಾನ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೫ (೧೧೧೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಿ.ಎಂ. ವಿಶ್ವಕರ್ಮ ಯೋಜನೆ ಅನುಷ್ಠಾನಗೊಂಡಿದ್ದು ಯಾವಾಗ ; ಈ ಯೋಜನೆಯ ಸ್ವರೂಪವೇನು ;

(ಆ) ಈ ಯೋಜನೆಯಡಿ ಎಷ್ಟು ಅರ್ಜಿ ಸಲ್ಲಿಕೆಯಾಗಿದೆ ; ಸಲ್ಲಿಕೆಯಾದ ಅರ್ಜಿಗಳ ಪೈಕಿ ಪುರಸ್ಕೃತಗೊಂಡಿರುವ ಮತ್ತು ತಿರಸ್ಕಾರಗೊಂಡಿರುವ ಅರ್ಜಿಗಳೆಷ್ಟು ; ತಿರಸ್ಕರಿಸಲು ಕಾರಣಗಳೇನು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ವಿವಿಧ ಹಂತದ ಲಾಗಿನ್‌ಗಳಲ್ಲಿ ಎಷ್ಟು ಅರ್ಜಿಗಳು ಪುರಸ್ಕರಿಸಲು ಅಥವಾ ತಿರಸ್ಕರಿಸಲು ಬಾಕಿ ಇವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಪುರಸ್ಕರಿಸಿರುವ ಅರ್ಜಿದಾರರಲ್ಲಿ ಎಷ್ಟು ಜನರಿಗೆ ತರಬೇತಿ ನೀಡಿ ಸಾಲ ನೀಡಲಾಗಿದೆ ಹಾಗೂ ಟೂಲ್ ಕಿಟ್‌ಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಉ) ಅರ್ಜಿ ಸಲ್ಲಿಸಿರುವವರಿಗೆ ತರಬೇತಿಗಾಗಿ ಆಯ್ಕೆ ಮಾಡಲು ತಾಂತ್ರಿಕ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಯನ್ನು ಉನ್ನತೀಕರಿಸುವ ಕಾಮಗಾರಿಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೬ (೧೧೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲಾಸ್ಪತ್ರೆಯ ಉನ್ನತೀಕರಣ ಕಾಮಗಾರಿಯನ್ನು ಪ್ರಾರಂಭಿಸಿದ್ದು ಯಾವಾಗ ; ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಇದರ ಅಂದಾಜು ಮೊತ್ತ ಎಷ್ಟು ;

(ಆ) ಈ ಕಾಮಗಾರಿಗಳಿಗಾಗಿ ಇದುವರೆಗೂ ಎಷ್ಟು ವೆಚ್ಚ ಮಾಡಲಾಗಿದೆ ; (ಕಾಮಗಾರಿವಾರು ವಿವರ ನೀಡುವುದು)

(ಇ) ಜಿಲ್ಲಾಸ್ಪತ್ರೆ ಅವರಣದಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ಓಪಿಡಿ ಬ್ಲಾಕ್ ಕಟ್ಟಡ ಪೂರ್ಣಗೊಂಡಿದೆಯೇ ;

(ಈ) ಪೂರ್ಣಗೊಂಡಿದ್ದಲ್ಲಿ, ಇದನ್ನು ಉಪಯೋಗಿಸದಿರಲು ಕಾರಣಗಳೇನು ?

## ರಾಜ್ಯದಲ್ಲಿ ಬೇಸಿಗೆ ಆರಂಭವಾಗಿದ್ದು ಅಗತ್ಯ ವಿದ್ಯುತ್ ನೀಗಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೭ (೧೧೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ವಿದ್ಯುತ್ ಬೇಡಿಕೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೇ, ಅಗತ್ಯವಿರುವ ವಿದ್ಯುತ್ ಪ್ರಮಾಣ ಎಷ್ಟು ; ವಿದ್ಯುತ್ ಬೇಡಿಕೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಅನ್ಯ ರಾಜ್ಯಗಳಿಂದ ವಿದ್ಯುತ್ ಖರೀದಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೇ, ಯಾವ ಯಾವ ರಾಜ್ಯಗಳಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಸರ್ಕಾರ ಮುಂದಾಗಿದೆ ; ಈವರೆಗೆ ಎಷ್ಟು ರಾಜ್ಯಗಳೊಂದಿಗೆ ಯಾವ ದರಕ್ಕೆ ವಿದ್ಯುತ್ ಖರೀದಿ ಮಾಡಲು ಒಡಂಬಡಿಕೆ ಮಾಡಿಕೊಂಡಿದೆ ? (ವಿವರ ಒದಗಿಸುವುದು)

## ಸರ್ಕಾರಿ ಶಾಲೆಗಳಲ್ಲಿ ವಿಜ್ಞಾನ ಮತ್ತು ಗಣಿತ ಶಿಕ್ಷಕರ ಕೊರತೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪೮ (೧೦೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿಜ್ಞಾನ ಮತ್ತು ಗಣಿತ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕೊರತೆ ಇರುವ ವಿಜ್ಞಾನ ಮತ್ತು ಗಣಿತ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪಡಿತರ ವಿತರಣೆ ವ್ಯವಸ್ಥೆಯಲ್ಲಿ ಉಂಟಾಗುತ್ತಿರುವ ಅಡಚಣೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪೯ (೧೦೫೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಡಿತರ ವಿತರಣೆಯನ್ನು ವ್ಯವಸ್ಥಿತವಾಗಿ ನೆರವೇರಿಸಲು ಬಳಸಲಾಗುತ್ತಿರುವ ತಂತ್ರಾಂಶಗಳಲ್ಲಿ ಉಂಟಾಗುತ್ತಿರುವ ತಾಂತ್ರಿಕ ಅಡಚಣೆಗಳಿಂದ ಸಾರ್ವಜನಿಕರು ತೊಂದರೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಂತ್ರಾಂಶಗಳಲ್ಲಿ ಉಂಟಾಗುತ್ತಿರುವ ತಾಂತ್ರಿಕ ಅಡಚಣೆಗಳನ್ನು ಸರಿಪಡಿಸಿ ಪಡಿತರ ವಿತರಣೆಯನ್ನು ಸುಲಲಿತವಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

# ಭಾಗ್ಯ ಜ್ಯೋತಿ/ಕುಟೀರ ಜ್ಯೋತಿ ಯೋಜನೆಯಡಿ ನೀಡಿರುವ ವಿದ್ಯುತ್ ಸಂಪರ್ಕಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೦ (೧೦೫೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾಗ್ಯ ಜ್ಯೋತಿ/ಕುಟೀರ ಜ್ಯೋತಿ ಅಡಿಯಲ್ಲಿ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭಾಗ್ಯ ಜ್ಯೋತಿ/ಕುಟೀರ ಜ್ಯೋತಿ ಅಡಿಯಲ್ಲಿ ಪ್ರತಿ ಕುಟುಂಬಕ್ಕೆ ಸರಾಸರಿ ಎಷ್ಟು ಯೂನಿಟ್ ವಿದ್ಯುತ್ ನೀಡಲಾಗುತ್ತಿದೆ ಹಾಗೂ ಸದರಿ ಯೋಜನೆಗಾಗಿ ತಗಲುವ ವೆಚ್ಚ ಎಷ್ಟು ; ಹೆಚ್ಚುವರಿ ವಿದ್ಯುತ್ ಬಳಕೆಗೆ ವಿಧಿಸುತ್ತಿರುವ ದರ ಎಷ್ಟು ; (ವಿವರ ನೀಡುವುದು)

(ಇ) ಭಾಗ್ಯ ಜ್ಯೋತಿ/ಕುಟೀರ ಜ್ಯೋತಿ ಅಡಿಯಲ್ಲಿ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುಟುಂಬಗಳು ಇನ್ನು ವಿದ್ಯುತ್ ಸಂಪರ್ಕ ಪಡೆದಿರುವುದಿಲ್ಲ ? (ಜಿಲ್ಲಾವಾರು ಮಾಹಿತಿ ನೀಡುವುದು)

# ಬಾಲ ತಾಯಂದಿರ ಸಮಸ್ಯೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೧ (೧೦೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ತಿಂಗಳಿನಲ್ಲಿ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಮೃತರಾದ ಬಾಣಂತಿಯರ ಮತ್ತು ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷದಲ್ಲಿ ರಾಜ್ಯದಲ್ಲಿ ಎಷ್ಟು ಹೆಣ್ಣು ಮಕ್ಕಳು ಅಪ್ರಾಪ್ತ ವಯಸ್ಸಿನಲ್ಲಿ ತಾಯಿ ಆಗಿರುವ ಪ್ರಕರಣಗಳು ವರದಿಯಾಗಿವೆ; ಅದರಲ್ಲಿ ಮೃತರಾದ ಬಾಣಂತಿ ಮತ್ತು ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಬಾಲ ತಾಯಂದಿರ ಸಮಸ್ಯೆ, ಮರಣ ಪ್ರಮಾಣ ಹಾಗೂ ಆ ತಾಯಂದಿರ ಮಕ್ಕಳ ಪೋಷಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; ಬಾಲಕಿಯರು ಸಣ್ಣ ವಯಸ್ಸಿನಲ್ಲಿಯೇ ತಾಯಂದಿರಾಗದಿರಲು ಸರ್ಕಾರ ಯಾವ ರೀತಿಯ ಜಾಗ್ರತಿ ಕಾರ್ಯಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ೧ನೇ ತರಗತಿ ಸೇರಲು ೦೬ ವರ್ಷ ಕಡ್ಡಾಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೨ (೧೦೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದನೇ ತರಗತಿಗೆ ಸೇರಲು ಜೂನ್ ೧, ೨೦೨೫ಕ್ಕೆ ೦೬ ವರ್ಷ ಕಡ್ಡಾಯವಾಗಿ ತುಂಬಿರಬೇಕು ಎಂಬ ನಿಯಮದಿಂದ ೦೫ ಲಕ್ಷಕ್ಕೂ ಮಿಗಿಲಾದ ಮಕ್ಕಳು ಶಾಲಾ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ೨೦೧೯, ಜೂನ್ ತಿಂಗಳ ೩೦ ರೊಳಗೆ ೦೬ ವರ್ಷ ತುಂಬುವ ಮಕ್ಕಳು ಒಂದನೇ ತರಗತಿ ಸೇರಲು ಒಂದು ವರ್ಷ ಕಾಯುವ ಪ್ರಮೇಯ ಬಂದಿರುವ ಕುರಿತು ಸರ್ಕಾರದ ನಿಲುವೇನು ;

(ಆ) ೦೬ ವರ್ಷ ಕಡ್ಡಾಯ ಎಂಬ ಕಾನೂನು ೨೦೨೨ರ ನವೆಂಬರ್ ತಿಂಗಳಿನಿಂದ ಜಾರಿಗೆ ಬಂದಿದ್ದು, ಅದಕ್ಕಿಂತ ಮೊದಲು ಹುಟ್ಟಿದ ಮಕ್ಕಳಿಗೆ ಅವರು ಮಾಡದ ತಪ್ಪಿಗೆ ಈ ಕಾನೂನು ಅನ್ವಯಿಸುವುದು ಸರಿಯೇ ; ಈಗ ೨೦೧೯, ಜೂನ್ ತಿಂಗಳಿನಲ್ಲಿ ಹುಟ್ಟಿದ ಮಕ್ಕಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು ;

(ಇ) ನವೆಂಬರ್, ೨೦೨೨ರ ಬಳಿಕ ಜನಿಸಿದ ಮಕ್ಕಳಿಗೆ ಮಾತ್ರವೇ ೦೬ ವರ್ಷ ಕಡ್ಡಾಯ ಎಂಬ ನಿಯಮ ಜಾರಿಗೆ ತರುವ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಅಕ್ಕಿಯ ಬೆಲೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೩ (೧೦೨೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಪಡಿತರ ಮೂಲಕ ವಿತರಿಸಲು ಅಕ್ಕಿಯನ್ನು ಎಷ್ಟು ಬೆಲೆಗೆ ಖರೀದಿಸುತ್ತಿದೆ ; (ವಿವರ ನೀಡುವುದು)

(ಆ) ಕೇಂದ್ರ ಸರ್ಕಾರ ಕಡಿಮೆ ಬೆಲೆಗೆ ಅಕ್ಕಿ ನೀಡಿದರೂ ರಾಜ್ಯ ಸರ್ಕಾರ ಖರೀದಿಸದಿರಲು ಕಾರಣವೇನು ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಸರ್ಕಾರವು ಕೇಂದ್ರ ಸರ್ಕಾರದಿಂದ ಎಷ್ಟು ಪ್ರಮಾಣದಲ್ಲಿ ಅಕ್ಕಿ ಖರೀದಿಸಿದೆ ; ಪ್ರತಿ ಕೆ.ಜಿಗೆ ಎಷ್ಟು ಮೊತ್ತ ಪಾವತಿಸಿದೆ ? (ವಿವರ ನೀಡುವುದು)

## ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೪ (೧೦೨೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಭಾಷಾ ಅಲ್ಪಸಂಖ್ಯಾತ/ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಕುರಿತ ವ್ಯಾಖ್ಯಾನವೇನು ;

ಧಾರ್ಮಿಕ ಅಲ್ಪಸಂಖ್ಯಾತ/ಭಾಷಾ ಅಲ್ಪಸಂಖ್ಯಾತ ವೈದ್ಯಕೀಯ ಈ ಶಿಕ್ಷಣ ಸಂಸ್ಥೆಗಳ ಸರ್ಕಾರ ನೀಡುತ್ತಿರುವ ರಿಯಾಯಿತಿಗಳೇನು ; ಈ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರದ ರೀತಿಯಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಆ) ಭಾಷಾ ಅಲ್ಪಸಂಖ್ಯಾತ/ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಸರ್ಕಾರಕ್ಕೆ ಎಷ್ಟು ವೈದ್ಯಕೀಯ ಸೀಟುಗಳನ್ನು ಬಿಟ್ಟುಕೊಡುತ್ತಿವೆ ; ಬಡ ಮತ್ತು ಪ್ರತಿಭಾವಂತ ಮಕ್ಕಳು ವೈದ್ಯಕೀಯ ಶಿಕ್ಷಣ ಪಡೆಯಲು ಅನುವಾಗುವಂತೆ ಸರ್ಕಾರ ಕೈಗೊಂಡ ಕ್ರಮಗಳೇನು ; ವೈದ್ಯಕೀಯ ಕಾಲೇಜುಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಕಾಲೇಜುವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವೈದ್ಯಕೀಯ ಕಾಲೇಜುಗಳಿಗೆ ದಾಖಲಾಗುವ ವಿದ್ಯಾರ್ಥಿಗಳಲ್ಲಿ ಪ್ರಥಮ ವರ್ಷದ ಪರೀಕ್ಷೆಯ ಬಳಿಕ ಶಿಕ್ಷಣವನ್ನು ಮೊಟಕುಗೊಳಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ವಿವರ ನೀಡುವುದು)

(ಈ) ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯವು ನಡೆಸುವ ಪ್ರಥಮ ವರ್ಷದ ವೈದ್ಯಕೀಯ ಶಿಕ್ಷಣ (ಎಂ.ಬಿ.ಬಿ.ಎಸ್) ಪರೀಕ್ಷೆಗೆ ಕಳೆದ ೩ ವರ್ಷಗಳಲ್ಲಿ ಹಾಜರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಈ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅನುತ್ತೀರ್ಣರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ಕಾಲೇಜುವಾರು ವಿವರ ನೀಡುವುದು)

## ಬೆಂಗಳೂರು ನಗರದ ಅರಣ್ಯ ಪ್ರದೇಶ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೫ (೧೧೪೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಒಟ್ಟು ಎಷ್ಟು ಎಕರೆ ಪ್ರದೇಶದಲ್ಲಿ ಅರಣ್ಯ ಇದೆ ; (ವಿವರ ನೀಡುವುದು) ಬೆಂಗಳೂರಿನ ಮಾಳಗಾಳ ನದಿ ಬಳಿಯ ೫೩೭ ಎಕರೆ ಅರಣ್ಯ ಪ್ರದೇಶ ಪ್ರಸ್ತುತ ಯಾರ ವಶದಲ್ಲಿದೆ ; ೧೯೨೧ರ ಜನವರಿಯಲ್ಲಿ ಸದರಿ ಪ್ರದೇಶವನ್ನು ಅಧಿಸೂಚಿತ ಮೀಸಲು ಅರಣ್ಯವಾಗಿ ಘೋಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಆ) ಬೆಂಗಳೂರು ನಗರ ಪ್ರದೇಶದಲ್ಲಿ ೪೯೦೦ಕ್ಕೂ ಹೆಚ್ಚು ಎಕರೆ ಅರಣ್ಯ ಪ್ರದೇಶ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು ;

(ಇ) ಈ ಒತ್ತುವರಿದಾರರನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು) ಒತ್ತುವರಿದಾರರಿಗೆ ಸಹಕರಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಪ್ರಸ್ತುತ ಬೆಂಗಳೂರು ನಗರದಲ್ಲಿರುವ ಅರಣ್ಯ ಪ್ರದೇಶದ ವಿಸ್ತೀರ್ಣ ಎಷ್ಟು ? (ವಲಯವಾರು ವಿವರ ನೀಡುವುದು)

## ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಇಲ್ಲದೆ ಸರ್ಕಾರಿ ಶಾಲೆಗಳಲ್ಲಿ ಉಂಟಾಗುವ ಪರಿಣಾಮ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೫೬ (೧೧೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಇಲ್ಲದೆ ಸರ್ಕಾರಿ ಶಾಲೆಗಳಲ್ಲಿ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದೈಹಿಕ ಶಿಕ್ಷಣ ಪಠ್ಯ ಬೋಧನೆ, ಪರೀಕ್ಷೆ, ಮೌಲ್ಯ ಮಾಪನವು ಸಂಪರ್ಕವಾಗಿ ಅನುಷ್ಠಾನಗೊಳಿಸಲಾಗಿದೆಯೇ ; (ಮಾಹಿತಿಯನ್ನು ನೀಡುವುದು)

(ಇ) ಸರ್ಕಾರಿ ಶಾಲೆಗಳ ಮಕ್ಕಳು ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆಯುವಲ್ಲಿ ವಂಚಿತರಾಗಿ ಮುಂದೆ ಕ್ರೀಡಾ ಕೋಟಾದಡಿ ನೇಮಕಾತಿಯ ಸೌಲಭ್ಯ ಪಡೆಯಲು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಶಿಸ್ತು, ರಾಷ್ಟ್ರೀಯ ಭಾವೈಕ್ಯತೆ, ಮೌಲ್ಯಗಳು ಹಾಗೂ ದೈಹಿಕ ಚಟುವಟಿಕೆಗಳ ಕೊರತೆಯಿಂದ ಮಕ್ಕಳ ಸಮಗ್ರ ಬೆಳವಣಿಗೆ ಮಾರಕವಾಗುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಲಾಗಿದೆಯೇ ; ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಶೈಕ್ಷಣಿಕ ಮತ್ತು ಆಡಳಿತ ವರ್ಗದ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೫೭ (೧೧೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಸೇವೆಗಳ ಗುಣಮಟ್ಟ ಕುಸಿಯುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ ಸುಧಾರಣೆ ಕುರಿತು ಕೈಗೊಂಡಿರುವ ಕ್ರಮಗಳೇನು ;

(ಆ) ೨೦೦೦ನೇ ಸಾಲಿನಿಂದ ಈಚೆಗೆ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಸೇವೆಗಳ ಸುಧಾರಣೆ ಕುರಿತು ಇಲಾಖೆಯಲ್ಲಿ ಯಾವುದಾದರೂ ಸಮಿತಿ, ಆಯೋಗಗಳನ್ನು ರಚಿಸಲಾಗಿದೆಯೇ ; ಹಾಗಿದ್ದಲ್ಲಿ ಅವುಗಳು ನೀಡಿರುವ ವರದಿಗಳ ಪ್ರತಿಗಳನ್ನು ನೀಡುವುದು ; ಈ ವರದಿಗಳ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಇ) ಸಮಿತಿ ಆಯೋಗಗಳು ನೀಡಿರುವ ವರದಿಗಳಲ್ಲಿನ ಶಿಫಾರಸ್ಸುಗಳನ್ನು ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ ; ಅನುಷ್ಠಾನಗೊಳಿಸಿದ್ದಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಸೇವೆಗಳ ಗುಣಮಟ್ಟ ಸುಧಾರಣೆಗೊಂಡಿದೆಯೇ ; ಸುಧಾರಣೆಗೊಳ್ಳದೇ ಇದ್ದಲ್ಲಿ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಸಮಿತಿ ಆಯೋಗಗಳು ನೀಡಿರುವ ವರದಿಗಳಲ್ಲಿನ ಶಿಫಾರಸ್ಸುಗಳನ್ನು ಇಲಾಖೆಯಲ್ಲಿ ಅನುಷ್ಠಾನಗೊಳಿಸದೇ ಇದ್ದಲ್ಲಿ ಕಾರಣಗಳೇನು ; ಅನುಷ್ಠಾನಗೊಳಿಸುವುದು ಯಾವಾಗ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೫೮ (೧೧೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಜ್ಯೇಷ್ಠತಾ ಪಟ್ಟಿಯನ್ನು ಸಮಯೋಚಿತವಾಗಿ ಪ್ರಕಟಿಸುವಲ್ಲಿ ಮತ್ತು ಮುಂಬಡ್ತಿ

ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ನಿಯಮಗಳ ಆಧಾರದಲ್ಲಿ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ ಮತ್ತು ಮುಂಬಡ್ತಿ ನೀಡಲಾಗುತ್ತಿದೆ ; (ಅವುಗಳ ಆದೇಶದ ಪ್ರತಿಗಳನ್ನು ನೀಡುವುದು)

(ಆ) ಸರ್ಕಾರದ ಆದೇಶ ಸಂ:ಸಿಆಸುಇ/೧೦೬/ಸೇಸೇನಿ/೨೦೨೧, ದಿನಾಂಕ: ೧೦/೧೨/೨೦೨೧ರ ಆದೇಶದ ಅನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಆದೇಶವನ್ನು ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ ; (ಮಾಹಿತಿ ನೀಡುವುದು)

(ಇ) ಮೇಲ್ಕಂಡ ಆದೇಶದೊಂದಿಗೆ ನೀಡಲಾದ ಅನುಬಂಧಗಳನ್ವಯ ಪ್ರತಿ ವರ್ಷವೂ ಡಿಸೆಂಬರ್ ೩೧ಕ್ಕೆ ಅಂತ್ಯಗೊಂಡಂತೆ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಗಳನ್ನು ಸಿದ್ದಪಡಿಸಿ ಅಕ್ಷೇಪಣೆಗಳನ್ನು ಆಹ್ವಾನಿಸಿ ಅವುಗಳನ್ನು ಪರಿಶೀಲಿಸಿ ಮಾರ್ಚ್ ೩೧ರ ಒಳಗಾಗಿ ಅಂತಿಮ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಬೋಧಕೇತರ ಹುದ್ದೆಗಳಾದ ಸಿ ವೃಂದದ ಎಲ್ಲಾ ಹುದ್ದೆಗಳ ಪ್ರಸಕ್ತ ಸಾಲಿನ ಜ್ಯೇಷ್ಠತಾ ಪಟ್ಟಿಗಳನ್ನು ನಿಡುವುದು ; ನೀಡದೇ ಇದ್ದಲ್ಲಿ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಸದರಿ ಆದೇಶದ ಅನ್ವಯ ಜ್ಯೇಷ್ಠತಾ ಪಟ್ಟಿಯನ್ನು ಡಿಸೆಂಬರ್ ೩೧ ೨೦೨೩ರ ಅಂತ್ಯಕ್ಕಿದ್ದಂತೆ ಪ್ರಕಟಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸದರಿ ಆದೇಶದನ್ವಯ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸುವ ಕುರಿತು ಸರ್ಕಾರದ ನಿಲುವೇನು ? (ಸಂಪೂರ್ಣ ಮಾಹಿತಿ ನೀಡುವುದು)

# ರಾಜ್ಯದ ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೫೫ (೧೧೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಬೋಧಕೇತರ ವೃಂದದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಖಾಯಂಪೂರ್ವ ಸೇವಾವಧಿ ಘೋಷಣೆ/ಸ್ವಯಂ ಚಾಲಿತ ವೇತನ ಬಡ್ತಿ/ಬಡ್ತಿ ಇತರೆ ಸಮಯದಲ್ಲಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಆದೇಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವ್ಯವಸ್ಥಿತವಾಗಿ ಹಾಗೂ ಸಮರ್ಪಕವಾಗಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ನಿರ್ವಹಿಸದೇ ಇರುವುದರಿಂದ ಸಮಯೋಚಿತವಾಗಿ ಸಲ್ಲಿಸಲು ಕಷ್ಟಸಾಧ್ಯವಾಗುತ್ತಿರುವ ಕಾರಣ ಶಿಕ್ಷಕ ವೃಂದದವರಿಗೆ ಪರಿಗಣಿಸುವಂತೆಯೇ ಸಂಬಂಧಪಟ್ಟ ಅಧಿಕಾರಿಗಳ ವಿಶೇಷ ವರದಿ ದೃಢೀಕರಣವನ್ನು ಪರಿಗಣಿಸುವ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಇ) ವಿಶೇಷ ವರದಿ ಪರಿಗಣಿಸುವುದಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆಯೇ ; ಯಾವ ರೀತಿ ನಿರ್ದೇಶನ ನೀಡಲಾಗಿದೆ ; (ಮಾಹಿತಿ ನೀಡುವುದು)

(ಈ) ವಿಶೇಷ ವರದಿ ಪರಿಗಣಿಸದೇ ಇದ್ದಲ್ಲಿ ಕಾರಣಗಳೇನು; ಒಂದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಅಧಿಕಾರಿ/ನೌಕರರುಗಳಿಗೆ ತಾರತಮ್ಯ ಮಾಡಿದಂತಾಗುವುದಿಲ್ಲವೇ ; ಈ ಕುರಿತು ಸ್ಪಷ್ಟ ಅಭಿಪ್ರಾಯ ನೀಡುವುದು ;

(ಉ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆಯಾ ವರ್ಷದಲ್ಲಿ ಬರೆಯುವ ಮತ್ತು ನಿರ್ವಹಿಸುವ ಕುರಿತು ಸರ್ಕಾರದ ಆದೇಶಗಳಿದ್ದಗ್ಯೂ ಸಹ ಸಮಯೋಚಿತವಾಗಿ ನಿರ್ವಹಣೆ ಮಾಡುವ

ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವ್ಯವಸ್ಥಿತವಾಗಿ ನಿರ್ವಹಣೆ ಮಾಡದೇ ಇದ್ದಲ್ಲಿ, ಕಾರಣಗಳೇನು ; ಅಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

## ಅನುದಾನಿತ ಆಯುರ್ವೇದ ಮಹಾವಿದ್ಯಾಲಯಗಳಲ್ಲಿ ನಿವೃತ್ತಿ, ರಾಜೀನಾಮೆ ಹಾಗೂ ಇತ್ಯಾದಿ ಕಾರಣಗಳಿಂದ ತೆರವಾದ ಹುದ್ದೆಗಳನ್ನು ತುಂಬಿಕೊಳ್ಳುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೯೬೦ (೧೪೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸರಕಾರಿ, ಖಾಸಗಿ ಅನುದಾನ ರಹಿತ ಹಾಗೂ ಅನುದಾನಿತ ಆಯುರ್ವೇದ ಮಹಾವಿದ್ಯಾಲಯಗಳು ಇವೆ ; (ವಿವರವಾದ ಮಾಹಿತಿ ನೀಡುವುದು)

(ಆ) ಅನುದಾನಿತ ಆಯುರ್ವೇದ ಮಹಾವಿದ್ಯಾಲಯಗಳಲ್ಲಿ ನಿವೃತ್ತಿಯಿಂದ ತೆರವಾದ ಹುದ್ದೆಗಳನ್ನು ತುಂಬಿಕೊಳ್ಳಲು ಯಾವ ವರ್ಷದವರೆಗೆ ಅನುಮತಿ ನೀಡಲಾಗಿದೆ ? (ಮಾಹಿತಿ ನೀಡುವುದು)

## ರಾಜ್ಯದ ಉಗ್ರಾಣಗಳಲ್ಲಿ ಪಡಿತರ ಆಹಾರ ಧಾನ್ಯಗಳು ಹಾಳಾಗಿ ಹುಳ ಬರುತ್ತಿರುವ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೧ (೧೦೭೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ, ವಿಜಯನಗರ ಮತ್ತು ಹಾವೇರಿ ಜಿಲ್ಲೆಗಳ ಪಡಿತರ ಚೀಟಿಗಳಿಗೆ ನೀಡಬೇಕಾಗಿದ್ದ ಬಿಳಿ ಜೋಳದ ದಾಸ್ತಾನು ಬಳ್ಳಾರಿಯ

ರಾಜ್ಯ ಉಗ್ರಾಣದಲ್ಲಿ ಕೊಳೆತು ಹುಳುಗಳು ಬಿದ್ದಿರುವುದು ನಿಜವೇ ; ಹಾಗಿದ್ದಲ್ಲಿ, ಬಡ ಪಡಿತರದಾರರಿಗೆ ನೀಡದೆ ಈ ರೀತಿ ವ್ಯರ್ಥ ಮಾಡಲು ಕಾರಣವೇನು ; (ಮಾಹಿತಿ ಒದಗಿಸುವುದು)

(ಆ) ಈ ಬಗ್ಗೆ ಉಪ ಲೋಕಾಯುಕ್ತರು ದೂರು ದಾಖಲಿಸಿಕೊಂಡಿರುವುದು ನಿಜವೇ ; ಯಾರ ಮೇಲೆ ದೂರು ದಾಖಲಿಸಿಕೊಳ್ಳಲಾಗಿದೆ ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಈ ರೀತಿ ಲಕ್ಷಾಂತರ ಕ್ವಿಂಟಾಲ್ ಧಾನ್ಯ ಕೊಳೆತು ಹುಳ ಹಿಡಿಯಲು ಸರ್ಕಾರಕ್ಕೆ ಮತ್ತು ಜನರಿಗೆ ದ್ರೋಹ ಎಸಗಿರುವ ಅಧಿಕಾರಗಳ ಮೇಲೆ ಕೈಗೊಂಡ ಕ್ರಮಗಳೇನು ;

(ಈ) ಸರ್ಕಾರವು ಮುಂದೆ ಈ ರೀತಿಯಲ್ಲಿ ಆಹಾರ ಧಾನ್ಯಗಳು ಕೊಳೆತು ಹಾಳಾಗದಂತೆ ಎಚ್ಚರವಹಿಸಲು ಸರ್ಕಾರದ ನಿರ್ಧಾರಗಳೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ರಾಜ್ಯದ ಐ.ಪಿ. ಸೆಟ್ಟು ಹೊಂದಿರುವ ರೈತರುಗಳಿಗೆ ೭ ಗಂಟೆ ನಿರಂತರ ವಿದ್ಯುತ್ ಪೂರೈಕೆ ಕುರಿತು

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೨ (೧೦೯೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೦೫ ವರ್ಷಗಳಲ್ಲಿ ಇಂಧನ ಇಲಾಖೆಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; ಅನುದಾನ ಬಳಕೆಯಿಂದ ರೂಪಿಸಿರುವ ಯೋಜನೆಗಳು ಯಾವುವು ; (ವಾರ್ಷಿಕವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಹಾಸನ ಜಿಲ್ಲಾ ವ್ಯಾಪ್ತಿಗೆ ಕಳೆದ ೦೫ ವರ್ಷಗಳಲ್ಲಿ ಬಿಡುಗಡೆಗೊಂಡಿರುವ ಅನುದಾನ ಪ್ರಮಾಣ ಎಷ್ಟು ; ಈ ಅನುದಾನದಿಂದ ಯಾವ ಯಾವ ವಿದ್ಯುತ್ ಪರಿವರ್ತಕವನ್ನು

ಮೇಲ್ದರ್ಜೆಗೇರಿಸಲಾಗಿದೆ ಮತ್ತು ಎಷ್ಟು ಹೊಸ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ಯೋಜನೆವಾರು ಪೂರ್ಣ ವಿವರ ನೀಡುವುದು)

(ಇ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ರೈತರುಗಳಿಗೆ ಸಮರ್ಪಕವಾಗಿ ನಿರಂತರ ಕೃಷಿ ಐ.ಪಿ. ಸೆಟ್ಟುಗಳಿಗೆ ಹಗಲು ವೇಳೆ ೭ ಗಂಟೆ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ; ಜಿಲ್ಲಾ ವ್ಯಾಪ್ತಿಯಲ್ಲಿ ನೀರಾವರಿ ಸೌಲಭ್ಯ ಹೊಂದಿದ್ದರೂ ಸಹ ರೈತರುಗಳಿಗೆ ವಿದ್ಯುತ್ ಅಭಾವದಿಂದಾಗಿ ಬೆಳೆಗಳು ನಾಶವಾಗಿ ಹಾಗೂ ಇಳುವರಿ ಕುಂಠಿತಗೊಂಡು ಆರ್ಥಿಕ ಸಮಸ್ಯೆಗೆ ಗುರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರೈತರುಗಳಿಗೆ ಆರ್ಥಿಕ ಅಭಿವೃದ್ಧಿ ಹೊಂದಲು ಇಂಧನ ಇಲಾಖೆಯಿಂದ ಅನುಸರಿಸಿರುವ ಕ್ರಮವೇನು ; (ಸಂಪೂರ್ಣ ವಿವರ ನೀಡುವುದು)

(ಈ) ಈ ಎಲ್ಲಾ ಅಂಶಗಳಿಗೆ ರೈತರುಗಳು ಮನವಿಯನ್ನು ಸಲ್ಲಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ತೆಗೆದುಕೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚುವ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೩ (೧೦೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಕಡಿಮೆ ದಾಖಲಾತಿ ಇರುವ ಶಾಲೆಗಳನ್ನು ಮುಚ್ಚುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದಲ್ಲಿ, ಯಾವ ಆಧಾರದ ಮೇಲೆ ಸರ್ಕಾರಿ ಶಾಲೆಗಳನ್ನು ಮುಚ್ಚಲು ಉದ್ದೇಶಿಸಿದೆ ;

(ಇ) ಶಾಲಾ ಸುಧಾರಣಾ ಆಯೋಗದ ಪ್ರಸ್ತಾವನೆ ಪ್ರಕಾರ ಒಟ್ಟು ಎಷ್ಟು ಶಾಲೆಗಳನ್ನು ವಿಲೀನಗೊಳಿಸಲಾಗುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರಸ್ತುತ ರಾಜ್ಯದಲ್ಲಿ ಶೂನ್ಯ ದಾಖಲಾತಿ ಇರುವ ಶಾಲೆಗಳ ಸಂಖ್ಯೆ ಎಷ್ಟು ; (ಸದರಿ ಶಾಲೆಯ ಶಿಕ್ಷಕರು ಕರ್ತವ್ಯ ನಿರ್ವಹಿಸುವ ಸ್ಥಳದ ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ವಿಲೀನಗೊಳಿಸಿದ ನಂತರ ಮುಚ್ಚಲು ನಿರ್ಧರಿಸುವ ಸರ್ಕಾರಿ ಶಾಲಾ ಕಟ್ಟಡಗಳನ್ನು ಯಾವ ಉದ್ದೇಶಗಳಿಗೆ ಬಳಕೆ ಮಾಡಿಕೊಳ್ಳಲಾಗುವುದು ?

## ಕೋವಿಡ್ ಸಮಯದಲ್ಲಿ ನಡೆದ ಅಕ್ರಮಗಳ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೪ (೧೦೩೦) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಕಾಲಘಟ್ಟದಲ್ಲಿ ನಡೆದಿರುವ ಆಕ್ರಮಗಳ ಬಗ್ಗೆ ನ್ಯಾಯಮೂರ್ತಿ ಮೈಕೆಲ್ ಡಿ ಕುನ್ಹಾ ನೀಡಿರುವ ವರದಿಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳ ಕುರಿತು ನೀಡಿರುವ ಶಿಫಾರಸ್ಸುಗಳ ಪ್ರಕಾರ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಈ ವರದಿಯ ಅನುಸಾರ ತನಿಖೆ ಯಾವ ಹಂತದಲ್ಲಿದೆ ; ಎಷ್ಟು ಮಂದಿ ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಆಕ್ರಮಕ್ಕೆ ಕಾರಣವಾದ ಕೆಲವು ಕಂಪನಿಗಳನ್ನು ಕಪ್ಪು ಪಟ್ಟಿಗೆ ಸೇರಿಸಲು ಮತ್ತು ಅಕ್ರಮದ ಹಣವನ್ನು ವಸೂಲಿ ಮಾಡಲು ನ್ಯಾಯಮೂರ್ತಿ ಮೈಕಲ್ ಡಿ ಕುನ್ಹಾ ಶಿಫಾರಸ್ಸು ವರದಿಯನ್ವಯ ಕೈಗೊಂಡ ಕ್ರಮವೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ, ಮರಣ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳ ನೇಮಕಾತಿ ಮಾಡುವ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೬೫ (೧೨೫೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ ರಿಂದ ಇಲ್ಲಿಯವರೆಗೆ ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಡಿಸೆಂಬರ್ ೨೦೨೪ರವರೆಗೆ ಖಾಲಿ ಆಗಿರುವ ಅನುದಾನಿತ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಹಾಗೂ ಕಾಲೇಜುವಾರು ವಿವರ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬದೆ ಇರುವುದರಿಂದ ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಈ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು ;

(ಈ) ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಕಾರ್ಯಭಾರದ ಕೊರತೆಯಾದಾಗ ಅನುದಾನಿತ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸ್ಥಳನಿಯುಕ್ತಿ/ ನಿಯೋಜನೆ ಗೊಳಿಸಲಾಗುತ್ತಿದೆಯೇ ;

(ಉ) ಕಾರ್ಯಭಾರದ ಕೊರತೆಯಾಗಿರುವ ನೌಕರರಿಗೆ ವೇತನಕ್ಕೆ ಸಮಸ್ಯೆಯಾಗದಂತೆ ಇತರೆ ಅನುದಾನಿತ ಸಂಸ್ಥೆಗಳಿಗೆ ನಿಯೋಜನೆ ಮಾಡಿ ಕಾರ್ಯಭಾರವನ್ನು ಸರಿದೂಗಿಸಲು ಯಾವ ಕ್ರಮ ಕೈಗೊಳ್ಳಲಾಗುತ್ತದೆ ?

# ರಾಜ್ಯದಲ್ಲಿ ಚಿತ್ರಕಲಾ ವಿಷಯ ಪರಿವೀಕ್ಷಕ ಹುದ್ದೆ ಸೃಜಿಸುವ ಕುರಿತು ಚಿತ್ರಕಲಾ ಶಿಕ್ಷಕರಿಗೆ ಮುಂಬಡ್ತಿ ನೀಡುವ ಹಾಗೂ ಚಿತ್ರಕಲಾ ಶಿಕ್ಷಣದ ಪಠ್ಯಪುಸ್ತಕ ರಚಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೬೬ (೧೨೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಚಿತ್ರಕಲಾ ವಿಷಯ ಪರಿವೀಕ್ಷಕರು, ಕಲಾಬೋಧಕರ ಹಾಗೂ ಕಲಾವಿದರ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ಈ ಹುದ್ದೆಗಳಿಗೆ ಪ್ರೌಢ ಶಾಲಾ ಹಿರಿಯ ಚಿತ್ರಕಲಾ ಶಿಕ್ಷಕರಿಗೆ ಸೇವಾ ಜ್ಯೇಷ್ಠತಾ ಆಧಾರದ ಮೇಲೆ ಮುಂಬಡ್ತಿ ನೀಡಲು ವಿಳಂಬವಾಗುತ್ತಿರಲು ಕಾರಣವೇನು ; ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ;

(ಆ) ಪ್ರತಿ ಜಿಲ್ಲೆಯ ಉಪ ನಿರ್ದೇಶಕರ ಕಾರ್ಯಾಲಯದಲ್ಲಿ ಚಿತ್ರಕಲಾ ವಿಷಯ ಪರಿವೀಕ್ಷಕರ ಹುದ್ದೆ ಸೃಜಿಸಿ ಪ್ರೌಢ ಶಾಲಾ ಚಿತ್ರಕಲಾ ಶಿಕ್ಷಕರಿಗೆ ಮುಂಬಡ್ತಿ ನೀಡುವ ಆಲೋಚನೆ ಸರ್ಕಾರಕ್ಕೆ ಇದೆಯೇ ;

(ಇ) ಇಲಾಖೆಯಲ್ಲಿ ದೈಹಿಕ ಶಿಕ್ಷಣಕ್ಕೆ ಪ್ರತ್ಯೇಕ ಪಠ್ಯಪುಸ್ತಕವನ್ನು ರಚಿಸಿದ್ದು, ಚಿತ್ರಕಲಾ ಶಿಕ್ಷಣದ ಪಠ್ಯಪುಸ್ತಕವನ್ನು ರಚಿಸದೆ ಇರಲು ಕಾರಣವೇನು ; ಅದರಂತೆ ಕರ್ನಾಟಕ ಮೌಲ್ಯ ನಿರ್ಣಯ ಮಂಡಳಿ ಚಿತ್ರಕಲಾ ಗ್ರೇಡ್ ಪರೀಕ್ಷೆ ತೆಗೆದುಕೊಳ್ಳುತ್ತಿದ್ದು ಪ್ರತಿ ಶೈಕ್ಷಣಿಕ ವರ್ಷದಲ್ಲಿ ಚಿತ್ರಕಲಾ ಶಿಕ್ಷಣದ ಬೋಧನೆಯಂತೆ ಸಾವಿರಾರು ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುತ್ತಿದ್ದು, ಅಂಕಪಟ್ಟಿ ಕೂಡ ಮಂಡಳಿಯಿಂದ ನೀಡಲಾಗುತ್ತಿದ್ದು, ಆದರೆ ರಾಜ್ಯದಾದ್ಯಂತ ಏಕ ಮಾದರಿ ಚಿತ್ರಕಲಾ ಶಿಕ್ಷಣ ಪಠ್ಯಪುಸ್ತಕ ಇರದೇ ಇರುವುದು ವಿಷಾದನೀಯವಾಗಿದ್ದು, ಯಾವ ಕಾಲಮಿತಿಯಲ್ಲಿ ಚಿತ್ರಕಲಾ ಶಿಕ್ಷಣದ ಪಠ್ಯಪುಸ್ತಕವನ್ನು ರಚಿಸಲಾಗುವುದು ?

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಬಯೋಮೆಡಿಕಲ್ ಇಂಜಿನಿಯರ್ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೬೭ (೧೨೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಬಯೋಮೆಡಿಕಲ್ ಇಂಜಿನಿಯರ್ (Biomedical Engineer) ಹುದ್ದೆಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಬಯೋಮೆಡಿಕಲ್ ಇಂಜಿನಿಯರ್ ಹುದ್ದೆಗಳನ್ನು ಬಹುತೇಕ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಲಾಗಿದ್ದು, ನೇರ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳು ಏನು ಮತ್ತು ನೇರ ನೇಮಕಾತಿ ಮಾಡಿಕೊಳ್ಳಲು ಇರುವ ಆಡಚಣೆಗಳು ಏನು ;

(ಇ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸದರಿ ವೃಂದಗಳಲ್ಲಿ ಖಾಲಿ ಇರುವ ಬಯೋಮೆಡಿಕಲ್ ಇಂಜಿನಿಯರ್ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡುವ ಬಗ್ಗೆ ಸರ್ಕಾರದ ನಿಲುವೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ರಾಜ್ಯದ ಪ್ರತಿಯೊಂದು ಪ್ರೌಢ ಶಾಲೆಯಲ್ಲಿ ಮಂಜೂರಾತಿ ಹುದ್ದೆಗಳ ಸ್ತರ ವಿನ್ಯಾಸದಲ್ಲಿ ೭+೧=೮ರ ಬದಲಿಗೆ ೮+೧=೯ ಎಂಬಂತೆ ಒಂದು ವಿಶೇಷ ಶಿಕ್ಷಕರ ಹುದ್ದೆಯನ್ನು ಕಡ್ಡಾಯವಾಗಿ ನಿಗದಿ ಮಾಡುವ ಬಗ್ಗೆ ಸರ್ಕಾರದ ನಿಲುವೇನು ಹಾಗೂ ೨೫೦ ರಿಂದ ೩೦೦ ವಿದ್ಯಾರ್ಥಿಗಳ ಶಾಲೆಗೆ ಒಂದು ವಿಶೇಷ ಶಿಕ್ಷಕರ ಹುದ್ದೆ ಎನ್ನುವ ನಿಯಮವನ್ನು ಕೈಬಿಡುವ ಬಗ್ಗೆ ಸರ್ಕಾರದ ನಿಲುವೇನು ;

(ಉ) ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಹಾಗೂ ಅನುದಾನಿತ ಪ್ರೌಢ ಶಾಲೆಗಳಲ್ಲಿ ಹಾಗೂ (ಶಾಸಕರ ಮತಕ್ಷೇತ್ರದ) ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಚಿತ್ರಕಲಾ ಶಿಕ್ಷಕರ ಹುದ್ದೆ ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ?

## ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲಾ ಕಾಲೇಜುಗಳ ಮುಖ್ಯ ಶಿಕ್ಷಕರು, ಶಿಕ್ಷಕರು/ ಉಪನ್ಯಾಸಕರುಗಳ ಮಾಹಿತಿ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೬೮ (೧೨೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲಾ ಕಾಲೇಜುಗಳ ಮುಖ್ಯ ಶಿಕ್ಷಕರು, ಶಿಕ್ಷಕರು/ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; ಅವರುಗಳ ದೂರವಾಣಿ, ವಿಳಾಸ ಹಾಗೂ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳ, ಶಾಲೆಗಳ, ಜಿಲ್ಲಾವಾರು ಸಂಪೂರ್ಣ ಮಾಹಿತಿಯ ಸಾಫ್ಟ್ ಹಾಗೂ ಹಾರ್ಡ್ ಕಾಪಿ ನೀಡುವುದು ?

## ಹೊಸ ರೇಷನ್ ಕಾರ್ಡ್‌ಗಳಿಗೆ ಅರ್ಜಿ ಹಾಕಲು ಅನುಮತಿ ನೀಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೯೬೯ (೧೧೦೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಸರ್ಕಾರವು ಅನೇಕ ಬಾರಿ ರೇಷನ್ ಕಾರ್ಡ್ ನಲ್ಲಿ ಹೆಸರು ತಿದ್ದುಪಡಿಗೆ ನೋಂದಣಿಗೆ ತಿದ್ದುಪಡಿಗಳಿಗೆ

ಅವಕಾಶ ಮಾಡಿಕೊಟ್ಟಿದ್ದು, ಆದರೆ ಹೊಸ ರೇಷನ್ ಕಾರ್ಡ್ ಪಡೆಯಲು ಕಳೆದ ಎರಡು ವರ್ಷಗಳಲ್ಲಿ ಒಂದೆರಡು ದಿನ ಮಾತ್ರ ಅವಕಾಶ ಕೊಟ್ಟಿದ್ದು ಇದರಿಂದ ರಾಜ್ಯದ್ಯಂತ ಅನೇಕ ಬಡ ಕುಟುಂಬಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೊಸ ರೇಷನ್ ಕಾರ್ಡ್ ಅರ್ಜಿ ಹಾಕಲು ಅವಕಾಶ ನೀಡದೇ ಇರುವುದಕ್ಕೆ ಕಾರಣಗಳೇನು ;

(ಆ) ಒಂದೇ ಮನೆಯಲ್ಲಿ ವಾಸವಿದ್ದ ಕುಟುಂಬಗಳು ವೈವಾಹಿಕ ನಂತರ, ಅಥವಾ ಸದಸ್ಯರ ಇನ್ನಿತರ ಕಾರಣಗಳಿಂದ ಬೇರೆ ಬೇರೆ ಮನೆಗಳಲ್ಲಿ ವಾಸವಿದ್ದರೂ ರೇಷನ್ ಕಾರ್ಡ್ ಪಡೆಯಲು ಅವಕಾಶ ಇದಲ್ಲದಿರುವುದರಿಂದ ಹೊಸ ರೇಷನ್ ಕಾರ್ಡ್‌ಗಳು ವಿತರಿಸಲು ಸರ್ಕಾರದ ಮುಂದಿನ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯಾದ್ಯಂತ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ವೈದ್ಯರ ಮತ್ತು ಸಿಬ್ಬಂದಿಗಳ ವಸತಿ ಗೃಹ ಮಾಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೯೭೦ (೧೧೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೆಲಸ ಮಾಡುವ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಹತ್ತಿರದಲ್ಲಿ ವಸತಿ ಗೃಹಗಳು ಇಲ್ಲದೆ ಇರುವುದರಿಂದ ಮತ್ತು ಕೆಲವು ಕಡೆ ವಸತಿ ಗೃಹಗಳು ಇದ್ದರೂ ವೈದ್ಯರು ಮತ್ತು ಸಿಬ್ಬಂದಿಗಳು ಅಲ್ಲಿ ತಂಗದೆ ಇರುವುದರಿಂದ ಅನೇಕ ಗ್ರಾಮೀಣ ಭಾಗದ ಜನರು ರಾತ್ರಿ ಸಮಯದಲ್ಲಿ ಉಂಟಾಗುವ ತುರ್ತು ಚಿಕಿತ್ಸೆಗಾಗಿ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಆ) ವೈದ್ಯರು ಮತ್ತು ಸಿಬ್ಬಂದಿಗಳು ಪಂಚಾಯಿತಿ ವ್ಯಾಪ್ತಿಯ ಪ್ರಾಥಮಿಕ ಚಿಕಿತ್ಸಾ ಕೇಂದ್ರಗಳ ಹತ್ತಿರವೆ ತಂಗಲು ಸರ್ಕಾರದ ಮುಂದಿನ ಕ್ರಮಗಳೇನು ?

## ಅರಣ್ಯ ಇಲಾಖೆಯ ಕ್ಯಾಂಪ್ ವಾಚರ್‌ಗಳನ್ನು ವರ್ಷ ಪೂರ್ತಿ ನಿಯುಕ್ತಿಗೊಳಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೯೭೧ (೧೧೦೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆ ಹಾಳಿಯಾಳ ವಿಭಾಗದ ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಎಷ್ಟು ಫಾರೆಸ್ಟ್ ಕ್ಯಾಂಪ್‌ಗಳಿವೆ ಮತ್ತು ಎಷ್ಟು ಜನ ಕ್ಯಾಂಪ್ ವಾಚರ್‌ಗಳು ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದಾರೆ ; (ವಲಯ ಮಟ್ಟದಲ್ಲಿ ಕ್ಯಾಂಪ್ ಮತ್ತು ವಾಚರ್‌ಗಳ ಮಾಹಿತಿ ನೀಡುವುದು)

(ಆ) ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ಕ್ಯಾಂಪ್ ವಾಚರ್‌ಗಳನ್ನು ಕೆಲವು ತಿಂಗಳುಗಳ ಕಾಲ ಕೆಲಸದಿಂದ ತೆಗೆದು ಸಂಬಳ ನಿಲ್ಲಿಸುತ್ತಿರುವುದು ನಿಜವೇ ; ನಿಜವಿದ್ದಲ್ಲಿ, ಕಾರಣಗಳೇನು ;

(ಇ) ಸದರಿ ಕ್ಯಾಂಪ್ ವಾಚರ್‌ಗಳನ್ನು ಪುನಃ ಕೆಲಸದಲ್ಲಿ ಮುಂದುವರೆಸಿಕೊಂಡು ಹೋಗುವಂತೆ ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ವನ್ಯಜೀವಿ ಪ್ರದೇಶಗಳಿಂದ ಸ್ವಯಂಪ್ರೇರಿತವಾಗಿ ಸ್ಥಳಾಂತರ ಹೊಂದಲು ಸ್ವೀಕರಿಸಿದ ಅರ್ಜಿಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೯೭೨ (೧೧೦೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ ಮಾರ್ಗಸೂಚಿಗಳ ಪ್ರಕಾರ ೨೦೨೦ ಸಾಲಿನಿಂದ ೨೦೨೫ ರವರೆಗೆ ರಾಜ್ಯದ ವನ್ಯಜೀವಿ ಪ್ರದೇಶಗಳಿಂದ ಸ್ವಯಂಪ್ರೇರಿತರಾಗಿ ಸ್ಥಳಾಂತರಗೊಂಡಿರುವ ಹಾಗೂ ಸ್ಥಳಾಂತರ ಹೊಂದಲು ಅರ್ಜಿ ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಹುಲಿ ಮೀಸಲು/ ಅಭಯಾರಣ್ಯ/ರಾಷ್ಟ್ರೀಯ ಉದ್ಯಾನದ ಹೆಸರು, ಜಿಲ್ಲೆ, ತಾಲ್ಲೂಕು, ಹೋಬಳಿ, ಅರಣ್ಯ ವೃತ್ತ, ಅರಣ್ಯ ವಿಭಾಗದ ಹೆಸರು ಗ್ರಾಮ ಮತ್ತು ಗ್ರಾಮ ಪಂಚಾಯತ್‌ಗಳ ವಿವರ ನೀಡುವುದು ;

(ಆ) ಗ್ರಾಮ/ಮಜಿರೆ/ಹಾಡಿ ವಾರು ಸ್ಥಳಾಂತರಗೊಂಡಿರುವ ಹಾಗೂ ಸ್ಥಳಾಂತರ ಹೊಂದಲು ಅರ್ಜಿ ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು; ಸ್ಥಳಾಂತರ ಗೊಂಡಿರುವುದು ಎಂದಿನಿಂದ ;

(ಇ) ಸ್ಥಳಾಂತರಗೊಂಡಿರುವ ಹಾಗೂ ಸ್ಥಳಾಂತರ ಹೊಂದಲಿರುವ ಗ್ರಾಮಗಳು ಹುಲಿ ಮೀಸಲಿನ ಕೋರ್ ಕ್ರಿಟಿಕಲ್ ಪ್ರದೇಶ ವ್ಯಾಪ್ತಿಯಲ್ಲಿವೆಯೇ ಅಥವಾ ಬಫರ್ ಪ್ರದೇಶ ವ್ಯಾಪ್ತಿಯಲ್ಲಿವೆಯೇ ; (ಮಾಹಿತಿಯನ್ನು ಒದಗಿಸುವುದು)

(ಈ) ಜಿಲ್ಲಾ ಮಟ್ಟದ ಸಮಿತಿಗಳ ಸ್ಥಳಾಂತರಕ್ಕೆ ಒಪ್ಪಿಗೆ ಸೂಚಿಸಿದೆಯಾ ? (ಪ್ರತಿಯೊಂದು ಸಭೆಯ ನಡವಳಿಗಳ ಪ್ರತಿಯನ್ನು ಒದಗಿಸುವುದು)

## ರಾಜ್ಯದ ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೯೭೩ (೧೦೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು ಮತ್ತು ಯಾವುವು ;

(ಆ) ವಿಶ್ವವಿದ್ಯಾಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡಲು ಇರುವ ಮಾನದಂಡಗಳು ಯಾವುವು ;

(ಇ) ಈ ವಿಶ್ವವಿದ್ಯಾಲಯಗಳಿಗೆ ಸರ್ಕಾರದಿಂದ ನೇಮಕ ಮಾಡಿರುವ ಸಿಂಡಿಕೇಟ್ ಸದಸ್ಯರ ಸಂಖ್ಯೆ ಎಷ್ಟು ಮತ್ತು ಯಾವ ಯಾವ ವಿಶ್ವವಿದ್ಯಾಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡಲಾಗಿದೆ ; (ಮಾಹಿತಿಯನ್ನು ನೀಡುವುದು)

(ಈ) ಅತೀ ಹಿಂದುಳಿದ ಪ್ರವರ್ಗ–೧ರ ಜಾತಿಗಳ ಅಭ್ಯರ್ಥಿಗಳಿಗೆ ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಸಿಂಡಿಕೇಟ್ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ; (ಅವರ ಹೆಸರು ಜಿಲ್ಲೆ ಮತ್ತು ವಿವರಗಳನ್ನು ನೀಡುವುದು)

(ಉ) ಖಾಸಗಿ ವಿಶ್ವವಿದ್ಯಾಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡುವ ಪ್ರಾಧಿಕಾರ ಯಾವುದು ; ಈ ವಿಶ್ವವಿದ್ಯಾನಿಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡಲು ಸರ್ಕಾರಕ್ಕೆ ಅಧಿಕಾರವಿದೆಯೇ ; ಇದ್ದಲ್ಲಿ, ಎಷ್ಟು ಸದಸ್ಯರನ್ನು ಸರ್ಕಾರವು ಸಿಂಡಿಕೇಟ್ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ?

## ರಾಜ್ಯದ ಶಾಲಾ ಕಾಲೇಜುಗಳ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೯೭೪ (೧೦೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯ ವ್ಯಾಪ್ತಿಯಲ್ಲಿ ಇರುವ ಒಟ್ಟು ಶಾಲೆಗಳು ಮತ್ತು ಕಾಲೇಜುಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಇರುವ ಶಾಲಾ–ಕಾಲೇಜುಗಳ ಸಂಖ್ಯೆ ಎಷ್ಟು ; ಈ ಶಾಲಾ ಕಾಲೇಜುಗಳಿಗೆ ದಾಖಲೆ ಆಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ನೀಡುವುದು)

(ಇ) ಶಾಲಾ ಸಾಕ್ಷರತಾ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕ ಮಾಡಲಾಗಿದೆಯೇ ; ಇಲ್ಲದೇ ಇದ್ದಲ್ಲಿ, ಎಷ್ಟು ಹುದ್ದೆಗಳು ಖಾಲಿ ಇರುತ್ತವೆ ; ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗಿದೆಯೇ ;

(ಈ) ೨೦೨೪–೨೫ನೇ ಸಾಲಿನಲ್ಲಿ ಶಾಲಾ ಸಾಕ್ಷರತಾ ಇಲಾಖೆಯ ಅಧೀನದಲ್ಲಿ ಬರುವ ಶಾಲಾ ಕಾಲೇಜುಗಳ ದುರಸ್ತಿ ಕಾಮಗಾರಿಗಳನ್ನು ಕೈಗೊಂಡಿರುವ ಸಂಖ್ಯೆ ಎಷ್ಟು ಹಾಗೂ ಇದಕ್ಕೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಯಾವ ಏಜೆನ್ಸಿಯಿಂದ ದುರಸ್ತಿ ಕಾಮಗಾರಿಗಳು ನಡೆಯುತ್ತಿವೆ ;

(ಉ) ಚಿತ್ರದುರ್ಗ ಜಿಲ್ಲೆಯಲ್ಲಿ ದುರಸ್ತಿ ಕಾಮಗಾರಿಗಳು ನಡೆಯುತ್ತಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಬಿಡುಗಡೆ ಮಾಡಿರುವ ಅನುದಾನವು ಸಾಕಾಗುತ್ತದೆಯೇ ; ಸಾಕಾಗದೆ ಇದ್ದಲ್ಲಿ, ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ?

## ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಪ್ರವರ್ಗ–೧ರ ಜಾತಿಯವರಿಗೆ ನೀಡಿರುವ ಸೌಲಭ್ಯದ ಬಗ್ಗೆ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೯೭೫ (೧೦೮೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ಇದುವರೆಗೆ ಯಾವ ಯಾವ ತರಬೇತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ಈ ಪೈಕಿ ಪ್ರವರ್ಗ–೧ರ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ದಾವಣಗೆರೆ, ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಈ ಯೋಜನೆ ಅಡಿ ಕೈಗೊಂಡಿರುವ ತರಬೇತಿ ಕಾರ್ಯಕ್ರಮಗಳು ಯಾವುವು ; ಎಷ್ಟು ಜನರಿಗೆ ತರಬೇತಿ ನೀಡಲಾಗಿದೆ ;

(ಇ) ಕೌಶಲ್ಯಾಭಿವೃದ್ಧಿ ಯೋಜನೆಯಡಿ ತರಬೇತಿ ನೀಡಿದ ನಂತರ ತರಬೇತಿದಾರರಿಗೆ ಉದ್ಯೋಗಾವಕಾಶಗಳು ದೊರಕಿದೆಯೇ ; ಎಷ್ಟು ಜನರಿಗೆ ಉದ್ಯೋಗ ಅವಕಾಶವನ್ನು ಒದಗಿಸಿಕೊಡಲಾಗಿದೆ ; (ಮಾಹಿತಿ ನೀಡುವುದು)

(ಈ) ಸರ್ಕಾರದ ವತಿಯಿಂದ ಉದ್ಯೋಗ ಮೇಳವನ್ನು ಏರ್ಪಡಿಸಿದೆಯೇ ? (ಮಾಹಿತಿ ನೀಡುವುದು)

## ಪದವಿ ಕಾಲೇಜುಗಳಲ್ಲಿ ವಾಣಿಜ್ಯಶಾಸ್ತ್ರದ ಪಠ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಷಯ ಸೇರ್ಪಡೆಗೊಳಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೯೭೬ (೧೦೬೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿವರ್ಷ ವಿಶ್ವದ ಅತ್ಯುತ್ತಮ ನೋಬಲ್ ಪ್ರಶಸ್ತಿಯನ್ನು ಪಡೆಯುತ್ತಿರುವ ಅರ್ಥಶಾಸ್ತ್ರ ವಿಷಯವನ್ನು ವಾಣಿಜ್ಯಶಾಸ್ತ್ರದ ಪಠ್ಯಕ್ರಮದಿಂದ ಹೊರಗಿಟ್ಟಿರುವುದು ಸೂಕ್ತವೇ ;

(ಆ) ಸಮಗ್ರ ಅರ್ಥಶಾಸ್ತ್ರ ವಿಷಯದ ಆಧಾರದ ಮೇಲೆ ರಚಿತವಾದ ವಾಣಿಜ್ಯಶಾಸ್ತ್ರ ವಿಷಯ ಸುಮಾರು ವರ್ಷಗಳಿಂದ ವಾಣಿಜ್ಯಶಾಸ್ತ್ರ ವಿದ್ಯಾರ್ಥಿಗಳಿಗೆ ಅರ್ಥಶಾಸ್ತ್ರ ವಿಷಯು ಪ್ರಾಧ್ಯಾಪಕರು ಬೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಇ) ಈಗ ಅರ್ಥಶಾಸ್ತ್ರ ವಿಷಯದ ಪ್ರಾಧ್ಯಾಪಕರಿಗೆ ವಾಣಿಜ್ಯಶಾಸ್ತ್ರ ವಿಷಯದ ವಿದ್ಯಾರ್ಥಿಗಳಿಗೆ ಬೋಧನಾ ತರಗತಿಗಳನ್ನು ನೀಡಲು ನಿರಾಕರಿಸುತ್ತಿರುವುದು ಸಾವಿರಾರು ಅರ್ಥಶಾಸ್ತ್ರ ಬೋಧಕರಿಗೆ ಅನ್ಯಾಯವಾಗುತ್ತಿಲ್ಲವೇ ;

(ಈ) BOS ನಿರ್ಧಾರ ಎಂದು ವಾಣಿಜ್ಯ ಶಾಸ್ತ್ರದ ಪ್ರಾಧ್ಯಾಪಕರು ನೆಪ ಹೇಳಿ ಯಾವ ಅರ್ಥಶಾಸ್ತ್ರ ವಿಷಯದ ಮೇಲೆ ರಚನೆಯಾಗಿದೆ, ಅದನ್ನೇ ಮರೆಯುತ್ತಿರುವುದು ಸೂಕ್ತವೇ ;

(ಉ) ಉನ್ನತ ಶಿಕ್ಷಣ ಇಲಾಖೆ ಮಧ್ಯ ಪ್ರವೇಶಿಸಿ ವಾಣಿಜ್ಯಶಾಸ್ತ್ರ ಪಠ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಷಯ ಸೇರಿಸಿ ಅರ್ಥಶಾಸ್ತ್ರ ವಿಷಯದ ಬೋಧಕರಿಗೆ ನ್ಯಾಯ ಒದಗಿಸಲು ಪ್ರಯತ್ನಿಸಲಾಗುವುದೇ ?

## ಕಲಬುರಗಿ ವಿಶ್ವವಿದ್ಯಾಲಯದಲ್ಲಿರುವ ನಿಜಶರಣ ಅಂಬಿಗರ ಚೌಡಯ್ಯನವರ ಅಧ್ಯಯನ ಪೀಠದ ದುಸ್ಥಿತಿ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೯೭೭ (೧೦೬೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ವಿಶ್ವವಿದ್ಯಾಲಯದಲ್ಲಿರುವ ನಿಜಶರಣ ಅಂಬಿಗರ ಚೌಡಯ್ಯನವರ ಅಧ್ಯಯನ ಪೀಠ ಯಾವುದೇ ಚಟುವಟಿಕೆಗಳಿಲ್ಲದೆ ಇರುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಧ್ಯಯನ ಪೀಠದ ಕಟ್ಟಡ ಬಿರುಕು ಬಿಟ್ಟಿದ್ದು, ಶೈಕ್ಷಣಿಕ ಚಟುವಟಿಕೆಗಳನ್ನು ನೋಡಿಕೊಳ್ಳಲು ಯಾವ ಸಿಬ್ಬಂದಿಯೂ ಇಲ್ಲದೆ ಪ್ರಭಾರ ವಹಿಸಿರುವ ಸಿಬ್ಬಂದಿ ಆಸಕ್ತಿಯಿಂದ ಕಾರ್ಯನಿರ್ವಹಿಸುತ್ತಿರುವರೇ ;

(ಇ) ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರಿಂದ 'ನಿಜಶರಣ' ಎಂದು ಕರೆಸಿಕೊಂಡ ಅಂಬಿಗರ ಚೌಡಯ್ಯನವರ ಪೀಠದ ದುಸ್ಥಿತಿ ಕುರಿತು ಕೋಲಿ/ಕಬ್ಬಲಿಗ/ಅಂಬಿಗ/ಬೆಸ್ತ ಸಮುದಾಯದವರು ಆಕ್ರೋಶ ವ್ಯಕ್ತ ಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಈ) ಕೂಡಲೇ ವಿಶ್ವವಿದ್ಯಾಲಯದ ಈ ಅಧ್ಯಯನ ಪೀಠದ ಸುಧಾರಣೆಗೆ ಸರಕಾರವು ಅಗತ್ಯ ಕ್ರಮ ಕೈಗೊಳ್ಳುವುದೇ ?

## ಬೆಳಗಾವಿ ನಗರದಲ್ಲಿರುವ ಮಲ್ಟಿ ಸ್ಪೆಷಾಲಿಟಿ ಮತ್ತು ಜಿಲ್ಲಾ ಆಸ್ಪತ್ರೆಯ ದುಸ್ಥಿತಿಯ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೯೭೮ (೧೦೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದಲ್ಲಿರುವ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆಯಾಗಿ ಎರಡು ವರ್ಷಗಳು ಕಳೆದರೂ ಮೂಲಭೂತ ಸೌಕರ್ಯಗಳಾದ ಉಪಕರಣಗಳು, ವೈದ್ಯರು, ನರ್ಸ್‌ಗಳನ್ನು ನೇಮಿಸದಿರಲು ಕಾರಣಗಳೇನು ;

(ಆ) ನೂರಾರು ಕೋಟಿ ವೆಚ್ಚ ಮಾಡಿ ಸಿದ್ಧವಾಗಿರುವ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಇಂದು ಬಡ ರೋಗಿಗಳಿಗೆ ವೈದ್ಯಕೀಯ ಸೌಲಭ್ಯ ನೀಡದಿರುವುದು ಸರ್ಕಾರ ವೆಚ್ಚ ಮಾಡಿರುವ ನೂರಾರು ಕೋಟಿಗಳು ವ್ಯರ್ಥವಲ್ಲವೆ ;

(ಇ) ಎರಡು ಕಟ್ಟಡಗಳಲ್ಲಿ ನಡೆಸುತ್ತಿರುವ ಜಿಲ್ಲಾ ಆಸ್ಪತ್ರೆ ತುಂಬಾ ಹಳೆಯದಾಗಿದ್ದು, ಯಾವುದೇ ಶುಚಿತ್ವ ಹಾಗೂ ಆರೋಗ್ಯಕರ ವಾತಾವರಣವಿಲ್ಲದೆ ರೋಗಿಗಳು ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸುಮಾರು ೬೦ ಲಕ್ಷ ಜನಸಂಖ್ಯೆ ಹೊಂದಿರುವ ಬೆಳಗಾವಿ ಜಿಲ್ಲೆಗೆ ತಕ್ಷಣವೆ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸಿ ಬಡವರಿಗೆ ಆರೋಗ್ಯ ಸೇವೆಯನ್ನು ಒದಗಿಸಲು ಸರ್ಕಾರವು ಕಾರ್ಯೋನ್ಮುಖವಾಗುವುದೆ ?

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೯೭೯ (೧೦೬೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಎಷ್ಟು ಅತಿಥಿ ಉಪನ್ಯಾಸಕರನ್ನು ಮತ್ತು ಯಾವ ಕಾರಣಕ್ಕಾಗಿ ವಜಾ ಮಾಡಲಾಗಿದೆ ;

(ಆ) ನೂತನ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮತ್ತು ಈಗ ಕೆಲಸ ಮಾಡುತ್ತಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾಧ್ಯಾಪಕರ ವರ್ಗಾವಣೆಯ ಕಾರಣಕ್ಕಾಗಿ ತೊಂದರೆಗೆ ಒಳಗಾಗಿರುವ ಸಾವಿರಾರು ಅತಿಥಿ ಉಪನ್ಯಾಸಕರ ಭವಿಷ್ಯ ಏನು ;

(ಇ) ಯು.ಜಿ.ಸಿ., ಆದೇಶದಂತೆ ಪಿ.ಹೆಚ್.ಡಿ. ಇಲ್ಲದ ಅಥವಾ ನೆಟ್/ ಸೆಟ್ ಪಾಸಾಗದ ಅತಿಥಿ ಉಪನ್ಯಾಸಕರು ಹತ್ತಾರು ವರ್ಷಗಳಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ; ಈ ರೀತಿಯ ಸುಮಾರು ೫ ಸಾವಿರ ಅತಿಥಿ ಉಪನ್ಯಾಸಕರನ್ನು ಮುಂದುವರಿಸಲು ಮತ್ತು ಅವರ ಸೇವಾ ಭದ್ರತೆ ಕುರಿತು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಅತಿಥಿ ಉಪನ್ಯಾಸಕರು ಪ್ರತಿ ವರ್ಷ ಎದುರಿಸುತ್ತಿರುವ ಅತಂತ್ರ ಸ್ಥಿತಿಗಳು, ಸೇವಾ ಹಿರಿತನದಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಸರಕಾರವು ಸ್ಪಷ್ಟವಾಗಿ ಒಂದು ನೀತಿ ರೂಪಿಸಿ ಅವರ ಸಹಾಯಕ್ಕೆ ನಿಲ್ಲಲು ಕಠಿಣ ಕ್ರಮಗಳನ್ನು ಕೈಗೊಳ್ಳುವುದು ಯಾವಾಗ ?

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೦ (೧೦೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸಲು ಕೈಗೊಂಡ ಕ್ರಮಗಳೇನು ;

(ಆ) ಈ ಭಾಗದಲ್ಲಿ ಸ್ಥಾಪಿಸಲಾಗಿರುವ ಆರೋಗ್ಯ ಕ್ಷೇಮ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಈ ಕೇಂದ್ರಗಳ ಕಟ್ಟಡದ ಕಾಮಗಾರಿಗಳು ಯಾವ ಹಂತದಲ್ಲಿದೆ ?

# ಸರ್ಕಾರಿ ಆಸ್ಪತ್ರೆಯಲ್ಲಿ ಬಾಣಂತಿಯರ ಮರಣವನ್ನು ತಡೆಗಟ್ಟುವ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೧ (೧೦೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರಣೀಕೃತವಾಗಿ ಸಂಭವಿಸುತ್ತಿರುವ ಬಾಣಂತಿಯರ ಮರಣವನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದ ಸರ್ಕಾರಿ ಹೆರಿಗೆ ಆಸ್ಪತ್ರೆಗಳಲ್ಲಿ ಪ್ರಸೂತಿ ತಜ್ಞರು ಮತ್ತು ಅರವಳಿಕೆ ತಜ್ಞರ ಖಾಲಿ ಹುದ್ದೆಗಳು ಎಷ್ಟಿವೆ ; ರಾಜ್ಯದ ಸರ್ಕಾರಿ ಹೆರಿಗೆ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳಿರುವರೇ ; ಈ ಹೆರಿಗೆ ಆಸ್ಪತ್ರೆಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಎಷ್ಟು ; (ಮಾಹಿತಿ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಇದಕ್ಕೆ ಆರ್ಥಿಕ ಇಲಾಖೆಯ ಸಮ್ಮತಿ ದೊರೆತಿದೆಯೇ ?

# ಇಂದಿರಾ ಕ್ಯಾಂಟೀನ್‌ನಲ್ಲಿ ಆಹಾರ ಗುಣಮಟ್ಟ ಪರಿಶೀಲಿಸುವ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೨ (೧೦೫೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೩ ರಿಂದ ೨೦೧೮ ರವರೆಗೆ ಎಷ್ಟು ಇಂದಿರಾ ಕ್ಯಾಂಟೀನ್ ತೆರೆಯಲಾಗಿತ್ತು ; ಪ್ರಸ್ತುತ ರಾಜ್ಯದಲ್ಲಿ ಎಷ್ಟು ಇಂದಿರಾ

ಕ್ಯಾಂಟೀನ್‌ಗಳು ಚಾಲನೆಯಲ್ಲಿವೆ ; ಈ ಕ್ಯಾಂಟೀನ್‌ಗಳಿಗೆ ನೀಡುತ್ತಿರುವ ವಾರ್ಷಿಕ ಅನುದಾನವೆಷ್ಟು ;

(ಆ) ಪ್ರತಿ ಇಂದಿರಾ ಕ್ಯಾಂಟೀನ್‌ನಲ್ಲಿ ಎಷ್ಟು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ; ಇಲ್ಲಿ ತಯಾರಿಸುವ ಆಹಾರದ ಗುಣಮಟ್ಟವನ್ನು ಹೇಗೆ ಪರಿಶೀಲಿಸಲಾಗುತ್ತದೆ ;

(ಇ) ಈ ಇಂದಿರಾ ಕ್ಯಾಂಟೀನ್‌ನಲ್ಲಿಯೇ ಆಹಾರ ತಯಾರಿಸಲಾಗುತ್ತಿದೆಯೇ ; ಅಥವಾ ಖಾಸಗಿ ವ್ಯಕ್ತಿಗಳು ಆಹಾರ ತಯಾರಿಸಿ ಇಂದಿರಾ ಕ್ಯಾಂಟೀನ್‌ಗೆ ಸರಬರಾಜು ಮಾಡುತ್ತಿದ್ದಾರೆಯೇ ?

## ವಿಶ್ವ ವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೩ (೧೦೬೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು ಎಷ್ಟು ;

(ಆ) ಈ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳು ಯಾವುವು ; (ಪ್ರತಿ ವಿಶ್ವವಿದ್ಯಾಲಯದ ಖಾಲಿ ಹುದ್ದೆಗಳ ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಪ್ರಥಮ ದರ್ಜೆ ಸರ್ಕಾರಿ ಕಾಲೇಜಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಪ್ರಸಕ್ತ ವರ್ಷ ಬಜೆಟ್‌ನಲ್ಲಿ ನೀಡಿರುವ ಹಣವೆಷ್ಟು; ಅಗತ್ಯತೆಗನುಸಾರ ಈ ಹಣ ಬಳಕೆಗೆ ಯಾವ ಯಾವ ಕಾಲೇಜನ್ನು ಗುರುತಿಸಿ ಅನುಮೋದಿಸಲಾಗಿದೆ ; ಇದರಲ್ಲಿ ಮಹಿಳಾ ಕಾಲೇಜುಗಳನ್ನು ಗುರುತಿಸಲಾಗಿದೆಯೇ ?

## ರಾಜ್ಯದಲ್ಲಿ ಬಿಸಿಯೂಟ ಕಾರ್ಮಿಕರಿಗೆ ಗೌರವಧನ ಹೆಚ್ಚಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೪ (೧೦೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜನ ಬಿಸಿಯೂಟ ಕಾರ್ಮಿಕರು ಇದ್ದಾರೆ ; ಇವರಿಗೆ ಪ್ರಸ್ತುತ ನೀಡುತ್ತಿರುವ ಗೌರವಧನವೆಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಬಿಸಿಯೂಟ ಕಾರ್ಮಿಕರಿಗೆ ಗೌರವಧನವನ್ನು ಹೆಚ್ಚಿಸುವ ಬೇಡಿಕೆ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಅಕ್ಷರ ದಾಸೋಹ ಕಾರ್ಮಿಕರಿಗೆ ಗೌರವಧನ ಹೊರತುಪಡಿಸಿ ಬೇರೆ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ?

## ಗುಣಮಟ್ಟದ ಪುಸ್ತಕ ಖರೀದಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೫ (೧೦೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦ ರಿಂದ ೨೦೨೪ ರವರೆಗೆ ರಾಜ್ಯದಲ್ಲಿರುವ ಪ್ರಕಾಶಕರಿಂದ ಗುಣಮಟ್ಟದ ಪುಸ್ತಕ ಖರೀದಿಸಿ ಗ್ರಂಥಾಲಯಗಳಿಗೆ ನೀಡುವ ಸಲುವಾಗಿ ಈ ೦೫ ವರ್ಷಗಳಲ್ಲಿ ಉತ್ತಮ ಪುಸ್ತಕಗಳನ್ನು ಆಯ್ಕೆ ಸಮಿತಿ ಆಯ್ಕೆ ಮಾಡಿ ಸರ್ಕಾರಕ್ಕೆ ಅಂತಿಮ ಪಟ್ಟಿ ಸಲ್ಲಿಸಲಾಗಿದೆಯೇ ;

(ಆ) ಸಮಿತಿ ಸಲ್ಲಿಸಿದ ಅಂತಿಮ ಪಟ್ಟಿಯನ್ನು ಸರ್ಕಾರ ಅನುಮೋದಿಸಲಾಗಿದೆಯೇ ; ಅನುಮೋದಿಸದಿದ್ದಲ್ಲಿ ಯಾವಾಗ ಅನುಮೋದನೆ ನೀಡಲಾಗುವುದು ;

(ಇ) ಈ ವರ್ಷದ ಎಲ್ಲಾ ಜಿಲ್ಲಾ ಮತ್ತು ನಗರ ಗ್ರಂಥಾಲಯಗಳ ಆಯವ್ಯಯ ಹಾಗೂ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆಯೇ ;

(ಈ) ಅಂತಿಮ ಪುಸ್ತಕ ಆಯ್ಕೆ ಪಟ್ಟಿ ಅನುಮೋದನೆ ವಿಳಂಬವಾದರೆ, ಈ ವರ್ಷದ ಪುಸ್ತಕ ಖರೀದಿಗೆ ಅನಾನುಕೂಲವಾಗುವುದಿಲ್ಲವೇ ?

## ರಾಜ್ಯದ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಸೀಟ್‌ಗಳನ್ನು ಬ್ಲಾಕ್ ಮಾಡಿರುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೯೮೬ (೧೦೪೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಇಂಜಿನಿಯುರಿಂಗ್ ಕಾಲೇಜುಗಳಲ್ಲಿ ಇಂಜಿನಿಯುರಿಂಗ್ ಸೀಟ್‌ಗಳನ್ನು ಬ್ಲಾಕ್ ಮಾಡಿ ಅಕ್ರಮವೆಸಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಿ.ಎಂ.ಎಸ್. ಇಂಜಿನಿಯರಿಂಗ್ ಕಾಲೇಜು ಮತ್ತು ನ್ಯೂ ಹಾರಿಜನ್ ಇಂಜಿನಿಯರಿಂಗ್ ಕಾಲೇಜುಗಳ ಆಡಳಿತ ಮಂಡಳಿಯವರು ಇಂಜಿನಿಯರಿಂಗ್ ಸೀಟುಗಳನ್ನು ಬ್ಲಾಕ್ ಮಾಡಿ ಮೆರಿಟ್ ವಿದ್ಯಾರ್ಥಿಗಳಿಗೆ ವಂಚಿಸಿರುವುದರ ಬಗ್ಗೆ ಸರ್ಕಾರವು ಯಾವ ಕ್ರಮವನ್ನು ತೆಗೆದುಕೊಂಡಿದೆ ? (ಇದರ ಬಗ್ಗೆ ಮಾಹಿತಿ ನೀಡುವುದು)

## ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸುವ ಮತ್ತು ನಿರ್ವಹಿಸುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೭ (೧೧೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಆದೇಶ/ಸುತ್ತೋಲೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡಲು ಸೂಚಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಮಾಡಲಾಗುತ್ತಿದೆ ; ಆನ್‌ಲೈನ್‌ನಲ್ಲಿ ದಾಖಲೆ ಹಾಗೂ ನಿರ್ವಹಣೆ ಮಾಡದಿರಲು ಕಾರಣಗಳೇನು ; ಯಾವ ದಿನಾಂಕದಿಂದ ಮಾಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು e-PRS (e-Performance Reporting System) ತಂತ್ರಾಂಶದ ಮೂಲಕ ದಾಖಲಿಸಲು ಹಾಗೂ ಈ ಉದ್ದೇಶಕ್ಕಾಗಿ Custodian, Alternate Custodian, PAR Manager

ಗಳನ್ನು ಗುರುತಿಸಲಾಗಿದೆಯೇ ; ಗುರುತಿಸದಿರಲು ಕಾರಣಗಳೇನು ; ಯಾವಾಗ ಗುರುತಿಸಲಾಗುವುದು ;

(ಈ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ವಾರ್ಷಿಕ ಕಾರ್ಯನಿರ್ವಹಣದ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಉ) ಸಿಆಸು ಇಲಾಖೆಯಿಂದ ಬಡ್ತಿ, ಜ್ಯೇಷ್ಠತಾ ಪಟ್ಟಿ ಪ್ರಕಟಣೆ, ವಾರ್ಷಿಕ ಕಾರ್ಯನಿರ್ವಹಣಾ ವರದಿ, ಇನ್ನೂ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ಆದೇಶ/ಸುತ್ತೋಲೆಗಳನ್ನು ಶಾಲಾ ಶಿಕ್ಷಣ ಇಲಾಖೆಯ ಸಮಯೋಚಿತವಾಗಿ ಅನುಷ್ಠಾನಗೊಳಿಸುವಲ್ಲಿ ವಿಳಂಬ ಮತ್ತು ವಿಫಲಾವಾಗುತ್ತಿರಲು ಕಾರಣಗಳೇನು ; ಸಮಯೋಚಿತವಾಗಿ ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣ್ಣದಲ್ಲಿರುವ ಸರ್ಕಾರಿ ಶಾಲೆ/ಕಾಲೇಜುಗಳ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೮ (೧೦೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಳಂದ ಪಟ್ಟಣದಲ್ಲಿರುವ ಎಲ್ಲಾ ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಲ್ಲಿ ಪ್ರಾಧ್ಯಾಪಕರು ಇಲ್ಲದಿರುವುದರಿಂದ ವಿದ್ಯಾಭ್ಯಾಸದ ಗುಣಮಟ್ಟ ಕುಸಿದು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವಾಗ ಪ್ರಾಧ್ಯಪಕರನ್ನು ನೇಮಕ ಮಾಡಲಾಗುವುದು ಹಾಗೂ ಅಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿ ಕೊಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ;

(ಇ) ಸದರಿ ಶಾಲೆ ಹಾಗೂ ಕಾಲೇಜುಗಳ ಕೊಠಡಿಗಳು ಶಿಥಿಲಗೊಂಡಿರುವುದು ಹಾಗೂ ಗೋಡೆಗಳಿಗೆ ಸುಣ್ಣ ಬಣ್ಣ ಮಾಡದೇ ಇರುವುದು ಮತ್ತು ವಿದ್ಯಾರ್ಥಿಗಳಿಗೆ ಕುಳಿತುಕೊಳ್ಳಲು ಪೀಠೋಪಕರಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲ ಸೌಕರ್ಯಗಳನ್ನು ಯಾವಾಗ ಕಲ್ಪಿಸಲಾಗುವುದು ; (ಮಾಹಿತಿಯನ್ನು ನೀಡುವುದು)

(ಈ) ಸದರಿ ಶಾಲೆ ಹಾಗೂ ಕಾಲೇಜುಗಳ ಹೊರಾಂಗಣದ ಸುತ್ತಮುತ್ತಲಿನ ರಸ್ತೆಗಳು ಹಾಳಾಗಿರುವುದು ಹಾಗೂ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಶುದ್ಧ ಕುಡಿಯುವ ನೀರು ಮತ್ತು ಶೌಚಾಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕಾರ್ಯಕೈಗೊಳ್ಳಲು ಸರ್ಕಾರ ಕ್ರಮವೇನು ?

## ಕಲಬುರಗಿ ಆಳಂದ ಪಟ್ಟಣದಲ್ಲಿರುವ ಸರ್ಕಾರಿ ಆಸ್ಪತ್ರೆಯ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೯೮೯ (೧೨೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ನರ್ಸ್ ಹಾಗೂ ಇತರೆ ಸಿಬ್ಬಂದಿಗಳು ಕಡಿಮೆ ಇರುವುದರಿಂದ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವೈದ್ಯರು ಹಾಗೂ ನರ್ಸ್ ಮತ್ತು ಸಿಬ್ಬಂದಿಗಳನ್ನು ಭರ್ತಿ ಮಾಡುವ ಕಾರ್ಯ ಸರ್ಕಾರ ಯಾವಾಗ ಕೈಗೊಳ್ಳಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸರ್ಕಾರಿ ಆಸ್ಪತ್ರೆಯಲ್ಲಿ ಯಾವ ಯಾವ ಖಾಯಿಲೆಗೆ ಸಂಬಂಧಿಸಿದ ನುರಿತ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ ; ಕಾರ್ಯ ನಿರ್ವಹಿಸುತ್ತಿದ್ದಲ್ಲಿ, ಅವರ ಹೆಸರಿನೊಂದಿಗೆ ಮಾಹಿತಿ ನೀಡುವುದು ; ಇಲ್ಲದಿದ್ದ ವೈದ್ಯರನ್ನು ಯಾವಾಗ ನೇಮಕ ಮಾಡಲಾಗುವುದು ;

(ಇ) ಇತ್ತೀಚೆಗೆ ಹೃದಯಾಘಾತ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಹೃಯದ ಸಂಬಂಧಿ ಖಾಯಿಲೆಗೆ ನುರಿತ ವೈದ್ಯರು (Specialist) ಕಾರ್ಯನಿರ್ವಹಿಸುತ್ತಿದ್ದಾರೆಯೇ ಇಲ್ಲದಿದ್ದಲ್ಲಿ, ಹೃದಯಘಾತ ಖಾಯಿಲೆಗೆ ಸಂಬಂಧಿಸಿದ ವೈದ್ಯರನ್ನು ಯಾವಾಗ ನೇಮಕ ಮಾಡಲಾಗುವುದು ; (ನಿಖರ ಮಾಹಿತಿ ನೀಡುವುದು)

(ಈ) ಬಾಣಂತಿಯವರ ಹೆರಿಗೆಗೆ ಸಂಬಂಧಿಸಿದ ಎಷ್ಟು ಮಹಿಳಾ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ ; ಇಲ್ಲದಿದ್ದಲ್ಲಿ, ಇವರುಗಳನ್ನು ಯಾವಾಗ ನೇಮಕ ಮಾಡಲಾಗುವುದು ?

## ಬೆಂಗಳೂರು ನಗರ ಉಪವಿಭಾಗ ಇಲ್ಲಿನ ಡಿಸಿಎಫ್ ಹುದ್ದೆಗೆ ನಿಯಮಬಾಹಿರವಾಗಿ ಅಧಿಕಾರಿಯನ್ನು ನೇಮಕ ಮಾಡಿರುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯೦ (೧೦೩೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಆಡಳಿತ ನ್ಯಾಯಮಂಡಳಿ, ಬೆಂಗಳೂರು ಇವರ ಆದೇಶ ದಿನಾಂಕ:೨೩.೦೪.೨೦೨೪ರನ್ವಯ ಬೆಂಗಳೂರು ನಗರ ಉಪ ವಿಭಾಗ, ಬೆಂಗಳೂರು ಇಲ್ಲಿನ ಡಿ.ಸಿ.ಎಫ್ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್.ಎಫ್.ಎಸ್ ಅಧಿಕಾರಿಯು ನಿಯಮಾನುಸಾರ ಅನರ್ಹರೆಂದು ತಿಳಿಸಿ ಅವರನ್ನು ಕೂಡಲೇ ಬದಲಾಯಿಸಿ ಸದರಿ ಹುದ್ದೆಗೆ ಅರ್ಹ ಅಧಿಕಾರಿಯನ್ನು ನೇಮಿಸುವಂತೆ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ ಸದರಿ ಅಧಿಕಾರಿಯನ್ನು ಈ ರೀತಿ ಕಾನೂನು ಬಾಹಿರವಾಗಿ ನೇಮಿಸಲು ಕಾರಣಗಳೇನು ; (ವಿವರ ನೀಡುವುದು)

(ಇ) ಕೇಂದ್ರ ಆಡಳಿತ ನ್ಯಾಯಮಂಡಳಿ ಬೆಂಗಳೂರು ಇವರ ಆದೇಶ ದಿನಾಂಕ:೨೩.೦೪.೨೦೨೪ರನ್ವಯ ನಾಲ್ಕು ವಾರಗಳ ಗಡುವು ನೀಡಿದ್ದರೂ ಇದುವರೆವಿಗೂ ಸದರಿ ಅಧಿಕಾರಿಯನ್ನು ಬದಲಾವಣೆ ಮಾಡದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಈ) ಸದರಿ ಅಧಿಕಾರಿಯನ್ನು ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಯಿಂದ ಬಿಡುಗಡೆಗೊಳಿಸಲಾಗುವುದು ?

## ಆಯುಷ್ ಇಲಾಖೆಯಲ್ಲಿ ತಜ್ಞ ವೈದ್ಯರುಗಳ ಹುದ್ದೆಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯೧ (೧೦೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯಲ್ಲಿ ವೈದ್ಯರುಗಳು ಕರ್ತವ್ಯ ಮತ್ತು ಜವಾಬ್ದಾರಿಗಳು, ಅಲೋಪತಿ ಪದ್ದತಿಯ ಇಲಾಖೆಯು ವೈದ್ಯರುಗಳು ಕರ್ತವ್ಯ ಮತ್ತು ಜವಾಬ್ದಾರಿಗಳು ಅಜ ಗಜಾಂತರ ವ್ಯತ್ಯಾಸವಿದ್ದರೂ ಸಹ ಏಕ ರೂಪದ ವೇತನ ಭತ್ಯೆ ನೀಡುತ್ತಿರುವುದು ಸಮಂಜಸವೇ ;

(ಆ) ಆಯುಷ್ ಇಲಾಖೆಯಲ್ಲಿ ತಜ್ಞ ವೈದ್ಯರುಗಳ ಹುದ್ದೆಯು ಇಲ್ಲದೆ ಮೇಲೆ ಸ್ನಾತ್ತಕೋತ್ತರ ಭತ್ಯೆ ಯಾವ ಆಧಾರದ ಮೇಲೆ ನೀಡಲಾಗುತ್ತದೆ ;

(ಇ) ಸ್ನಾತ್ತಕೋತ್ತರ ಭತ್ಯೆಯನ್ನು ತಜ್ಞ ವಿಷಯಗಳಲ್ಲಿ ವೈದ್ಯಕೀಯ ಸೇವೆ ನೀಡುತ್ತಿರುವ ವೈದ್ಯರುಗಳಿಗೆ ಆರೋಗ್ಯ ಇಲಾಖೆಯಲ್ಲಿ ನೀಡುತ್ತಿದ್ದು ತಜ್ಞತೆ ಹುದ್ದೆಗಳು ಇಲ್ಲದ ಆಯುಷ್ ವೈದ್ಯರಿಗೆ ಸ್ನಾತ್ತಕೋತ್ತರ ಭತ್ಯೆಯನ್ನು ನೀಡುತ್ತಿರುವುದು ನಿಯಮಗಳಿಗೆ ವಿರುದ್ಧವಾದುದ್ದಲ್ಲವೇ ;

(ಈ) ನಿಯಮಬಾಹಿರವಾಗಿದ್ದಲ್ಲಿ, ಆಯುಷ್ ಇಲಾಖೆಯಲ್ಲಿ ಎಷ್ಟು ವೈದ್ಯರುಗಳಿಗೆ ಯಾವಾಗಿನಿಂದ ಸ್ನಾತ್ತಕೋತ್ತರ ಭತ್ಯೆಯನ್ನು ಎಷ್ಟು ನೀಡಲಾಗಿದೆ; ನೀಡಲಾದ ಸ್ನಾತ್ತಕೋತ್ತರ ಭತ್ಯೆಯನ್ನು ಹಿಂಪಡೆಯಲು ಸರ್ಕಾರದ ಕ್ರಮಗಳೇನು ?

## ಕೊಡಗು ಜಿಲ್ಲೆಯ ಅರಣ್ಯ ಭೂಮಿಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೨ (೧೦೧೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಅರಣ್ಯ ಭೂಮಿಯ ವಿಸ್ತೀರ್ಣ ಎಷ್ಟು ; ಇದರಲ್ಲಿ ಸಾಮಾಜಿಕ ಅರಣ್ಯ, ಮೀಸಲು ಅರಣ್ಯ, ಡೀಮ್ಡ್ ಪರಿಭಾವಿತ ಅರಣ್ಯ ಪ್ರದೇಶ ಎಷ್ಟು ; (ತಾಲ್ಲೂಕುವಾರು ಅರಣ್ಯ ವಿಧದ ಪ್ರಕಾರ ವಿಸ್ತೀರ್ಣ ನೀಡುವುದು)

(ಆ) ಸದರಿ ಅರಣ್ಯಗಳನ್ನು ಭೂ ಮಾಪನ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಯಾವ ವರ್ಷ ಮಾಡಲಾಗಿದೆ ; ಮಾಡದೆ ಇದ್ದಲ್ಲಿ ಕಾರಣವೇನು ; ಯಾವ ಕಾಲಮಿತಿಯೊಳಗೆ ಭೂ ಮಾಪನ ಮಾಡಲಾಗುವುದು ;

(ಇ) ಸದರಿ ಭೂಮಿಯಲ್ಲಿ ಒತ್ತುವರಿಯಾಗಿರುವ ವಿಸ್ತೀರ್ಣ ಎಷ್ಟು ; ಒತ್ತುವರಿಯಾದ ಅರಣ್ಯ ಪ್ರದೇಶದ ಒತ್ತುವರಿದಾರರ ವಿವರ ನೀಡುವುದು ; (ತಾಲ್ಲೂಕುವಾರು ಮತ್ತು ಗ್ರಾಮವಾರು ವಿವರ ನೀಡುವುದು)

(ಈ) ಸಾಮಾಜಿಕ ಅರಣ್ಯ, ಮೀಸಲು ಅರಣ್ಯ, ಡೀಮ್ಡ್ ಅರಣ್ಯಗಳಲ್ಲಿ ಅರಣೀಕರಣ ಮಾಡಲಾಗಿದೆಯೇ ; ಮಾಡಲಾಗಿದ್ದರೆ ಕಳೆದ ಹತ್ತು ವರ್ಷಗಳಲ್ಲಿ ಅರಣ್ಯಕರಣಕ್ಕೆ ಮಾಡಲಾದ ವೆಚ್ಚವೆಷ್ಟು ; ಯಾವ ಪ್ರಭೇದದ ಗಿಡಗಳನ್ನು ನೆಡಲಾಗಿದೆ ? (ವರ್ಷವಾರು, ಅರಣ್ಯವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯ ಅರಣ್ಯ ಇಲಾಖೆಯ ಕಾಮಗಾರಿಗಳಿಗೆ ಹಂಚಿಕೆಯಾದ ಅನುದಾನದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩ (೧೦೧೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯ ಅರಣ್ಯ ಇಲಾಖೆಗೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಹಂಚಿಕೆಯಾದ ಯೋಜನೆ ಮತ್ತು ಯೋಜನೇತರ ಅನುದಾನ ಎಷ್ಟು ; (ಕ್ರಿಯಾ ಯೋಜನೆಯೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೨೪–೨೫ನೇ ಸಾಲಿನಲ್ಲಿ ಸಾಮಾಜಿಕ ಅರಣ್ಯ ವಲಯ ಮತ್ತು ವನ್ಯಜೀವಿ ಅರಣ್ಯ ವಲಯಕ್ಕೆ ಹಂಚಿಕೆಯಾದ ಅನುದಾನದ ಮೊತ್ತವೆಷ್ಟು ; ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕೈಗೊಳ್ಳಲಾದ ಪ್ರತಿಯೊಂದು ಕಾಮಗಾರಿಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಈ ಎಲ್ಲಾ ಕಾಮಗಾರಿಗಳನ್ನು ನಿರ್ವಹಿಸಿದ ಮತ್ತು ನಿರ್ವಹಿಸುತ್ತಿರುವ ಇಲಾಖೆ/ಸಂಸ್ಥೆ/ಗುತ್ತಿಗೆದಾರರ ವಿವರದೊಂದಿಗೆ ಪ್ರತಿ ಕಾಮಗಾರಿಗೆ ವೆಚ್ಚ ಮಾಡಿರುವ ಮೊತ್ತದ ವಿವರವನ್ನು ತಾಲ್ಲೂಕುವಾರು ನೀಡುವುದು ;

(ಈ) ಅರಣ್ಯ ಇಲಾಖೆಗೆ ಸಂಬಂಧಿಸಿದ ಕಾಮಗಾರಿಗಳ ಗುತ್ತಿಗೆಯನ್ನು ಪಡೆಯಲು ಇರುವ ಮಾನದಂಡಗಳೇನು ; ಗುತ್ತಿಗೆ ಪರವಾನಿಗೆಯನ್ನು ಪಡೆಯುವ ಪ್ರಕ್ರಿಯೆ ಏನು ? (ಮಾಹಿತಿ ನೀಡುವುದು)

## ಹುದ್ದೆಯಾಧಾರಿತ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸುವ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪ (೧೦೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಜ್ಯೇಷ್ಠತಾ ಪಟ್ಟಿಯನ್ನು ಸಮಯೋಚಿತವಾಗಿ ಪ್ರಕಟಿಸುವಲ್ಲಿ ಮತ್ತು ಮುಂಬಡ್ತಿ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ನಿಯಮಗಳ ಆಧಾರದಲ್ಲಿ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ ಮತ್ತು ಮುಂಬಡ್ತಿ ನೀಡಲಾಗುತ್ತಿದೆ ; (ಅವುಗಳ ಆದೇಶದ ಪ್ರತಿಗಳನ್ನು ನೀಡುವುದು)

(ಆ) ಸರ್ಕಾರಿ ಆದೇಶ ಸಂ: ಸಿಆಸುಇ/೧೦೬/ಸನೆನಿ/೨೦೨೧, ದಿನಾಂಕ:೧೦/೧೨/೨೦೨೧ರ ಆದೇಶದ ಅನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಆದೇಶವನ್ನು ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ ; (ಮಾಹಿತಿ ನೀಡುವುದು)

(ಇ) ಸದರಿ ಆದೇಶದೊಂದಿಗೆ ನೀಡಲಾದ ಅನುಬಂಧಗಳನ್ವಯ ಹಾಗೂ ದಿನಾಂಕ:೧೯/೧೧/೨೦೨೪ ರಂದು ಸಿ.ಆ.ಸು ಇಲಾಖೆಯ ಸೂಚನೆಗಳನ್ವಯ ದಿನಾಂಕ:೦೧/೦೧/೨೦೨೫ಕ್ಕೆ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸುವ ಕುರಿತು ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಆದೇಶಗಳ ಅನ್ವಯ ದಿನಾಂಕ:೦೧/೦೧/೨೦೨೫ಕ್ಕೆ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗುವುದೇ ; ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸದೇ ಇದ್ದಲ್ಲಿ ಕಾರಣಗಳೇನು ; ಸಮಯೋಚಿತವಾಗಿ ಮತ್ತು ಸಿಆಸು ಇಲಾಖೆಯ ಆದೇಶ ಮತ್ತು ಸುತ್ತೋಲೆಗಳ ಅನ್ವಯ ಪ್ರಕಟಿಸುವ ಕುರಿತು ಸರ್ಕಾರದ ನಿಲುವೇನು ;

ದಿನಾಂಕ:೦೧/೦೧/೨೦೨೫ಕ್ಕೆ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೫ (೧೦೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸರ್ಕಾರಿ ಮತ್ತು ಪರವಾನಗಿ ಪಡೆದಿರುವ ಖಾಸಗಿ ಡಯಾಲಿಸಿಸ್ ಕೇಂದ್ರಗಳೆಷ್ಟು ; (ಮಾಹಿತಿ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ಡಯಾಲಿಸಿಸ್‌ಗೆ ಒಳಗಾಗುವರ ಸಂಖ್ಯೆ ಹೆಚ್ಚಾಗುತ್ತಿದ್ದು, ಹೊಸದಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಎಲ್ಲೆಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಕ್ರಮಕೈಗೊಳ್ಳಲಾಗುವುದು ;

(ಇ) ಸದರಿ ಜಿಲ್ಲೆಗಳಲ್ಲಿ ಎಷ್ಟು ಜನೌಷಧಿ ಕೇಂದ್ರಗಳಿವೆ ಹಾಗೂ ಹೊಸದಾಗಿ ಜನೌಷಧಿ ಕೇಂದ್ರಗಳನ್ನು ತೆರೆಯುವಂತೆ ಸರ್ಕಾರದ ಮುಂದೆ ಬೇಡಿಕೆಗಳಿವೆಯೇ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಪಡಿತರ ಚೀಟಿಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೬ (೧೦೧೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಇರುವ ಸರ್ಕಾರ ರಚನೆಯಾದ ಮೇಲೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಬಿ.ಪಿ.ಎಲ್ ಪಡಿತರ ಚೀಟಗಳನ್ನು ನೀಡಲಾಗಿದೆ ; (ಮಾಹಿತಿ ನೀಡುವುದು)

(ಆ) ಸಾರ್ವಜನಿಕರಿಂದ ಹೊಸ ಬಿ.ಪಿ.ಎಲ್ ಪಡಿತರ ಚೀಟಿಗಳಿಗೆ ಬೇಡಿಕೆ ಕೇಳಿ ಬರುತ್ತಿದ್ದು, ಹೊಸ ಬಿ.ಪಿ.ಎಲ್ ಪಡಿತರ ಚೀಟಿ ನೀಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಹೊಸ ಬಿ.ಪಿ.ಎಲ್ ಪಡಿತರ ಚೀಟಿ ನೀಡಲು ಸರ್ಕಾರ ಅನುಸರಿಸುವ ಮಾನದಂಡಗಳೇನು ;

(ಈ) ಅನರ್ಹ ಫಲಾನುಭವಿಗಳಿಗೆ ಬಿ.ಪಿ.ಎಲ್ ಪಡಿತರ ಚೀಟಿ ನೀಡಿದ್ದು, ಅರ್ಹ ಫಲಾನುಭವಿಗಳು ಬಿ.ಪಿ.ಎಲ್ ಪಡಿತರ ಚೀಟಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಿ.ಪಿ.ಎಲ್ ಪಡಿತರ ಚೀಟಿಯಿಂದ ವಂಚಿತರಾಗಿರುವ ಫಲಾನುಭವಿಗಳ ಬಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಆರೋಗ್ಯ ಕೇಂದ್ರ್ರಗಳಲ್ಲಿ ಔಷಧಿ ಕೊರತೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೭ (೧೦೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರಾಥಮಿಕ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಅಗತ್ಯ ಔಷಧಿಗಳು ಲಭ್ಯವಿಲ್ಲದೆ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳಿಗೆ ಸಮರ್ಪಕವಾಗಿ ಔಷಧಿಗಳನ್ನು ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಪ್ರಾಥಮಿಕ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಅಗತ್ಯ ಔಷಧಿಗಳು ಲಭ್ಯವಿಲ್ಲದೆ ರೋಗಿಗಳು ಖಾಸಗಿ ಔಷಧಿ ಅಂಗಡಿಗಳಿಂದ ಔಷಧಿ ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿರುವ ಆರೋಗ್ಯ ಕೇಂದ್ರಗಳಿಗೆ ಅಗತ್ಯವಿರುವ ಔಷಧಿಗಳನ್ನು ಕಾಲಕಾಲಕ್ಕೆ ಪೂರೈಕೆ ಮಾಡದಿರಲು ಕಾರಣಗಳೇನು ; ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮಕೈಗೊಳ್ಳಲಾಗುವುದು ?

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಬಾಹ್ಯ ಪರೀಕ್ಷಾ ಕೇಂದ್ರ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೮ (೧೧೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಬಾಹ್ಯ ಪರೀಕ್ಷಾ ಕೇಂದ್ರದ ಹೆಸರಿನಲ್ಲಿ ಆರ್ಥಿಕ ದುರುಪಯೋಗ ಮಾಡಿಕೊಂಡಿರುವ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ಗೌರವಾನ್ವಿತ ರಾಜ್ಯಪಾಲರು ೦೯.೦೯.೨೦೨೪ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಆನಂದ ಬೈರಾರೆಡ್ಡಿ ರವರ ಸಮಿತಿ ರಚಿಸಿದ್ದು, ಸಮಿತಿಯ ವರದಿ ಸರ್ಕಾರಕ್ಕೆ ಸ್ವೀಕೃತವಾಗಿದೆಯೇ ;

(ಆ) ಈ ಹಗರಣದ ಆಪಾದಿತರ ವಿರುದ್ಧ ಜರುಗಿಸಲಾಗಿರುವ ಕಾನೂನು ಮತ್ತು ಇಲಾಖಾ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಹಗರಣದ ಬಗ್ಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಮತ್ತು ವ್ಯವಸ್ಥಾಪನಾ ಮಂಡಳಿಯು ತೆಗೆದುಕೊಂಡಿರುವ ತೀರ್ಮಾನಗಳೇನು ; (ನಡವಳಿಗಳ ವಿವರ ನೀಡುವುದು)

(ಈ) ಇದೇ ಹಗರಣದಲ್ಲಿ ಅಪಾಧಿತರ ವಿರುದ್ಧ ಮುಂದಿನ ಕಾನೂನು ಕ್ರಮ ಜರುಗಿಸಲು ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಇವರು ೧೭.೧೧.೨೦೧೩ ರಲ್ಲಿ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ ೧೯೮೮ ಸೆಕ್ಷನ್–೧೭(a) ರಂತೆ ಕೋರಿರುವ ಪೂರ್ವಾನುಮತಿಯ ಮನವಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಆರ್ಥಿಕ ಹಗರಣದ ಸಂಬಂಧ ಆಡಿಟ್ ವರದಿ ಸರ್ಕಾರಕ್ಕೆ ಸ್ವೀಕೃತವಾಗಿದೆಯೇ ; ವರದಿಯಂತೆ ಯಾವ ಕ್ರಮ ಜರುಗಿಸಗಿಲಾಗಿದೆ ಹಗರಣದಿಂದ ಸಾರ್ವಜನಿಕ ನಿಧಿ ಪೋಲಾಗಿದ್ದನ್ನು ನಷ್ಟ ವಸೂಲಿಗೆ ಸರ್ಕಾರದಿಂದ ಆ ವಿಶ್ವವಿದ್ಯಾಲಯದ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ; ಸರ್ಕಾರದ ವಿಶ್ವವಿದ್ಯಾಲಯವು ಖಾಸಗಿ ಬ್ಯಾಂಕುಗಳಲ್ಲಿ ಖಾತೆ ತೆರೆಯಲು ಅವಕಾಶವಿದೆಯೇ ; (ವಿವರ ನೀಡುವುದು)

(ಊ) ಸದರಿ ಪ್ರಕರಣದ ಬಗ್ಗೆ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು ? (ವರದಿಯ ಬಗ್ಗೆ ಮಾಹಿತಿ ಒದಗಿಸುವುದು)

## ರಾಯಚೂರು ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯ (೧೦೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಅಗತ್ಯವಿರುವ ವೈದ್ಯರ ಸಂಖ್ಯೆ ಎಷ್ಟು ;

(ಆ) ಗ್ರಾಮೀಣ ಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ;

(ಇ) ಗ್ರಾಮೀಣ ಪ್ರದೇಶದ ಆಸ್ಪತ್ರೆಗಳಲ್ಲಿ ಸಾಮಾನ್ಯ ಔಷಧಿಗಳು ದೊರೆಯುತ್ತವೆಯೇ ; ಆಸ್ಪತ್ರೆಗಳಲ್ಲಿ ದೊರೆಯುವ ಔಷಧಿಗಳ ಕುರಿತು ಫಲಕಗಳನ್ನು ಅಳವಡಿಸಲಾಗಿದೆಯೇ ; ಅವು ಯಾವುವು ?

## ರಾಯಚೂರು ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೦ (೧೦೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಶಾಲಾ ಮಕ್ಕಳಿಗೆ ಅವಶ್ಯಕವಾಗಿ ಬೇಕಾದ ಜ್ಞಾನ ಕೌಶಲ್ಯಗಳು ಮತ್ತು ಮೌಲ್ಯಗಳನ್ನು ಹೆಚ್ಚಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕಾರ್ಯಯೋಜನೆಗಳೇನು ;

(ಇ) ಶಾಲಾ ಮಕ್ಕಳ ದಾಖಲಾತಿ ಮತ್ತು ಹಾಜರಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳು ಸಫಲತೆಯನ್ನು ಕಂಡು ಕೊಂಡಿದೆಯೇ ; ಹಾಗಿದ್ದಲ್ಲಿ, ವಿವರವಾದ ಅಂಕಿ–ಅಂಶಗಳೊಂದಿಗೆ ಮಾಹಿತಿ ನೀಡುವುದು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O262/500 ಪ್ರತಿಗಳು/10–03–2025